ಸಂಪುಟ: ೦೬/ ಸಂಚಿಕೆ: ೨೪೨/ಶನಿವಾರ ದಿನಾಂಕ: ೨೩-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 242/ SATURDAY Date : 23-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ॥ ಸಪ್ತಮಿಷಿವಾಣಿ ॥

ಬದುಕಿನಲ್ಲಿ ಕೆಲವರು ನಿಮಗೆ ಸಹಾಯ ಮಾಡಲು ಕರೆಯದೆ ಓಡಿ ಬಂದು ಸಹಾಯ ಮಾಡುತ್ತಾರೆಂದರೆ ಇದರ ಅರ್ಥ ಅವರಿಗೆ ಬೇರೆ ಕೆಲಸವಿಲ್ಲ ಅಂದರ್ಥವಲ್ಲ ಅವರಿಗೆ ನೋವಿನ ಬೆಲೆ ಮಾನವೀಯತೆಯ ಬೆಲೆ ತಿಳಿದಿದೆ ಎಂದರ್ಥ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ನ.24 ರಂದು ವಿದ್ಯುತ್ ವ್ಯತ್ಯಯ

**ಬೆಳಗಾವಿ** : ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ನೆಹರು ನಗರ ಉಪಕೇಂದ್ರದಲ್ಲಿ ನ.24 ರಂದು ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದ-ರಿಂದ 33 ಕೆ.ವ್ಹಿ. ಸದಾಶಿವ ನಗರ ಉಪಕೇಂದ್ರದಿಂದ ವಿತರಣೆಯಾಗುವ ಹಿಂಡಲಗಾ, ಕಂಗ್ರಾಳಿ ಕೆ.ಎಚ್, ಅಲತಗಾ, ಅಂಬೇವಾಡಿ. ಮತ್ತು ವಡಗಾಂವ ಉಪಕೇಂದ್ರದಿಂದ ಸರಬರಾಜು ಆಗುವ ಧಾಮನೆ, ಕುರುಬರಹಟ್ಟಿ, ಮಾಸ್ಯಾನಟ್ಟಿ, ದೇವಗ್ಯಾನಟ್ಟಿ, ಔಚಾರಟ್ಟಿ, ಯರಮಾಳ, ಯಳ್ಳೂರ, ಸುಳಗಾ, ರಾಜಹಂಸಗಡ, ದೇಸೂರ, ನಂದಿಹಳ್ಳಿ, ಕೊಂಡಸಕೊಪ್ಪ, ಹಲಗಾ ಹಾಗೂ ಬಸ್ತವಾಡ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಗ್ರಾಮೀಣ ವಿಭಾಗದ ಕಾರ್ಯ ಮತ್ತು ಪಾಲನಾ, ಹುವಿಕವಿಕಂನಿ, ಕಾರ್ಯನಿರ್ವಾಹಕ ಇಂಜನೀಯರರು(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ. 25 ರಂದು ವಿದ್ಯುತ್ ವ್ಯತ್ಯಯ

**ಬೆಳಗಾವಿ** : ಕ.ವಿ.ಪ್ರ.ನಿ.ನಿ. ವತಿಯಿಂದ ಮೂರನೇಯ ತ್ರೈಮಾಸಿಕ ನಿರ್ವಹಣೆ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದ-ರಿಂದ ನ.25 ರಂದು ಬೆಳಿಗ್ಗೆ 9 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ 110 ಕೆ.ವ್ಹಿ. ಉಚಗಾಂವ ಉಪಕೇಂದ್ರದಿಂದ ವಿತರಣೆಯಾಗುವ ಬಿಜಗರ್ಣಿ, ಬೋಕಮೂರ, ಕವಳೇವಾಡಿ, ಬೆಳವಟ್ಟಿ, ಬಾಕನೂರ, ಬೆಳಗುಂದಿ, ಸೋನೋಲಿ, ಎಳೆಬೈಲ, ರಾಕಸಕೊಪ್ಪ, ಕುದ್ರೇಮನಿ, ಕಲ್ಲೇಹೋಳ, ಬೆಳಗುಂದಿ ಇಂಡಸ್ಟ್ರೀಯಲ್ ಏರಿಯಾ, ಉಚಗಾಂವ, ಬಸುರ್ತೆ, ಬೆಕ್ಕಿನಕೇರಿ, ಸುಳಗಾ, ತುರಮುರಿ, ಕೋಣೇವಾಡಿ, ಬಾಚಿ, ಬೆನಕನಹಳ್ಳಿ, ಸಾವಗಾಂವ, ಮಂಡೋಳಿ, ಹಂಗರಗಾ, ಅಂಗಡಿ ಕಾಲೇಜ್, ಗಣೇಶಪೂರ, ಮಹಾಲಕ್ಷ್ಮೀ ನಗರ, ಆರ್ಮಿ ಕಾಲನಿ, ಕೆ.ಎಚ್.ಬಿ. ಲೇಔಟ್, ಬೆನಕನಹಳ್ಳಿ ಹಾಗೂ ಹಿಂಡಲಗಾ ಉಪಕೇಂದ್ರದಿಂದ ವಿತರಣೆಯಾಗುವ ಹಿಂಡಲಗಾ ಪಂಪ್‌ಹೌಸ್, ಗಣೇಶಪೂರ, ಹಿಂಡಲಗಾ, ಮನ್ನೂರ, ಸರಸ್ವತಿ ನಗರ, ಲಕ್ಷ್ಮೀ ನಗರ, ವಿಜಯ ನಗರ, ಡಿಫೆನ್ಸ್, ಕಾಲನಿ, ಕ್ರಾಂತಿ ನಗರ, ಮಾಸ್ತಿ ನಗರ, ಶಿವಂ ನಗರ, ಗೋಜಗಾ ಹಾಗೂ ಅಂಬೇವಾಡಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಗ್ರಾಮೀಣ ವಿಭಾಗದ ಕಾರ್ಯ ಮತ್ತು ಪಾಲನಾ, ಹುವಿಕವಿಕಂನಿ, ಕಾರ್ಯನಿರ್ವಾಹಕ ಇಂಜನೀಯರರು(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆ-ಸೆಟ್ ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತ ನಿಷೇಧಾಜ್ಞೆ ಜಾರಿ

**ಬೆಳಗಾವಿ** : ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವತಿಯಿಂದ ಜರುಗಲಿರುವ ಕೆ-ಸೆಟ್ 2024(ಏಖಇಖ) ಸಹಾಯಕ ಪ್ರಾಧ್ಯಾಪಕರ ಸ್ಪರ್ಧಾತ್ಮಕ ಪರೀಕ್ಷೆಯನ್ನು ನ.24 ಬೆಳಿಗ್ಗೆ 10 ರಿಂದ ಮದ್ಯಾಹ್ನ 1 ಗಂಟೆವರೆಗೆ ಸಾಮಾನ್ಯ ಪ್ರವೇಶ ಪರೀಕ್ಷೆಯು ಬೆಳಗಾವಿ ನಗರದಲ್ಲಿ 14 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಿಸಲಾಗುತ್ತಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಪೊಲೀಸ್ ಕಮೀಷನರ್ ಯಡಾ ಮಾರ್ಟಿನ್ ಮಾರ್ಬನ್ಯಾಂಗ ಅವರು ಆದೇಶ ಹೊರಡಿಸಿರುತ್ತಾರೆ.

## ನ.25 ರಿಂದ ಡಿ. 05 ವರೆಗೆ ಜಾನುವಾರುಗಳಿಗೆ ಲಸಿಕಾ ಕಾರ್ಯಕ್ರಮ

**ಬೆಳಗಾವಿ** : ಜಿಲ್ಲೆಯಾದ್ಯಂತ ರೋಗ ನಿಯಂತ್ರಣ ಮುಂಜಾಗ್ರತ ಕ್ರಮವಾಗಿ 3 ತಿಂಗಳಿಗೆ ಮೇಲ್ಪಟ್ಟ 1 ವರ್ಷದ ಒಳಗಿನ ಕರುಗಳಿಗೆ, ಗರ್ಭಧರಿಸಿದ ದನಗಳಿಗೆ, ಈ ಹಿಂದೆ ಲಸಿಕೆ ಹಾಕದ ದನಗಳಿಗೆ ಹಾಗೂ ರೋಗ ಹರಡುವ ಸಾಧ್ಯತೆ ಇರುವ ಎಲ್ಲ ದನಗಳಿಗೆ ಕಡ್ಡಾಯವಾಗಿ ಲಸಿಕೆ ಹಾಕಲು ಪಶು ಸಂಗೋಪನಾ ಇಲಾಖಾಧಿಕಾರಿಗಳು ನವೆಂಬರ್ 25 ರಿಂದ ಡಿಸೆಂಬರ್ 5 ವರಗೆ ರೈತರ ಮನೆ ಬಾಗಿಲಿಗೆ ತೆರಳಿ ಲಸಿಕೆ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಚರ್ಮ ಗಂಟು ರೋಗ ಲಕ್ಷಣಗಳು ಕಂಡು ಬಂದ ಕೂಡಲೇ ರೋಗಗ್ರಸ್ಥ ಜಾನುವಾರುಗಳನ್ನು ಪ್ರತ್ಯೇಕಿಸುವುದ, ರೋಗದಿಂದ ಬಾಧಿತ ಜಾನುವಾರುಗಳಿಗೆ ಹತ್ತಿರದ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಚಿಕಿತ್ಸೆ ಕೊಡಿಸುವುದು, ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಔಷಧಿಗಳನ್ನು 5 ದಿನಗಳ ವರಗೆ ನೀಡುವುದು, 3 ತಿಂಗಳ ಮೇಲ್ಪಟ್ಟ ಜಾನುವಾರುಗಳಿಗೆ ಗೋಟ್ ಪಾಕ್ಸ ಲಸಿಕೆ ಹಾಕಿಸುವುದು.

ರೋಗದ ಹತೋಟಿಗಾಗಿ ರೈತರು ಸಹಕರಿಸಬೇಕೆಂದು ಪಶು ಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳಗಾವಿ ಚಳಿಗಾಲ ಅಧಿವೇಶನ : ಯಶಸ್ವಿ ಅಧಿವೇಶನ: ಸರ್ವ ಸಿದ್ಧತೆಗೆ ಜಿಲ್ಲಾಧಿಕಾರಿ ಸೂಚನೆ



**ಬೆಳಗಾವಿ** : ಪ್ರಸಕ್ತ ಸಾಲಿನ ಚಳಿಗಾಲದ ಅಧಿವೇಶನ ಯಶಸ್ವಿಯಾಗಿ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಅಧಿವೇಶನಕ್ಕೆ ಆಗಮಿಸುವ ಸಚಿವರು, ಶಾಸಕರು, ಅಧಿಕಾರಿ, ಸಿಬ್ಬಂದಿಗಳಿಗೆ ಸೂಕ್ತ ವಸತಿ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಸೂಚಿಸಿದರು.

ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ಶುಕ್ರವಾರ (ನ.22) ಜರುಗಿದ ಚಳಿಗಾಲ ಅಧಿವೇಶನ-2024 ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿವೇಶನಕ್ಕಾಗಿ ಆಗಮಿಸುವ ಸಚಿವಲಾಯದ ಸಿಬ್ಬಂದಿ, ಸರ್ಕಾರದ ಹಿರಿಯ ಅಧಿಕಾರಿ ಹಾಗೂ ಸಚಿವರುಗಳಿಗೆ ಸುವರ್ಣ ವಿಧಾನ ಸೌಧದ ಕೊಠಡಿಗಳಲ್ಲಿ ಸುಸ್ಥಿತಿಯಲ್ಲಿರುವಂತಹ ಗಣಕ ಯಂತ್ರಗಳನ್ನು ಅಳವಡಿಸುವದರ ಜೊತೆಗೆ ಅಗತ್ಯದ ಸಿಬ್ಬಂದಿಗಳನ್ನು ನಿಯೋಜಿಸಲು ತಿಳಿಸಿದರು.

ಸುವರ್ಣ ವಿಧಾನ ಸೌಧದಲ್ಲಿ ಅಂತರ್ಜಾಲದ ತೊಂದರೆ ಆಗದಂತೆ ಕಾಳಜಿ ವಹಿಸಬೇಕು. ಪ್ರತಿದಿನ ಅಧಿವೇಶನ ವೀಕ್ಷಣೆಗೆ ಆಗಮಿಸುವ ವಿದ್ಯಾರ್ಥಿಗಳಿಗೆ ಸಮರ್ಪಕ ವ್ಯವಸ್ಥೆ ಮಾಡುವಂತೆ ತಿಳಿಸಿದರು.

ವಿಧಾನ ಮಂಡಲದ ಕಲಾಪಗಳನ್ನು ವೀಕ್ಷಿಸಲು ಪ್ರವೇಶ ಪತ್ರಗಳೊಂದಿಗೆ ಆಗಮಿಸುವ ಸಾರ್ವಜನಿಕರನ್ನು ಭದ್ರತಾ ತಪಾಸಣೆಗೊಳಪಡಿಸಿ ಒಳ ಬಿಡುವ ಕಾರ್ಯವಾಗಬೇಕು ಎಂದರು.

ಅಧಿವೇಶನ ಕಾರ್ಯಕ್ಕೆ ನಿಯೋಜಿತ ಅಧಿಕಾರಿ, ಸಿಬ್ಬಂದಿ, ಸಚಿವಾಲಯದ ಸಿಬ್ಬಂದಿಗಳಿಗೆ ಸುವರ್ಣ ವಿಧಾನ ಸೌಧದಲ್ಲಿ ಪ್ರತ್ಯೇಕ ಊಟದ ವ್ಯವಸ್ಥೆಗೆ ಕ್ರಮ ವಹಿಸುವದರ ಜೊತೆಗೆ ಸೂಕ್ತ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು.

ಹತ್ತು ದಿನಗಳ ಕಾಲ ಜರುಗುವ ಅಧಿವೇಶನದಲ್ಲಿ ಪ್ರತಿದಿನ ಸಾಂಸ್ಕೃತಿ-ಕ ಕಾರ್ಯಕ್ರಮಗಳನ್ನು ಆಯೋಜಿಸಲು ಹಾಗೂ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಹಿನ್ನಲೆಯಲ್ಲಿ ಸುವರ್ಣ ವಿಧಾನ ಸೌಧದಲ್ಲಿ ಛಾಯಾಚಿತ್ರ ಪ್ರದರ್ಶನ ಏರ್ಪಡಿಸಲು ಅಗತ್ಯದ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ವಿಧಾನಸಭೆ ಕಾರ್ಯದರ್ಶಿಗಳಾದ ಎಂ.ಕೆ. ವಿಶಾಲಾಕ್ಷಿ ಅವರು ಮಾತನಾಡಿ ಬೆಳಗಾವಿಯಲ್ಲಿ ಜರುಗಲಿರುವ ಚಳಿಗಾಲ ಅಧಿವೇಶನದಲ್ಲಿ ಯಾವುದೇ ಕೊರತೆಗಳು ಆಗದಂತೆ ಎಲ್ಲ ರೀತಿಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಅಧಿವೇಶನಕ್ಕೆ ಆಗಮಿಸುವ ಸಚಿವರು, ಶಾಸಕರುಗಳಿಗೆ ಪ್ರತಿ ವರ್ಷದಂತೆ ಸಮರ್ಪಕ ವಸತಿ ವ್ಯವಸ್ಥೆ ಒದಗಿಸಲು ಕ್ರಮ ವಹಿಸಲಾಗುವದು. ಅಲ್ಲದೇ ಸಚಿವಾಲಯದ ಸಿಬ್ಬಂದಿಗಳಿಗೂ ವಸತಿ ವ್ಯವಸ್ಥೆ ಮಾಡುವಂತೆ ತಿಳಿಸಿದರು.

ಅಧಿವೇಶನ ಪ್ರಾರಂಭಕ್ಕೂ ಎರಡು ದಿನ ಮುಂಚಿತವಾಗಿ ಆಗಮಿಸುವ ಸಚಿವಾಲಯದ ಅಧಿಕಾರಿ ಸಿಬ್ಬಂದಿಗಳಿಗೆ ಊಟ ಹಾಗೂ ವಸತಿ ವ್ಯವಸ್ಥೆ ಮಾಡಲು ವಿಧಾನ ಸಭೆ ಕಾರ್ಯದರ್ಶಿಗಳಾದ ಎಂ.ಕೆ.ವಿಶಾಲಾಕ್ಷಿ ಅವರು ತಿಳಿಸಿದರು.

ಸಭೆಯಲ್ಲಿ ಪೋಲಿಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾಪೊಲಿಸ್ ವರಿಷ್ಠಾಧಿಕಾರಿ ಡಾ.ಭೀಮಾ ಶಂಕರ ಗುಳೇದ, ಜಿಲ್ಲಾಪಂಚಾಯತ ಸಿ.ಇ.ಓ ರಾಹುಲ ಶಿಂಧೆ, ಸಚಿವಾಲಯದ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

*****

## ಮೂರು ಕ್ಷೇತ್ರಗಳ ಉಪ ಚುನಾವಣೆ: ಇಂದು ಮತ ಎಣಿಕೆ

**ಬೆಂಗಳೂರು:** ಚನ್ನಪಟ್ಟಣ, ಶಿಗ್ಗಾಂವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ನ.13ರಂದು ನಡೆದ ಉಪ ಚುನಾವಣೆಯ ಮತಗಳ ಎಣಿಕೆ ಕಾರ್ಯವು ಶನಿವಾರ (ನ.23) ಬೆಳಗ್ಗೆ 8 ಗಂಟೆಯಿಂದ ಆರಂಭಗೊಳ್ಳಲಿದೆ. ಮಧ್ಯಾಹ್ನದ ವೇಳೆಗೆ ಫಲಿತಾಂಶ ಪ್ರಕಟಗೊಳ್ಳುವ ಸಾಧ್ಯತೆಯಿದೆ.

ಮತ ಎಣಿಕೆಗೆ ಅವಶ್ಯವಿರುವ ಎಲ್ಲ ವ್ಯವಸ್ಥೆಗಳನ್ನು ಮಾಡಲಾಗಿದೆ. ಇವಿಎಂ ಯಂತ್ರಗಳಲ್ಲಿ ಚಲಾವಣೆಯಾದ ಮತಗಳ ಎಣಿಕೆಗೆ ಮುನ್ನ ಅಂಚೆ ಮತ ಎಣಿಕೆ ಕಾರ್ಯ ನಡೆಯಲಿದೆ. ಅಂಚೆ ಮತ ಎಣಿಕೆಗೆ ಪ್ರತ್ಯೇಕ ಟೇಬಲ್ ವ್ಯವಸ್ಥೆ ಮಾಡಲಾಗಿದೆ.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಮತಗಳ ಎಣಿಕೆಯು ರಾಮನಗರ ಜಿಲ್ಲೆಯ ಸರಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆಯಲಿದೆ. ಒಟ್ಟು 15 ಟೇಬಲ್‌ನಲ್ಲಿ ಮತಗಳ ಎಣಿಕೆ ನಡೆಯಲಿದೆ. ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಮತಗಳ ಎಣಿಕೆಯು ಹಾವೇರಿ ಜಿಲ್ಲೆಯ ದೇವಗಿರಿಯಲ್ಲಿರುವ ಸರಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ 14 ಟೇಬಲ್ ಗಳಲ್ಲಿ ಮತಗಳ ಎಣಿಕೆ ನಡೆಯಲಿದೆ.

ಸಂಡೂರು ವಿಧಾನಸಭಾ ಕ್ಷೇತ್ರದ ಮತಗಳ ಎಣಿಕೆಯು ಬಳ್ಳಾರಿ ಜಿಲ್ಲೆಯ



ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 14 ಟೇಬಲ್ ಗಳಲ್ಲಿ ಮತಗಳ ಎಣಿಕೆ ಕಾರ್ಯ ನಡೆಯಲಿದೆ.

ಶಿಗ್ಗಾಂವಿ ಕ್ಷೇತ್ರದ ಮತ ಎಣಿಕೆ ಕಾರ್ಯಕ್ಕಾಗಿ ಒಬ್ಬ ಚುನಾವಣಾಧಿಕಾರಿ, ಇಬ್ಬರು ಸಹಾಯಕ ಚುನಾವಣಾಧಿಕಾರಿ, 19 ಸೂಕ್ಷ್ಮ ವೀಕ್ಷಕರು, 17 ಎಣಿಕೆ ಮೇಲ್ವಿಚಾರಕರು ಹಾಗೂ 18 ಎಣಿಕೆ ಸಹಾಯಕರನ್ನು ನಿಯೋಜಿಸಲಾಗಿದೆ.

ಸಂಡೂರು ಕ್ಷೇತ್ರದ ಮತ ಎಣಿಕೆ ಕಾರ್ಯಕ್ಕಾಗಿ ಒಬ್ಬ ಚುನಾವಣಾಧಿಕಾರಿ, ಒಬ್ಬ ಸಹಾಯಕ ಚುನಾವಣಾಧಿಕಾರಿ, 20 ಸೂಕ್ಷ್ಮ ವೀಕ್ಷಕರು, 19 ಎಣಿಕೆ ಮೇಲ್ವಿಚಾರಕರು ಹಾಗೂ 21 ಎಣಿಕೆಯ ಸಹಾಯಕರುಯನ್ನು ನಿಯೋಜಿಸಲಾಗಿದೆ. ಅದೇ ರೀತಿ, ಚನ್ನಪಟ್ಟಣ ಕ್ಷೇತ್ರದ ಮತ ಎಣಿಕೆ ಕಾರ್ಯಕ್ಕಾಗಿ ಒಬ್ಬ ಚುನಾವಣಾಧಿಕಾರಿ, ಒಬ್ಬ ಸಹಾಯಕ ಚುನಾವಣಾಧಿಕಾರಿ, ಒಬ್ಬ ಹೆಚ್ಚುವರಿ ಸಹಾಯಕ ಚುನಾವಣಾಧಿಕಾರಿ, 30 ಸೂಕ್ಷ್ಮ ವೀಕ್ಷಕರು, 30 ಎಣಿಕೆ ಮೇಲ್ವಿಚಾರಕರು ಹಾಗೂ 30 ಎಣಿಕೆಯ ಸಹಾಯಕರನ್ನು ನಿಯೋಜಿಸಲಾಗಿದೆ.

ಮೊಬೈಲ್ ಫೋನ್ ಮೇಲಿನ ನಿಬರ್‌ಂಧಗಳು: ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ವೀಕ್ಷಕರನ್ನು ಹೊರತುಪಡಿಸಿ ಬೇರೆ ಯಾವುದೇ ವ್ಯಕ್ತಿಗಳು ಮತ ಎಣಿಕೆ ಸಭಾಂಗಣದ ಒಳಗೆ ಮೊಬೈಲ್ ಫೋನ್ ಕೊಂಡೊಯ್ಯುವಂತಿಲ್ಲ.

ವೀಕ್ಷಕರ ಜೊತೆಗೆ, ಚುನಾವಣಾಧಿಕಾರಿ ಅಥವಾ ಸಹಾಯಕ ಚುನಾವಣಾಧಿಕಾರಿ ಅಥವಾ ಎಣಿಕೆ ಮೇಲ್ವಿಚಾರಕರು, ಅವರ ಮೊಬೈಲ್ ಫೋನ್ 'ಇಟಿಪಿಬಿ'ಗಳಿಗೆ ಲಿಂಕ್ ಮಾಡಲ್ಪಟ್ಟಿದೆ, ಅವರು ಇಟಿಪಿಬಿಗಳ ಪೂರ್ವ-ಎಣಿಕೆಯ ಉದ್ದೇಶಕ್ಕಾಗಿ, ಅಪ್ ಡೇಟ್ ಮಾಡಲು ಹಾಗೂ ಒನ್ ಟೈಮ್ ಪಾಸ್‌ವರ್ಡ್(ಒಟಿಪಿ) ಸ್ವೀಕರಿಸಲು ಮೊಬೈಲ್ ಫೋನ್ ಅನ್ನು ಒಯ್ಯಲು ಅಧಿಕಾರ ಹೊಂದಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಪ್ರಕಟಣೆಯಲ್ಲಿ ತಿಳಿಸಿದೆ.

****

## ನವಲಿ ಗ್ರಾಮದ ನೀರು ಪೂರೈಕೆ ಘಟಕಕ್ಕೆ ಸಿಇಓ ಭೇಟಿ



**ಬಾಗಲಕೋಟೆ:** ಜಲಧಾರೆ ಯೋಜನೆಯಡಿ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯಡಿ ನಿರ್ಮಿಸಲಾಗುತ್ತಿರುವ ಹುನಗುಂದ ತಾಲೂಕಿನ ನವಲಿ ಗ್ರಾಮದ ಜಾಕ್‌ವೆಲ್, ಪೂಟ್ ಬ್ರಿಡ್ಜ ಹಾಗೂ ಪಂಪ್ ಹೌಸ್ ಕಾಮಗಾರಿ ಸ್ಥಳಕ್ಕೆ ಜಿ.ಪಂ ಸಿಇಓ ಶಶಿಧರ ಕುರೇರ ಶುಕ್ರವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಹುನಗುಂದ ತಾಲೂಕಾ ಪ್ರವಾಸದ ವೇಳೆ ಭೇಟಿ ನೀಡಿದ ಸಂದರ್ಭದಲ್ಲಿ ಧನ್ನೂರ ಹಾಗೂ ಇತರೆ 8 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ನೀರು ಸಂಸ್ಕರಣಾ ಘಟಕಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡಿದರು.

ಅಲ್ಲದೇ ಕೋಡಿಹಾಳ ಗ್ರಾಮದ ಜಲಧಾರೆ ಯೋಜನೆಯಡಿ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯಡಿ ನಿರ್ಮಿಸಲಾಗುತ್ತಿರುವ ನೀರು ಸಂಸ್ಕರಣಾ ಘಟಕದ ಕಾಮಗಾರಿ ಪರಿವೀಕ್ಷಣೆ ಮಾಡಲಾಯಿತು.

***

## ಪ್ರಾಂಶುಪಾಲರು- ಉಪನ್ಯಾಸಕರು ಮಕ್ಕಳನ್ನು ಹತೋಟಿಯಲ್ಲಿಡಬೇಕು: ಸಚಿವ ಮಧು ಬಂಗಾರಪ್ಪ

**ಬೆಂಗಳೂರು:** ವಿದ್ಯಾರ್ಥಿ ತಪ್ಪು ಮಾತನಾಡಲು ಬಿಡಬಾರದಿತ್ತು. ಶಾಲೆಯ ಪ್ರಾಂಶುಪಾಲರು, ಉಪನ್ಯಾಸಕರು ಮಕ್ಕಳನ್ನು ಹತೋಟಿಯಲ್ಲಿಡಬೇಕು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಶುಕ್ರವಾರ ನಗರದಲ್ಲಿ ಕಾರ್ಯಕ್ರಮವೊಂದರಲ್ಲಿ ವಿದ್ಯಾಮಂತ್ರಿಗೆ ಕನ್ನಡ ಬರಲ್ಲ ಎಂದ ವಿದ್ಯಾರ್ಥಿ ಮೇಲೆ ಕ್ರಮಕ್ಕೆ ಸೂಚನೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು. ಆ ವಿದ್ಯಾರ್ಥಿ ವಿರುದ್ಧ ಕ್ರಮ ತೆಗೆದುಕೊಳ್ಳುವ ಬಗ್ಗೆ ನಾನು ಮಾತನಾಡಿಲ್ಲ. ಕ್ರಮ ಕೈಗೊಳ್ಳಲು ನನಗೇನು ಅಧಿಕಾರವಿದೆ ಎಂದು ಕೇಳಿದರು.

ಅಂದು ಲೈವ್ ಕಾರ್ಯಕ್ರಮದಲ್ಲಿ 50 ಸಾವಿರ ಮಕ್ಕಳು ನೋಡುತ್ತಿದ್ದರು. ಸರಕಾರದಿಂದ ಮಕ್ಕಳ ಭವಿಷ್ಯಕ್ಕೆ ಮಾಡುತ್ತಿರುವ ಒಂದು ದೊಡ್ಡ ಯೋಜನೆಯದು. ಆ ಯೋಜನೆ ಬಗ್ಗೆ ದೊಡ್ಡಮಟ್ಟದಲ್ಲಿ ಪ್ರಚಾರ ನೀಡುವ ಬದಲು ಯಾರೋ ಒಬ್ಬ ವಿದ್ಯಾರ್ಥಿ ವಿದ್ಯಾಮಂತ್ರಿಗೆ ಕನ್ನಡ ಮಾತನಾಡಲು ಬರುವುದಿಲ್ಲ ಎಂದು ಹೇಳಿದ್ದನ್ನೇ ಮಾಧ್ಯಮ ಹೈಲೈಟ್ ಮಾಡಿದೆ. ನಿಮ್ಮ ಮಕ್ಕಳು ಈ ರೀತಿ ಮಾಡಿದ್ದರೆ ಮನೆಯಲ್ಲಿ ಬುದ್ಧಿ ಹೇಳುತ್ತಿರಲಿಲ್ಲವೇ, ನಾನಾಗಿದ್ದರೆ ನನ್ನ ಮಗನಿಗೆ ಬುದ್ಧಿ ಹೇಳುತ್ತಿದ್ದೆ ಎಂದು ಮಧು ಬಂಗಾರಪ್ಪ ಹೇಳಿದರು.

ವಿದ್ಯಾರ್ಥಿ ಹೇಳಿದ್ದನ್ನು ಸಾಮಾಜಿಕ ಜಾಲತಾಣಗಳಲ್ಲಿ ಟ್ರೋಲ್ ಮಾಡಲಾಗಿದೆ. ಇಂತಹ ಟ್ರೋಲ್‌ಗಳಿಗೆಲ್ಲ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ. ಟ್ರೋಲ್ ಮಾಡಿ ನನ್ನನ್ನು ಬಗ್ಗಿಸಲು ಸಾಧ್ಯವಿಲ್ಲ. ಅಂತದ್ದಕ್ಕೆಲ್ಲ ಬಗ್ಗುವವನೂ ನಾನಲ್ಲ ಎಂದು ಮಧು ಬಂಗಾರಪ್ಪ ತಿಳಿಸಿದರು.

ಅನುದಾನ ವಿಚಾರದಲ್ಲಿ ಶಾಸಕರ ಅಸಮಾಧಾನ ವಿಚಾರವಾಗಿ ಪ್ರತಿಕ್ರಿಯಿಸಿದ ಮಧು ಬಂಗಾರಪ್ಪ, ನಮ್ಮ ಸರಕಾರ ಹೆಚ್ಚಿನ ಅನುದಾನ ಕೊಟ್ಟಿದೆ. ನಾನು ಸೊರಬಕ್ಕೆ ಹೆಚ್ಚಿನ ಬಸ್ ತಂದಿದ್ದೇನೆ. ಸಾರಿಗೆ ಇಲಾಖೆ ಹೆಚ್ಚು ಬಸ್ ಖರೀದಿಸಿದೆ. ಅನುದಾನ ಇಲ್ಲದೆ ಇದನ್ನು ಮಾಡಲು ಆಗುತ್ತಾ?, ನಮಗೆ ಯಾವ ಅಸಮಾಧಾನವೂ ಇಲ್ಲ ಎಂದರು.

## ಬೆಂಗಳೂರಿನಲ್ಲಿ 6 ಕೋಟಿ ರೂ ಮೌಲ್ಯದ ಡ್ರಗ್ಸ್ ವಶ: ಐವರ ಬಂಧನ



**ಬೆಂಗಳೂರು:** ಬೆಂಗಳೂರು ಪೊಲೀಸರು ಹಾಗೂ ಸಿಸಿಬಿ ಪೊಲೀಸರು ನಡೆಸಿದ ಪ್ರತ್ಯೇಕ ಕಾರ್ಯಾಚರಣೆಯಲ್ಲಿ ಐವರು ಆರೋಪಿಗಳನ್ನು ಬಂಧಿಸಿದ್ದು, ಸುಮಾರು ರೂ.6 ಕೋಟಿ ಮೊತ್ತದ ಮಾದಕ ವಸ್ತುವನ್ನು ವಶಕ್ಕೆ ಪಡೆದಿದ್ದಾರೆ.

ಹೊಸ ವರ್ಷಾಚರಣೆ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ಅಕ್ರಮ ಡ್ರಗ್ಸ್ ಸಾಗಣೆ ಕುರಿತು ಅನುಮಾನ ಹೊಂದಿದ್ದ ಪೊಲೀಸರು ಮೊದಲಿಗೆ ಸೊಲದೇವನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಳಿ ನಡೆಸಿದ್ದು, ಇಬ್ಬರು ವಿದೇಶಿ ಪೆಡ್ಲರ್ ಗಳಿಂದ ಮಾದಕ ವಸ್ತುಗಳಾದ ಒಆಒಂ ಕ್ರಿಸ್ಟಲ್ಸ್, ಕೊಕೇನ್ ಮತ್ತು ಎಕ್ಸ್‌ಟೆಸಿ ಪಿಲ್ಸ್ ವಶಕ್ಕೆ ಪಡೆದಿದ್ದಾರೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್,1.5 ಕೆಜಿ ಒಆಒಂ ಕ್ರಿಸ್ಟಲ್ಸ್, 202 ಗ್ರಾಂ ಕೊಕೇನ್ ಮತ್ತು 12 ಎಕ್ಸ್ ಟೆಸಿ ಪಿಲ್ಸ್, ಎರಡು ಮೊಬೈಲ್ ಫೋನ್ ವಶಕ್ಕೆ ಪಡೆದಿದ್ದೇವೆ. ಈ ಡ್ರಗ್ಸ್ ಒಟ್ಟಾರೇ ರೂ. 3 ಕೋಟಿ ಮೊತ್ತದ್ದಾಗಿದೆ. ಸಿಸಿಬಿಗೆ ದೊರೆತ ಖಚಿತ ಮಾಹಿತಿ ಆಧಾರದ ಮೇಲೆ ಇಬ್ಬರು ವಿದೇಶಿಗರನ್ನು ಬಂಧಿಸಲಾಗಿದೆ ಎಂದು ತಿಳಿಸಿದರು.

ವಿಚಾರಣೆ ವೇಳೆ ವೈದ್ಯಕೀಯ ವೀಸಾದಲ್ಲಿ ಐದು ವರ್ಷದ ಹಿಂದೆ ಭಾರತಕ್ಕೆ ಅವರು ಬಂದಿರುವುದು ತಿಳಿದುಬಂದಿದೆ. ಅವರು ಮುಂಬೈ ಮತ್ತು ದೆಹಲಿಯಲ್ಲಿ ಡ್ರಗ್ಸ್ ಮಾರಾಟದಲ್ಲಿ ತೊಡಗಿಸಿಕೊಂಡಿದ್ದರು. ಮುಂಬೈನಲ್ಲಿ ಅವರ ವಿರುದ್ಧ ದೂರು ದಾಖಲಾದ ನಂತರ ಈಗ ಬೆಂಗಳೂರಿನಲ್ಲಿ ನಿಷೇಧಿತ ಡ್ರಗ್ಸ್ ಮಾರಾಟ ಮಾಡುತ್ತಿದ್ದರು. ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ ಎಂದು ಅವರು ವಿವ-ರಿಸಿದರು.

ಎರಡನೇ ಕಾರ್ಯಾಚರಣೆಯಲ್ಲಿ ಮೂವರನ್ನು ಬಂಧಿಸಿರುವ ಪೊಲೀಸರು ಸುಮಾರು ರೂ. 3.25 ಕೋಟಿ ಮೊತ್ತದ 318 ಕೆಜಿ ಗಾಂಜಾವನ್ನು ವಶಕ್ಕೆ ಪಡೆದಿದ್ದಾರೆ. ಮಾದಕ ವಸ್ತುವನ್ನು ಓಡಿಶಾ ಮತ್ತು ಆಂಧ್ರ ಪ್ರದೇಶದಿಂದ ಬೆಂಗಳೂರಿಗೆ ತಂದು ಮಾರಾಟ ಮಾಡುತ್ತಿದ್ದರು ಎಂಬುದು ವರದಿಯಾಗಿದೆ.

ಖಚಿತ ಮಾಹಿತಿ ಮೇರೆಗೆ ಗೋವಿಂದಪುರ ಪೊಲೀಸರು, ಕಾರೊಂದರಲ್ಲಿ ಡ್ರಗ್ಸ್ ಸಾಗಟ ಮಾಡುತ್ತಿದ್ದ ಮೂವರನ್ನು ಬಂಧಿಸಿದ್ದಾರೆ. ಕಾರನ್ನು ಕೂಡಾ ಬಂಧಿಸಲಾಗಿದೆ.ಪ್ರಮುಖ ಆರೋಪಿ ಕೇರಳ ಮೂಲದವನಾಗಿದ್ದು, ಆತನ ವಿರುದ್ಧ ದರೋಡೆ, ಕೊಲೆ ಯತ್ನ, ಮಾದಕ ವಸ್ತು ಸಾಗಟ ಸೇರಿದಂತೆ ಹಲವು ಪ್ರಕರಣಗಳು ದಾಖಲಾಗಿವೆ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದರು.

# ದೇಶದ ಸಂಸ್ಕೃತಿ ಉಳಿಸಿ-ಬೆಳೆಸುವುದು ಯುವಜನರ ಜವಾಬ್ದಾರಿ

**ವಿಜಯಪುರ :** ನಮ್ಮ ದೇಶದ ಭವ್ಯವಾದ ಕಲೆ, ಸಂಸ್ಕೃತಿ, ಜಾನಪದವೂ ಸೇರಿದಂತೆ ಅನೇಕ ಕಲಾ ಪ್ರಕಾರಗಳನ್ನು ಯುವಜನತೆ ಮೈಗೂಡಿಸಿಕೊಳ್ಳುವ ಮೂಲಕ ಅವುಗಳನ್ನು ಉಳಿಸಿ ಬೆಳೆಸುವ ಜವಾಬ್ದಾ-ರಿಯಾಗಿದೆ ಎಂದು ರಾಷ್ಟ್ರ ಪ್ರಶಸ್ತಿ ವಿಜೇತ ಹಾಗೂ ರಾಷ್ಟ್ರೀಯ ಯುವಜನೋತ್ಸವ ಸಮಿತಿ ಸದಸ್ಯರಾದ ಡಾ.ಜಾವೀದ ಜಮಾದಾರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಬಿಎಲ್‌ಡಿಈ ಸಂಸ್ಥೆ, ಎ.ಎಸ್. ಪಾಟೀಲ ವಾಣಿಜ್ಯ ಮಹಾವಿದ್ಯಾಲಯ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ, ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರ ಫೆಡರೇಶನ್, ಎನ್‌ಎಸ್‌ಎಸ್ ಘಟಕ ಇವರ ಸಹಯೋಗದಲ್ಲಿ ಶುಕ್ರವಾರ ಬಿಎಲ್‌ಡಿಈ ನ್ಯೂ ಕ್ಯಾಂಪಸ್‌ನ ಎ.ಎಸ್.ಪಾಟೀಲ ವಾಣಿಜ್ಯ ಮಹಾ ವಿದ್ಯಾಲಯದಲ್ಲಿ ಆಯೋಜಿಸಲಾದ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ನೆಲದ ಕಲೆ, ಸಂಸ್ಕೃತಿ ಹಾಗೂ ಕ್ರೀಡೆಗಳು ಇಡೀ ವಿಶ್ವಕ್ಕೆ ಮಾದರಿಯಾಗಿವೆ. ಪೂರ್ವಜರಿಂದ ಬಳುವಳಿಯಾಗಿ ಬಂದಿರುವ ಸಂಸ್ಕೃತಿ-ಕಲೆಯನ್ನು ದೇಶ-ವಿದೇಶಗಳಲ್ಲಿ ಅನುಸರಿಸಲಾಗುತ್ತದೆ. ದೇಶದ ಯುವ ಜನ ಪಾಶ್ಚಾತ್ಯ ಕಾರ್ಯಕ್ರಮಗಳಿಗೆ ಮಾರು ಹೋಗದೇ, ನಮ್ಮಲ್ಲಿರುವ ಕಲೆ, ಸಂಸ್ಕೃತಿಯನ್ನು ಬೆಳೆಸುವ ಮನೋಭಾವ ಹೊಂದಬೇಕು, ಶಾಲಾ-ಕಾಲೇಜುಗಳಲ್ಲಿ ಸಹ ಸಂಸ್ಕೃತಿ, ಕಲೆಯನ್ನು ಬಿಂಬಿಸುವ ಕಾರ್ಯಕ್ರಮಗಳನ್ನು ಹೆಚ್ಚಾಗಿ ಆಯೋಜಿಸಬೇಕು. ಮಕ್ಕಳನ್ನು ಸಾಂಸ್ಕೃತಿಕವಾಗಿ ತೊಡಗಿಸಿಕೊಳ್ಳಲು ಬಾಲ್ಯದಿಂದಲೇ ಪ್ರೇರಣೆ ನೀಡಬೇಕು. ಅವರಿಗೆ ಜಾನಪದ ಕಲೆಗಳ ಅಭಿರುಚಿಯನ್ನು ಬೆಳೆಸಬೇಕು. ಯುವಕರಲ್ಲಿಯೂ ಸಹ ಈ ಕುರಿತು ಜಾಗೃತಿ ಮೂಡಿಸುವುದು ಅತ್ಯವಶ್ಯಕವಾಗಿದೆ. ಇಂದಿನ ಯುವಕರು ನಮ್ಮ ದೇಶದ ಪರಂಪರೆಯನ್ನು ಗಟ್ಟಿಗೊಳಿಸಲು, ಇವುಗಳೆಡೆಗೆ ಹೆಚ್ಚು ಒತ್ತು ನೀಡುವುದು ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಅರವಿಂದ



ಕೊಪ್ಪ ಅವರು ಮಾತನಾಡಿ, ನಮ್ಮ ಬದುಕು ಬದಲಾಯಿಸುವ ಬಹುದೊಡ್ಡ ಆಯುಧ ನಮ್ಮ ಕಲೆ ಹಾಗೂ ಸಂಸ್ಕೃತಿ, ಇವುಗಳನ್ನು ಸ್ಪರ್ಧೆಗೆ ಮಾತ್ರ ಸೀಮಿತಗೊಳಿಸದೇ ನಮ್ಮ ಬದುಕಿನ, ಜೀವನದ ಕ್ರಮವಾಗಬೇಕು. ಕಲೆ ಸಂಸ್ಕೃತಿ ದೈನಂದಿನ ಬದುಕಿನ ಭಾಗವಾಗಿಸಬೇಕು ದುಡ್ಡಿಗೆ ಮಾತ್ರ ಸೀಮಿತಗೊಳಿಸದೆ ನಮ್ಮ ಬದುಕಿನ ಭಾಗವಾಗಬೇಕು ಇಂದಿನ ಯುವಜನತೆ ನಮ್ಮ ದೇಶದ ಭವ್ಯ ಸಂಸ್ಕೃತಿ ಕಲೆಗಳಿಗೆ ಹೆಚ್ಚು ಹೊತ್ತು ನೀಡುವುದರೊಂದಿಗೆ ಸಾಂಸ್ಕೃತಿ-ಕವಾಗಿ ತೊಡಗಿಸಿಕೊಳ್ಳಬೇಕು ತೊಡಗಿಸಿಕೊಂಡು ಸೃಜನಾತ್ಮಕತೆಯನ್ನು ಹೆಚ್ಚಿಸಬೇಕು ನಮ್ಮ ಮೌಲ್ಯಧಾ-ರಿತ ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳಬೇಕು ಒಲವು ಹೊಂದಬೇಕು ನಮ್ಮ ನೆಲದ ಭವ್ಯ ಸಂಸ್ಕೃತಿಯನ್ನು ಅಳವಡಿಸಿಕೊಳ್ಳಬೇಕು ಕಲೆಗಳು ಜಾನಪದ ಕಡೆಗೆ ಒಲವು ಹೊಂದಬೇಕು

ಕಾಲೇಜಿನ ಪ್ರಾಚಾರ್ಯ ಬಿ. ಎಸ್. ಬೆಳಗಲಿ ಮಾತನಾಡಿ, ಇದು ಯುವ ಜನರ ಉತ್ಸವವಾಗಿದೆ. ಜಗತ್ತಿನಲ್ಲಿ ಅತಿ ಹೆಚ್ಚಿನ ಯುವಕರನ್ನು ಹೊಂದಿರುವ ದೇಶ ಭಾರತ. ಆದ್ದರಿಂದ ಇಂತಹ ಯುವಶಕ್ತಿಯನ್ನು ಉತ್ತಮ ವಿಚಾರಗಳಿಂದ ಬೆಳೆಸಬೇಕಾಗಿದೆ. ಕಲೆ, ಸಾಹಿತ್ಯ ಸಂಸ್ಕೃತಿ ಅವರಲ್ಲಿ ಬೆಳೆಸಬೇಕಾಗಿದೆ. ನಮ್ಮ ಭಾಗದಲ್ಲಿ ಡೊಳ್ಳಿನ ಕುಣಿತ, ಹಂತಿಯ ಹಾಡು, ಸೋಬಾನೆ ಮುಂತಾದ ಜನಪದಿಯ ಕಲೆಗಳಿದ್ದು, ಅವುಗಳನ್ನು ಯುವಪೀಳಿಗೆ ಕಲಿಯಬೇಕು. ಸುಂದರ ವರ್ಣರಂಜಿತ ಬದುಕು ರೂಪಿಸುವಲ್ಲಿ ಕಲೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಯುವಜನೋತ್ಸವದಂತ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಸಕ್ರೀಯವಾಗಿ ಭಾಗವಹಿಸಬೇಕು. ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಕೊಂಡರೆ ವ್ಯಕ್ತಿತ್ವ ವಿಕಸನವಾಗುತ್ತದೆ. ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ತಮ್ಮಲ್ಲಿರುವ ಕಲೆಯನ್ನು ಹೊರಹಾಕಲು ಯುವಜನೋತ್ಸವದಂತಹ ಕಾರ್ಯಕ್ರಮಗಳು ನೆರವಾಗುತ್ತವೆ ಎಂದು ಹೇಳಿದರು.

ವಿರೇಶ್ ವಾಲಿ ಹಾಗೂ ತಂಡದಿಂದ ನಾಡಗೀತೆ ಪ್ರಸ್ತುತಪಡಿಸಲಾಯಿತು. ನಿವೃತ್ತ ಶಿಕ್ಷಕ ಎಚ್.ಎ. ಮಮದಾಪೂರ ಕಾರ್ಯಕ್ರಮ ನಿರೂಪಿಸಿದರು. ಯುವಜನೋತ್ಸವ ಕಾರ್ಯಕ್ರಮವನ್ನು ಕಾಲೇಜಿನ ಪ್ರಾಚಾರ್ಯರಾದ ಬಿ.ಎಸ್. ಬೆಳಗಲಿ ಅವರು ವಚನ ಗಾಯನ ಮಾಡುವುದರ ಮೂಲಕ ಚಾಲನೆ ನೀಡಿದರು. ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಏಕ ಜನಪದ ನೃತ್ಯ, ಸಮೂಹ ಜನಪದ ನೃತ್ಯ, ಕಥೆ ಬರೆಯುವುದು, ಕವನ ರಚನೆ, ವಿಜ್ಞಾನ ಮಾದರಿಗಳ ಪ್ರದರ್ಶನ, ಚಿತ್ರಕಲೆ, ಗುಡಿ ಕೈಗಾರಿಕೆ ಕಲಾ ಪ್ರಕಾರ, ನೇಕಾರಿಕೆ/ಜವಳಿ, ಕೃಷಿ ಉತ್ಪನ್ನ ಸೇರಿದಂತೆ ಅನೇಕ ವಿಷಯಾಧಾರಿತ ಸ್ಪರ್ಧೆಗಳನ್ನು ಏರ್ಪಡಿಸಲಾಯಿತು.

ವೇದಿಕೆಯ ಮೇಲೆ ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಬಜಂತ್ರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಅಮರೇಶ ದೊಡಮನಿ, ನೆಹರು ಯುವ ಕೇಂದ್ರದ ಅಧಿಕಾರಿ ರಾಹುಲ್ ಡೋಂಗರೆ, ಸಂಜೀವ ಖೋತ, ಸಂತೋಷಕುಮಾರ ನಿಗಡಿ, ಎಸ್ ಬಾಲಾಜಿ, ಅಡಿವೆಪ್ಪ ಸಾಲಗಲ್ಲ, ನಾಗರಾಜ ಪಿ. ಲಂಬೂ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಗೊರುಚ ಆಯ್ಕೆ ಸಂತಸ ತಂದಿದೆ:ವಿವೇಕಾನಂದ ಕಲ್ಯಾಣಶೆಟ್ಟಿ



ಬಸವನಬಾಗೇವಾಡಿ,: ಮಂಡ್ಯದಲ್ಲಿ ಡಿ. 20 ರಿಂದ ನಡೆಯಲಿರುವ 87 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ನಾಡಿನ ಖ್ಯಾತ ಸಾಹಿತಿಗಳು ಹಾಗೂ ಜಾನಪದ ತಜ್ಞ ಗೊರುಚ ಅವರನ್ನು ಸಮ್ಮೇಳನದ ಅಧ್ಯಕ್ಷನಾಗಿ ಆಯ್ಕೆ ಮಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಅಭಿನಂದನೆಗೆ ಪಾತ್ರರಾಗಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅವರು ಕನ್ನಡ ಸಾಹಿತ್ಯ ಪರಿಷತ್ತನ್ನು ಆರ್ಥಿಕವಾಗಿ ಸದೃಢಗೊಳಿಸಿದ ಕೀರ್ತಗೆ ಪಾತ್ರರಾಗಿದ್ದಾರೆ. ಜೊತೆಗೆ ಶರಣ ಸಾಹಿತ್ಯ ಪರಿಷತ್ತನ್ನು ರಾಜ್ಯದ ಮೂಲೆ ಮೂಲೆ ತಲುಪಿಸಿ ಸಕ್ರಿಯವಾಗಿ ಕಾರ್ಯ ಮಾಡುವಂತೆ ಪ್ರೇರೇಪಿಸಿದ ಕೀರ್ತಿಗೆ ಅವರು ಭಾಜನರಾಗಿದ್ದಾರೆ. ಅಂತಹವರು ಸಮ್ಮೇಳನ ಅಧ್ಯಕ್ಷರಾಗಿರುವುದು ನಾಡಿನ ಜನತೆಗೆ ಸಂತಸವನ್ನು ತಂದಿದೆ. ನುಡಿದಂತೆ ನಡೆದ ಗೊ.ರು. ಚನ್ನಬಸಪ್ಪ ಅವರ ಆಯ್ಕೆ ಕನ್ನಡ ಸ್ವಾರಸ್ವತ ಲೋಕಕ್ಕೆ ಹೊಸ ದಿಕ್ಕನ್ನು ತೋರಿಸಿದೆ. ಇಂತಹ ವ್ಯಕ್ತಿಯನ್ನು ಆಯ್ಕೆ ಮಾಡುವ ಮೂಲಕ ಕನ್ನಡ ಸಾಹಿತ್ಯ ಪರಿಷತ್ತು ತನ್ನ ಗೌರವವನ್ನು ಹೆಚ್ಚಿಸಿಕೊಂಡಿದೆ. ಎಲ್ಲ ಪದಾಧಿಕಾರಿಗಳು ಅಭಿನಂದನೆಗೆ ಪಾತ್ರರಾಗಿದ್ದಾರೆ ಎಂದು ಹಂಗರಗಿಯ ಚನ್ನಬಸವೇಶ್ವರ ಪ್ರತಿಷ್ಠಾನ ಅಧ್ಯಕ್ಷರು,ಸಾಹಿತಿ ವಿವೇಕಾನಂದ ಕಲ್ಯಾಣಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೂತನ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ರಚನೆ ಸಮಿತಿಯ ನೂತನ ಅಧ್ಯಕ್ಷರಾಗಿ ಎಚ್.ಎಸ್.ಪಾಟೀಲ ಆಯ್ಕೆ



ಬಾಗಲಕೋಟೆ: : ಬಾಗಲಕೋಟೆ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ನೂತನ ಅಧ್ಯಕ್ಷರಾಗಿ ಹನಮಂತಗೌಡ ಶ್ರವಣಗೌಡ ಪಾಟೀಲ ಸದಸ್ಯರಾಗಿ ರಾಜಕುಮಾರ ಅರಸಿಕೇರಿ, ಬರಮನಗೌಡರ ಸಿದ್ದನಗೌಡರ, ಜಯಮ್ಮ ಕಳಸದ ಹಾಗೂ ವಿಜಯ ಆಯ್ಕೆಯಾಗಿದ್ದಾರೆ.

ಅದೇ ರೀತಿ ಬಾಲ ನ್ಯಾಯ ಮಂಡಳಿಯ ನೂತನ ಸದಸ್ಯರಾಗಿ ಸುವರ್ಣ ನಾಗಠಾಣ, ಶಿವಾನಂದ ಅನಾಮಿ ಆಯ್ಕೆಯಾಗಿದ್ದಾರೆ. ಸಮಿತಿಗಳಿಗೆ ನೂತನವಾಗಿ ಆಯ್ಕೆಯಾದವನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಸ್ವಾಗತಿಸಿದರೆ, ನಿಕಟಪೂರ್ವ ಜಿಲ್ಲಾ ಕಲ್ಯಾಣ ಸಮಿತಿಯ ಸದಸ್ಯರಾದ ಅರ್ಜುನ ಮಿರ್ಜಿ, ತೇಜಶ್ವಿನಿ ಹಿರೇಮಠ ಮತ್ತು ಸದಾಶಿವ ಬೆಳಗಲಿ ಅವರನ್ನು ಬೀಳ್ಕೊಡಲಾಯಿತು. ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯ ಕಾರ್ಯದರ್ಶಿ ಜಯಮಾಲಾ ದೊಡಮನಿ ಆಯ್ಕೆಯಾದವರಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ ಎಂ, ಸರಕಾರಿ ಬಾಲಕಿಯರ ಬಾಲ ಮಂದಿರದ ಅಧೀಕ್ಷಕಿ ಸುನಂದ ವಾಲಿಕಾರ, ಪೊಲೀಸ್ ಇಲಾಖೆಯ ಶಿವಪ್ಪ, ಚೇತನಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಪಕ್ಷ ಕೆಡವುವ ಉದ್ದೇಶ ನನಗಿಲ್ಲ:ರಮೇಶ ಜಾರಕಿಹೊಳಿ



ಮೋಳೆ ;-ಕಾಂಗ್ರೆಸ್ ಪಕ್ಷದ ಅನೇಕ ಶಾಸಕರು ನನ್ನನ್ನು ಸಂಪರ್ಕಿಸಿ ಬಿಜೆಪಿ ಸರಕಾರ ರಚಿಸಲು ನಿವೇಕೆ ಮುಂದಾಗುತ್ತಿಲ್ಲ ಎಂದು ಪ್ರಶ್ನಿಸುತ್ತಿದ್ದಾರೆ ಎಂದು ಮಾಜಿ ಸಚಿವ ರಮೇಶ ಜಾರಕಿಹೊಳಿ ಹೊಸ ಬಾಂಬ ಸಿಡಿಸಿದ್ದಾರೆ. ಅವರು ಸಂಕೋನಹಟ್ಟಿ ಗ್ರಾಮ ಪಂಚಾಯತ ಅಧ್ಯಕ್ಷ ಸಂತೋಷ ಕಕಮರಿ ಮದುವೆ ಸಮಾರಂಭದಲ್ಲಿ ಪಾಲ್ಗೊಂಡು ವಧು-ವರರಿಗೆ ಶುಭಾಶಯ ಕೋರಿ ಸುದ್ದಿಗಾರರಿಗೆ ಮಾತನಾಡುತ್ತಿದ್ದರು.

ಸಿಎಮ್ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರವನ್ನು ಬೀಳಿಸಲು ಬಿಜೆಪಿಯ ಯಾರೂ ಪ್ರಯತ್ನಿಸಿಲ್ಲ ಆದರೂ ಸಿದ್ಧರಾಮಯ್ಯ ತಮ್ಮ ಶಾಸಕರಿಗೆ 50 ಕೋಟಿ ಆಫರ್ ಕೊಡುತ್ತಿದ್ದಾರೆ ಎಂದು ಹೇಳಿಕೆ ಯಾಕೆ ನೀಡುತ್ತಿದ್ದಾರೆ ಎನ್ನುವುದೇ ಗೊತ್ತಾಗುತ್ತಿಲ್ಲ ಎಂದ ಅವರು ಸರಕಾರ ಅಸ್ಥಿರಗೊಳಿಸುವವನೆ ನಾನೇ ಸುಮ್ಮನಿರುವಾಗ ಬೇರೆಯವರು ಯಾರೂ ಪ್ರಯತ್ನಿಸುತ್ತಿಲ್ಲ ಎಂದು ರಮೇಶ ಜಾರಕಿಹೊಳಿ ಸ್ಪಷ್ಟಪಡಿಸಿದರು.

ಈ ಮೊದಲು ನಾವು ನಿರ್ಧಾರ ಮಾಡಿದಂತೆ ನವ್ಹೆಂಬರ 25 ರಿಂದ ಬೀದರದಿಂದ ವಕ್ಫ ಜಾಗೃತಿ ಯಾತ್ರೆ ಬಿಜೆಪಿ ನೇತೃತ್ವದಲ್ಲಿ ಪ್ರಾರಂಭಗೊಳ್ಳಲಿದ್ದು, ವಕ್ಫ ಹೋರಾಟ ಯಾವದೇ ಒಂದು ಸಮುದಾಯ ಮತ್ತು ಪಕ್ಷದ ವಿರೋಧ ಅಲ್ಲ ಎಂದು ಸ್ಪಷ್ಟ ಪಡಿಸಿದ ಅವರು ವಕ್ಫ ನಲ್ಲಿ ಹಿಂದುಗಳಷ್ಟೇ ಅಲ್ಲ ಮುಸ್ಲಿಂರೂ ಕೂಡ ಆಸ್ತಿ ಕಳೆದುಕೊಂಡಿದ್ದಾರೆ ಹೀಗಾಗಿ ನಮ್ಮ ಹೋರಾಟದಲ್ಲಿ ಅವರೂ ಪಾಲ್ಗೊಳ್ಳುತ್ತಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಮಹೇಶ ಕುಮಠಳ್ಳಿ, ಶ್ರೀಮಂತ ಪಾಟೀಲ, ಅಪ್ಪಾಸಾಹೇಬ ಅವತಾಡೆ, ಉಮೇಶರಾವ ಬಂಟೋಡಕರ, ಗಿರೀಶ ಬುಟಾಳಿ, ನಾನಾಸಾಹೇಬ ಅವತಾಡೆ, ಮಲ್ಲಿಕಾರ್ಜುನ ಅಂದಾನಿ, ಅಶೋಕ ಯಲ್ಲಡಗಿ, ತಮ್ಮಣ್ಣಾ ಪೂಜಾರಿ, ಧರೆಪ್ಪ ಠಕ್ಕಣ್ಣವರ, ಸಿದ್ಧಪ್ಪಾ ಮುದಕಣ್ಣವರ,ಸತ್ಯಪ್ಪಾ ಬಾಗೆನ್ನವರ, ಪ್ರಭಾಕರ ಚವ್ಹಾಣ, ಡಾ. ರವಿ ಸಂಕ, ರವಿ ಪೂಜಾರಿ, ಹರ್ಷಾ ಮಗದುಮ್, ಶ್ರೀಶೈಲ ಅಂದಾನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 15 ನೇ ಅಂತರ ತೋಟಗಾರಿಕೆ ಮಹಾವಿದ್ಯಾಲಯಗಳ ಅಥ್ಲೇಟಿಕ್ಸ ಕ್ರೀಡಾ ಕೂಟ



ಮೂಡಲಗಿ : ದಾನವೀರ ಶ್ರೀ ಶಿರಸಂಗಿ ಲಿಂಗರಾಜ ದೇಸಾಯಿ, ಆಹಾರ ಅಭಿಯಂತ್ರಿಕ ತೋಟಗಾರಿಕೆ ಮಹಾವಿದ್ಯಾಲಯ, ದೇವಿಹೊಸುರ, ಹಾವೇರಿಯಲ್ಲಿ ನಡೆದ 15 ನೇ ಅಂತರ ತೋಟಗಾರಿಕೆ ಮಹಾವಿದ್ಯಾಲಯಗಳ ಅಥ್ಲೇಟಿಕ್ಸ ಕ್ರೀಡಾ ಕೂಟವು -2024-25 14 ಮತ್ತು 15 ಅಕ್ಟೋಬರ್- 2024 ರಂದು ನಡೆಯಿತು.

ಈ ಅಥ್ಲೇಟಿಕ್ಸ ಕ್ರೀಡಾ ಕೂಟದಲ್ಲಿ ಕಿತ್ತೂರು ರಾಣಿ ಚನ್ನಮ್ಮಾ ತೋಟಗಾರಿಕೆ ಮಹಾವಿದ್ಯಾಲಯ, ಅರಭಾವಿಯ ವಿದ್ಯಾರ್ಥಿಗಳು ಭಾಗವಹಿಸಿ ಅನೇಕ ಪ್ರಶಸ್ತಿಗಳನ್ನು ಪಡೆದುಕೊಂಡರು ಹಾಗೂ ಮಹಾವಿದ್ಯಾಲಯವು ಸಮಗ್ರ ವಿರಾಗ್ರಣಿ ದ್ವಿತೀಯ (ರನ್ನರ್ಸ ಅಫ್) ಮತ್ತು ವಿದ್ಯಾರ್ಥಿನಿಯರ ಸಮಗ್ರ ವಿರಾಗ್ರಣಿ ದ್ವಿತೀಯ (ರನ್ನರ್ಸ ಅಫ್) ಆಗಿ ಹೊರಹೊಮ್ಮಿತು.

ಕಿತ್ತೂರು ರಾಣಿ ಚನ್ನಮ್ಮಾ ತೋಟಗಾರಿಕಾ ಮಹಾವಿದ್ಯಾಲಯ, ಅರಭಾವಿಯ ಡೀನ್ ಡಾ. ಎಮ್. ಜಿ. ಕೆರುಟಗಿ ಅಥ್ಲೇಟಿಕ್ಸ ಕ್ರೀಡಾ ಕೂಟದಲ್ಲಿ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಮತ್ತು ತಂಡದ ವ್ಯವಸ್ಥಾಪಕರು ಮತ್ತು ತರಬೇತುದಾರರು ಆದ ಡಾ. ಎಸ್.ಜಿ. ಪ್ರವೀಣ-ಕುಮಾರ ಮತ್ತು ಡಾ. ನವೀನ ಪುಟ್ಟಸ್ವಾಮಿ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

# ಡಿ.15 ರಂದು ಮಾಜಿ ಸೈನಿಕರ ಕುಂದುಕೊರತೆ ನಿವಾರಣೆ ಸಭೆ

**ಹಾವೇರಿ:** ಮಾಜಿ ಸೈನಿಕರು ಮತ್ತು ಅವರ ಅವಲಂಬಿತರುಗಳ ಕುಂದು ಕೊರತೆ ನಿವಾರಣಾ ಶಿಬಿರವನ್ನು ಡಿಸೆಂಬರ್ 15 ರಂದು ಬೆಳಿಗ್ಗೆ 8 ರಿಂದ ಸಂಜೆ 4 ಗಂಟೆವರೆಗೆ ಬೆಳಗಾವಿ ನಗರದ ಮರಾಠಾ ಲೈಟ ಇನಫಂಟ್ರಿ, ಶಿವಾಜಿ ಸ್ಟೇಡಿಯಂನಲ್ಲಿ, ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಗೆ ಸಂಬಂಧಿಸಿದ ವಿಷಯಗಳ ಕುರಿತು ಪರಿಹಾರ ಕ್ರಮ ಕೈಗೊಳ್ಳಲಾಗುವುದು.

ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಸಮಸ್ಯೆ ಕುರಿತು ಹೆಸರುಗಳನ್ನು ನೊಂದಾಯಿಸಿಕೊಂಡು, ನೋಂದಣಿ ಸಂಖ್ಯೆಯನ್ನು ಪಡೆಯ ಬೇಕಾಗಿರುತ್ತದೆ.

ನೋಂದಣಿ ಮಾಡಿಸುವ ಫಲಾನುಭವಿಗಳು ತಮ್ಮ ಕುಂದು ಕೊರತೆಗಳಿಗೆ ಸಂಭಂಧಿಸಿದ ದಾಖಲೆಗಳನ್ನು ದೂರವಾಣಿ (ವಾಟ್ಸಾಪ್) ಸಂಖ್ಯೆ 8317350584ಗೆ ಅಪಲೋಡ್ ಮಾಡಬೇಕು. ಈ ಶಿಬಿರದಲ್ಲಿ ಧಾರವಾಡ, ಗದಗ, ಹಾವೇರಿ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗೆ ಸಂಬಧಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರುಗಳು ಸದರಿ ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಧಾರವಾಡ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಜಂಟಿ ನಿರ್ದೇಶಕರ ಕಚೇರಿ ಪ್ರಕಟಣೆ ತಿಳಿಸಿದೆ.

****

# ಖಾಯಂಗೊಳಿಸಿ ವೇತನಕ್ಕೆ ಅನುದಾನ ನೀಡದ ಸರಕಾರ, ಮೂರು ತಿಂಗಳ ವೇತನ ಬಾಕಿ

## ಕೆಲಸ ಸ್ಥಗಿತಗೊಳಿಸಿ ಮುಷ್ಕರ ಕೈಗೊಂಡ ಪೌರ ಕಾರ್ಮಿಕರು



**ತೇರದಾಳ**-ಮೂರು ತಿಂಗಳಿಂದ ವೇತನ ಪಾವತಿಸಿಲ್ಲ ಎಂದು ಸ್ಥಳೀಯ ಪುರಸಭೆ ಪೌರ ಕಾರ್ಮಿಕರು ತಮ್ಮ ಕೆಲಸವನ್ನು ಸ್ಥಗಿತಗೊಳಿಸಿ ಶುಕ್ರವಾರದಿಂದ ಮುಷ್ಕರ ಕೈಗೊಂಡಿದ್ದಾರೆ. ಇದರಿಂದ ಸಂತೆ ದಿನವಾದ ಗುರುವಾದ ಕಸ ಪಟ್ಟಣದಲ್ಲಿ ಎಲ್ಲೆಡೆ ಬಿದ್ದಿದ್ದು, ಒಂದೇ ದಿನಕ್ಕೆ ದುರ್ವಾಸನೆ ಬಡಿಯುತ್ತಿದೆ.

ಕಳೆದ ಮೂರು ತಿಂಗಳಿಂದ ವೇತನ ಪಾವತಿಯಾಗಿಲ್ಲ. ಈಗ ನಾಲ್ಕನೇ ತಿಂಗಳು ಪ್ರಾರಂಭವಿದೆ. 9 ತಿಂಗಳಿಂದ ಸಂಕಷ್ಟ ಭತ್ಯೆಯೂ ನೀಡಿಲ್ಲ. ಇದರಿಂದ ನಾವು ಜೀವನ ನಡೆಸುವುದೆದು ಸವಾಲ್ ಆಗಿದೆ. ಮನೆ ಸಂತೆ, ಆರೋಗ್ಯ, ಮಕ್ಕಳ ಶಾಲೆಯ ಖರ್ಚು ಹೀಗೆ ಹಲವು ರೀತಿಯಲ್ಲಿ ತಾಪತ್ರೆ ಅನುಭವಿಸುತ್ತಿದ್ದೇವೆ. ಸಮಸ್ಯೆ ಕುರಿತು ಮುಖ್ಯಾಧಿಕಾರಿಗಳಿಗೆ ಮನವಿ ಪತ್ರ ಕೂಡ ನೀಡಿದ್ದೇವೆ. ಆದರೆ ಯಾವುದೇ ಪ್ರಯೋಜನವಾಗಿಲ್ಲ ಎಂದು ಕಾರ್ಮಿಕರ ಸಂಘದ ಅಧ್ಯಕ್ಷ ರಘು ಗೋಠಡಕಿ ತಿಳಿಸಿದರು.

ನೇರದಿಂದ ಖಾಯಂ-ಸ್ಥಳೀಯ ಸಂಘ ಸಂಸ್ಥೆಗಳಲ್ಲಿ ನೇರ ಪಾವತಿ ವೇತನ ಅಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಾರ್ಮಿಕರನ್ನು 2019ರಲ್ಲಿ ಒಂದು ಹಂತದಲ್ಲಿ ಹಾಗೂ 2023 ಮಾರ್ಚ್ ನಲ್ಲಿ ಒಂದು ಹಂತದಲ್ಲಿ ಖಾಯಂಗೊಳಿಸುವ ನಿರ್ಧಾರ ಕೈಗೊಂಡು ಖಾಯಂಗೊಳಿಸುವ ಹೊಣೆಯನ್ನು ಆಯಾ ಜಿಲ್ಲಾಧಿಕಾರಿಗಳಿಗೆ ವಹಿಸಿತು. ಅದರಂತೆ ಆಯಾ ಜಿಲ್ಲಾಧಿಕಾರಿಗಳು ಖಾಯಂಗೊಳಿಸಿ ಆದೇಶ ಹೊರಡಿಸಿದ್ದಾರೆ.

ಏನೀದು ಸಮಸ್ಯೆ-2019ರಲ್ಲಿ ನೇರ ನೇಮಕಾತಿಯಿಂದ ಖಾಯಂಗೊಂಡ ಪೌರ ಕಾರ್ಮಿಕರಿಗೆ ಸರಕಾರ ವೇತನದ ಅನುದಾನ ನೀಡುತ್ತಿದೆ.

ಅದರಂತೆ 2023 ಮಾರ್ಚ್ ತಿಂಗಳಲ್ಲಿ ಖಾಯಂಗೊಂಡ ಪೌರ ಕಾರ್ಮಿಕರ ಮೊದಲು ಏಳು ತಿಂಗಳ ವೇತನಕ್ಕೆ ಅನುದಾನ ಒದಗಿಸಿತು. ಆದರೆ 2024 ಫೆ ತಿಂಗಳಲ್ಲಿ ವೇತನ ಅನುದಾನದ ಕುರಿತು ಆದೇಶ ಮಾರ್ಪಾಡು ಮಾಡಿ ಅಭಿವೃದ್ಧಿಗಾಗಿ ಎಸ್‌ಎಫ್‌ಸಿ ಯೋಜನೆಯಡಿ ನೀಡುವ ಅನುದಾನದಲ್ಲಿಯೇ ಪೌರ ಕಾರ್ಮಿಕರ ವೇತನ ನೀಡಬೇಕು. ಕಡಿಮೆ ಬಿದ್ದಲ್ಲಿ ಸ್ಥಳೀಯ ಅಭಿವೃದ್ಧಿ ಅನುದಾನದಲ್ಲಿ ನೀಡಬೇಕೆಂದು ಆದೇಶ ಮಾಡಿದೆ. ಇದು ಸ್ಥಳೀಯ ಸಂಘ ಸಂಸ್ಥೆಗಳಿಗೆ ಬಿಸಿತುಪ್ಪವಾಗಿದೆ. ಕಾರಣ ಅಭಿವೃದ್ಧಿಗೆ ಅನುದಾನ ಸರಿಯಾದ ರೀತಿಯಲ್ಲಿ ನೀಡುವುದಿಲ್ಲ. ಇನ್ನೂ ಬಂದ ಅನುದಾನದಲ್ಲಿ ಎಲ್ಲ ಅನುದಾನವನ್ನು ಪೌರ ಕಾರ್ಮಿಕರ ವೇತನಕ್ಕೆ ಮೀಸಲು ಇಡಲು ಬರುವುದಿಲ್ಲ. 7.25, ವೈಯಕ್ತಿಕ ಕಾರ್ಯಕ್ರಮಗಳಿಗೆ ಶೇ. 5ರಷ್ಟು, ಟಿಎಸ್‌ಪಿ ಹೀಗೆ ಬೇರೆ ವಿಭಾಗಗಳಿಗೆ ಕಡ್ಡಾಯವಾಗಿ ಅನುದಾನ ಮೀಸಲಿಡಲೇಬೇಕು. ಇದರಿಂದ ಸರಕಾರ ಪೌರ ಕಾರ್ಮಿಕರನ್ನು ಖಾಯಂಗೊಳಿಸುವ ಕೆಲಸ ಮಾಡಿದೆ. ಆದರೆ ವೇತನಕ್ಕಾಗಿ ಅನುದಾನ ನೀಡದೆ ಇರುವುದರಿಂದ ಪೌರ ಕಾರ್ಮಿಕರ ವೇತನ ಸಮಸ್ಯೆ ರಾಜ್ಯಾದ್ಯಂತ ಕಾಡುತ್ತಿದೆ.

ಕೇವಲ 49 ಲಕ್ಷ ಅನುದಾನ!-2024-25ನೇ ಸಾಲಿನ ಎಸ್‌ಎಫ್‌ಸಿ ಯೋಜನೆಯಡಿ ತೇರದಾಳ ಪುರಸಭೆಗೆ ಪೌರ ಕಾರ್ಮಿಕರ ವೇತನ, ಅಭಿವೃದ್ಧಿ ಸೇರಿದಂತೆ ಇತರೆ ವಿಭಾಗಗಳಿಗೆ ಕೇವಲ 49 ಲಕ್ಷದಷ್ಟು ಅನುದಾನ ಬಂದಿದೆ. ಈ ಪೈಕಿ 23.74 ಲಕ್ಷ ಪೌರ ಕಾರ್ಮಿಕರ ವೇತನಕ್ಕಾಗಿ ಹಾಗೂ ಪೌರ ಕಾರ್ಮಿಕರ ಸಂಕಷ್ಟ ಭತ್ಯೆಗಾಗಿ 8.4 ಲಕ್ಷ ಅನುದಾನ ಮೀಸಲಿಡಲಾಗಿದೆ. ಇನ್ನೂ ಅಭಿವೃದ್ಧಿ ಕಾರ್ಯಗಳಿಗೆ ಅಷ್ಟಕಷ್ಟೇ.

1.5 ಕೋಟಿ ಬೇಕು!-ತೇರದಾಳ ಪುರಸಭೆಯಲ್ಲಿ 33 ಪೌರ ಕಾರ್ಮಿಕರು ಖಾಯಂಗೊಂಡಿದ್ದಾರೆ. ಪ್ರತಿ ತಿಂಗಳು ಕಾರ್ಮಿಕರ ವೇತನಕ್ಕಾಗಿ ಇತರೆ ಭತ್ಯೆಗಳನ್ನು ಸೇರಿ ಸರಾಸರಿ 12ಲಕ್ಷಕ್ಕೂ ಅಧಿಕ ಹಣ ಬೇಕು. ವರ್ಷಕ್ಕೆ 1.5 ಕೋಟಿಯಷ್ಟು ಹಣ ಬೇಕು. ಆದರೆ ವರ್ಷದಿಂದ ವರ್ಷ ಸರಕಾರದಿಂದ ಬರುವ ಅನುದಾನ ಕಡಿತಗೊಳ್ಳುತ್ತಿದೆ.

ಸ್ಥಳೀಯ ಆದಾಯ ನಿಧಿಯಲ್ಲಿ ನೂರಕ್ಕೆ ನೂರರಷ್ಟು ತೆರಿಗೆ ಸಂಗ್ರಹವಾದರು ಕೂಡ ಪೌರ ಕಾರ್ಮಿಕರ ವೇತನ ನೀಡಲು ಸಾಧ್ಯ ಆಗುವುದಿಲ್ಲ. ಹೀಗಾದರೆ ಅಭಿವೃದ್ಧಿ ಕಾರ್ಯಗಳನ್ನು ಏನು ಮಾಡುವುದು ಕಾರ್ಮಿಕರ ವೇತನ ಹೇಗೆ ನೀಡುವುದು ಎಂಬುದರಲ್ಲಿ ಅಧಿಕಾರಿಗಳು ಅಸಹಾಯಕರಾಗಿದ್ದಾರೆ.



> ಸರಕಾರ ನೇರ ಪಾವತಿ ವೇತನ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಕಾರ್ಮಿಕರನ್ನು ಖಾಯಂಗೊಳಿಸಿದ್ದು ಸಂತಸದ ಸಂಗತಿ. ಆದರೆ ಅವರಿಗೆ ವೇತನ ನೀಡಲು ಅನುದಾನ ನೀಡದಿದ್ದರೆ ಏನು ಪ್ರಯೋಜನ. ವರ್ಷಕ್ಕೆ ನೀಡುವ ಅಭಿವೃದ್ಧಿಗೆ ಅನುದಾನದಲ್ಲಿ ವೇತನ ನೀಡುವಂತೆ ಆದೇಶ ಹೊರಡಿಸಿದ್ದಾರೆ. ಆದರೆ ಸರಕಾರ ನೀಡುವ ಅನುದಾನದಲ್ಲಿ ಅಭಿವೃದ್ಧಿ ಬಿಡಿ, ವೇತನ ನೀಡಲು ಕೂಡ ಸಾಕಾಗುವುದಿಲ್ಲ. ಪುರಸಭೆ ಅಭಿವೃದ್ಧಿ ನಿಧಿಯಲ್ಲಿ ನೀಡಿದರು ಸಾಕಾಗುವುದಿಲ್ಲ. ವೇತನಕ್ಕಾಗಿ ಅನುದಾನ ನೀಡಲು ಸಾಧ್ಯ ಆಗದಿದ್ದರೆ ಕಾರ್ಮಿಕರನ್ನು ಖಾಯಂಗೊಳಿಸುವ ಉದ್ಧೇಶ ಏನಿತ್ತು. ಇದು ತೇರದಾಳ ಪುರಸಭೆ ಸಮಸ್ಯೆ ಮಾತ್ರ ಅಲ್ಲ. ರಾಜ್ಯದ ಎಲ್ಲ ಸಂಘ ಸಂಸ್ಥೆಗಳ ಸಮಸ್ಯೆಯಾಗಿದೆ. ಆದ್ದರಿಂದ ಸರಕಾರ ಖಾಯಂಗೊಳಿಸಿರುವ ಪೌರ ಕಾರ್ಮಿಕರ ವೇತನಕ್ಕಾಗಿ ವಿಶೇಷ ಅನುದಾನ ನೀಡಬೇಕು.
>
> **(ಶಿಲ್ಪಾ ಗೌತಮ ರೋಡಕರ. ಪುರಸಭೆ ಅಧ್ಯಕ್ಷೆ**

# ಗೋಕಾಕ : ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸಗಳ ಮರು ಸಮೀಕ್ಷೆ

ಗೋಕಾಕ: ಆಧುನಿಕ ಸಲಕರಣೆಗಳಿಲ್ಲದೆ ಕೈಯಿಂದ ಮಲವನ್ನು ಸ್ವಚ್ಚಗೊಳಿಸುವ ಸಾಗಿಸುವ ಕೆಲಸದಲ್ಲಿ ತೊಡಗಿರುವ ಅಥವಾ ಆತರದ ಕೇಲಸದಲ್ಲಿ ಖಾಸಗಿ ವ್ಯಕ್ತಿಯಿಂದ ಅಥವಾ ಸ್ಥಳೀಯ ಪ್ರಧಿಕಾರದಿಂದ ಸಾರ್ವಜನಿಕ ಖಾಸಗಿ ಏಜನ್ಸಿಯಿಂದ ತೊಡಗಿಸಲಾದ ವ್ಯಕ್ತಿ ಒಣ ಶೌಚಾಲಯ ತೆರೆದ ಚರಂಡಿ ಮತ್ತು ಒಣ ಶೌಚಾಲಯದಿಂದ ಹೊರಹೊಮ್ಮುವ ಮಲವನ್ನು ಕೈಯಿಂದ ತೆಗೆಯುವ ವ್ಯಕ್ತಿಗಳನ್ನು ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ ಮರು ಸಮೀಕ್ಷೆ ಮಾಡಲಾಗುತ್ತಿದೆ ಎಂದು ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಘಸ್ತೆ ಅವರು ತಿಳಿಸಿದ್ದಾರೆ

ಗೋಕಾಕ ತಾಲೂಕಿನ 33 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ದಿ. 26 ರವರೆಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ ಮರು ಸಮೀಕ್ಷೆಯನ್ನು ನಡೆಸಲಾಗುತ್ತಿದೆ. ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ ವೃತ್ತಿಯಲ್ಲಿ ತೊಡಗಿದ ವ್ಯಕ್ತಿಗಳು ಗ್ರಾಮ ಪಂಚಾಯತಿಗಳಲ್ಲಿ ಸ್ಥಾಪಿಸಿದ ಸ್ವಯಂ ಘೋಷಣೆ ಕೇಂದ್ರಕ್ಕೆ ಬಂದು ಸ್ವಯಂ ಘೋಷಣೆ ಮಾಡಿಕೊಳ್ಳಬೇಕೆಂದು ಅವರು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ

# ನ.26 ರಂದು ರಟ್ಟಿಹಳ್ಳಿಯಲ್ಲಿ ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ ಸಭೆ

ಹಾವೇರಿ: ಹಾವೇರಿ ಲೋಕಾಯುಕ್ತ ಅಧಿಕಾರಿಗಳಿಂದ ನವೆಂಬರ್ 26 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ರಟ್ಟಿಹಳ್ಳಿ ತಹಶೀಲ್ದಾರ ಕಾರ್ಯಾಲಯದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಸಭೆ ಹಾಗೂ ಸಾರ್ವಜನಿಕರ ಅಹವಾಲು ಸ್ವೀಕಾರ ಜರುಗಲಿದೆ.

ಸರ್ಕಾರಿ ಕಚೇರಿಗಳಲ್ಲಿ ದುರಾಡಳಿತ, ಸಾರ್ವಜನಿಕ ಕೆಲಸ ಕಾರ್ಯಗಳ ವಿಳಂಬ, ಕಳಪೆಕಾಮಗಾರಿ, ಸರ್ಕಾರಿ ನೌಕರರ ಅಕ್ರಮ ಆಸ್ತಿಗಳಿಕೆ, ಸರ್ಕಾರಿ ಹಣ ದುರುಪಯೋಗ, ಸಾರ್ವಜನಿಕ ಕೆಲಸಗಳಿಗೆ ಅಧಿಕಾರಿ, ನೌಕರರಿಂದ ಲಂಚ ಕೇಳುವ ದೂರುಗಳಿದ್ದರೆ ಲೋಕಾಯುಕ್ತ ನಡೆಸುವ ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ಭಾಗವಹಿಸಿ ದೂರುಗಳನ್ನು ಸಲ್ಲಿಸಬಹುದಾಗಿದೆ.

ಮಾನ್ಯ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇರುವ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ. ಸಭೆಯ ನಂತರ ವಿವಿಧ ಇಲಾಖೆಯ ಕಚೇರಿಗಳಿಗೆ ಅಧಿಕಾರಿಗಳು ಭೇಟಿ ನೀಡಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಡಿಎಸ್‌ಪಿ ಬಿ.ಪಿ.ಚಂದ್ರಶೇಖರ, ಪೊಲೀಸ್ ನಿರೀಕ್ಷಕರಾದ ಮುಸ್ತಾಕ ಅಹ್ಮದ, ಮಂಜುನಾಥ್ ಪಂಡಿತ ಹಾಗೂ ದಾದಾವಲಿ ಕೆ.ಎಚ್. ಅವರು ಅಹವಾಲು ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಲೋಕಾಯುಕ್ತ ಕಚೇರಿ ಪ್ರಕಟಣೆ ತಿಳಿಸಿದೆ.

# ಸವಣೂರ ತಾಲೂಕಿನಲ್ಲಿ ಬಾಲ ಕಾರ್ಮಿಕ ಕಿಶೋರ ಕಾರ್ಮಿಕ ಮಕ್ಕಳ ತಪಾಸಣೆ

ಹಾವೇರಿ: : ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಂಗವಾಗಿ ಶುಕ್ರವಾರ ಸವಣೂರು ತಾಲೂಕಿನ ವಿವಿಧ ಗ್ಯಾರೇಜ್, ಅಂಗಡಿಗಳಲ್ಲಿ ಕಾರ್ಮಿಕ ನಿರೀಕ್ಷಕರ ನೇತೃತ್ವದಲ್ಲಿ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ತಪಾಸಣೆ ಕಾರ್ಯ ನಡೆಸಿ, ಓರ್ವ ಕಿಶೋರ ಕಾರ್ಮಿಕರನ್ನು ರಕ್ಷಣೆ ಮಾಡಿ ಪೋಷಕರ ವಶಕ್ಕೆ ನೀಡಲಾಗಿದೆ.

ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ ಹಾಗೂ ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಸವಣೂರ ವೃತ್ತ ಕಾರ್ಮಿಕ ನಿರೀಕ್ಷಕ ಮಹಾಂತೇಶ ಹಿರೇಮಠ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ರಾಘವೇಂದ್ರ ಬ. ಶಿರೂರ, ಬಿ.ಸಿ.ಎಂ. ಇಲಾಖೆ ನವೀನ ಕೋರಿ, ಪುರಸಭೆಯ ಎಸ್. ಎಚ್.ಪೂಜಾರ, ಪೊಲೀಸ್ ಇಲಾಖೆಯ ಡಿ.ಎನ್. ಹೂವಣ್ಣನವರ, ಶಿಕ್ಷಣ ಇಲಾಖೆಯ ವಿ.ಬಿ.ಕಳಸದ, ಮಕ್ಕಳ ಸಹಾಯವಾಣಿ ಮೇಲ್ವಿಚಾರಕ ಪ್ರವೀಣ ಗೊಡ್ಡೆಮ್ಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಿರಣ ಬುಳ್ಳಾಪುರ ಇತರರು ಹಾಜರಿದ್ದರು.

# ಕೇಂದ್ರ ಕಾರಾಗೃಹದ ನಿವಾಸಿಗಳಿಗಾಗಿ ಆರೋಗ್ಯ ತಪಾಸಣೆ ಶಿಬಿರ ಆಯೋಜನೆ



ಬೆಳಗಾವಿ: ದಿ : 20 ರಂದು ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ ಪ್ರಭಾರಿ ಮುಖ್ಯ ಅಧೀಕ್ಷಕರಾದ ಶ್ರೀ. ವಿ.ಕೃಷ್ಣಮೂರ್ತಿ ಇವರ ಮಾರ್ಗದರ್ಶನದಲ್ಲಿ ಕಾರಾಗೃಹದ ಬಂದಿಗಳಿಗಾಗಿ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಲಾಗಿತ್ತು. ಸದರಿ ಶಿಬಿರವು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಓರಲ್ ಹೆಲ್ತ್ ಕಾರ್ಯಕ್ರಮಾಧಿಕಾರಿಗಳ ಕಾರ್ಯಾಲಯ ಹಾಗೂ ಕೇಂದ್ರ ಕಾರಾಗೃಹ ಬೆಳಗಾವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿ-ತ್ತು. ಇದರಲ್ಲಿ ಮುಖ್ಯವಾಗಿ ಬಾಯಿಯ ಆರೋಗ್ಯ ಕುರಿತು ಕಾರ್ಯಕ್ರಮ ಆಯೋಜಿಸಲಾಗಿತ್ತು. ಉದ್ಘಾಟಕರಾಗಿ ತಾಲೂಕಾ ಆರೋಗ್ಯ ಅಧಿಕಾರಿಗಳಾದ ಡಾ॥ ರಾಜೇಶ್ವರಿ ಪಾಟೀಲ, ಉಪನ್ಯಾಸಕರಾಗಿ ಡಾ॥ ಚಂದ್ರಾ ನಾಯಿಕ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಕಾರಾಗೃಹದ ಸಹಾಯಕ ಅಧೀಕ್ಷಕರಾದ ಶ್ರೀ. ಮಲ್ಲಿಕಾರ್ಜುನ ಕೊಣ್ಣೂರ ವಹಿಸಿದ್ದರು.

ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಡಾ॥ ರಾಜೇಶ್ವರಿ ಪಾಟೀಲ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ ದೇಶದಲ್ಲಿ ಬಾಯಿಯ ಆರೋಗ್ಯದ ಅರಿವು ಮೂಡಿಸಿ, ಬಾಯಿಯ ಕಾಯಿಲೆಗಳಿಂದ ಉಂಟಾಗುವ ರೋಗವನ್ನು ಕಡಿಮೆ ಮಾಡುವ ನಿಮಿತ್ಯ ಈ ಕಾರ್ಯಕ್ರಮ ಜಾರಿಗೆ ಬಂದಿದ್ದು, ಇದರ ಅನ್ವಯ ತಮಗೆ ಕಾರ್ಯಕ್ರಮ ಆಯೋಜಿಸಲಾಗಿದ್ದು, ಇದರ ಸದುಪಯೋಗ ಪಡೆಯಬೇಕೆಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಹಾಯಕ ಅಧೀಕ್ಷಕರಾದ ಶ್ರೀ ಮಲ್ಲಿಕಾರ್ಜುನ ಕೊಣ್ಣೂರ ಮಾತನಾಡಿ ಬಂದಿಗಳ ಆರೋಗ್ಯದ ದೃಷ್ಟಿಯಿಂದ ವಿವಿಧ ಆರೋಗ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಇಂದಿನ ಆಧುನಿಕ ಜೀವನದಲ್ಲಿ ಅನೇಕರು ಬಾಯಿಯ ಕಾಯಿಲೆಗಳಿಂದ ಬಳಲುತ್ತಿದ್ದು, ಕಾರಣ ಇದಕ್ಕೆ ಸೂಕ್ತ ಚಿಕಿತ್ಸೆ, ಉತ್ತಮ ಆರೋಗ್ಯ ಪಡೆಯುವಂತಾಗಬೇಕು ಎಂದು ಹೇಳಿದರು. ತಾವೆಲ್ಲ ದುಶ್ಚಟಗಳಿಂದ ಮುಕ್ತರಾಗಬೇಕು ಎಂದು ಹೇಳಿದರು.

ಉಪನ್ಯಾಸಕರಾದ ಡಾ॥ ಚಂದ್ರಾ ನಾಯಿಕ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ, ಬಾಯಿ ಕಾಯಿಲೆಗಳು ಕೇವಲ ಬಾಯಿಯ ಆರೋಗ್ಯವನ್ನು ಹಾಳು ಮಾಡದೇ ಶರೀರದ ವಿವಿಧ ಭಾಗಗಳಿಗೆ ತೊಂದರೆ ಮಾಡುತ್ತದೆ, ಇಂದಿನ ಆದ-ುನಿಕ ಯುಗದಲ್ಲಿ ಮಕ್ಕಳಿಂದ ವಯೋವೃದ್ಧರು ತಂಬಾಕಿನ ಉತ್ಪನ್ನಗಳಾದ ಗುಟಕಾ, ಬೀಡಿ, ಸಿಗರೇಟು ಇವುಗಳಿಗೆ ದಾಸರಾಗುತ್ತಿದ್ದಾರೆ. ಇವುಗಳ ಸೇವನೆಯಿಂದ ನಮ್ಮ ಅಮೂಲ್ಯವಾದ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಇವುಗಳ ಅತಿಯಾದ ಸೇವನೆಯಿಂದ ಕ್ಯಾನ್ಸರ್ ನಂತಹ ಮಾರಣಾಂತಿ-ಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಕಾರಣ ಇದರ ಬಗ್ಗೆ ಅರಿವು ಮೂಡಿಸಿ, ಪ್ರತಿಯೊಬ್ಬರೂ ಆರೋಗ್ಯವಂತರಾಗುವ ನಿಮಿತ್ಯ 2014 - 15 ರಲ್ಲಿ ರಾಷ್ಟೀಯ ಓರಲ್ ಹೆಲ್ತ್ ಕಾರ್ಯಕ್ರಮ ಜಾರಿಗೆ ಬಂದಿತು. ಕಾರಣ ಬಂದಿಗಳು ಇಂತಹ ದುಶ್ಚಟಗಳಿಗೆ ಒಳಗಾಗದೇ, ಉತ್ತಮ ಆರೋಗ್ಯವಂತರಾಗಿ ಬಾಳಬೇಕು. ತಾವು ಬಿಡುಗಡೆ ಹೊಂದಿದ ನಂತರ ತಮ್ಮ ಕುಟುಂಬದವರ ಬಗ್ಗೆ ಹಾಗೂ ಸಮಾಜದ ಇತರರಿಗೂ ಬಾಯಿಯ ಆರೋಗ್ಯದ ಕುರಿತು ಮಾಹಿತಿ ನೀಡಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಕಾರಾಗೃಹದ ವೈದ್ಯಾಧಿಕಾರಿ ಡಾ॥ ರಮೇಶ ದಂಡಗಿ, ಡಾ॥ ರೂಪಾ ಹಾಗೂ ಕಾರಾಗೃಹದ ಶಿಕ್ಷಕರಾದ ಶಶಿಕಾಂತ ಉಪಸ್ಥಿತರಿದ್ದರು. ಶ್ರೀ. ಎಸ್.ಎಸ್.ಯಾದಗುಡೆ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಮಹಿಳೆಯರು -ಮಗು ಕಾಣೆ

ಹಾವೇರಿ: ರಾಣೇಬೆನ್ನೂರ ವಿನಾಯಕ ನಗರದ ನಿವಾಸಿ 26 ವರ್ಷದ ಶ್ರೀಮತಿ ಗಂಗಮ್ಮ ರೇವಣಪ್ಪ ಮಾಳಗಿ ಹಾಗೂ ಮೂರು ವರ್ಷದ ತನ್ನ ಮಗು ಲಹರಿಯೊಂದಿಗೆ 16 ಅಕ್ಟೋಬರ್ 2024 ರಂದು ಹಾಗೂ 27 ವರ್ಷದ ಗಂಗಮ್ಮ ಕುಶಪ್ಪ ವರವಜ್ಜಿ ಹಾಗೂ ಎರಡುವರೆ ವರ್ಷದ ಪ್ರೇರಣಾ ಕುಶಪ್ಪ ವರವಜ್ಜಿ ಎಂಬ ಮಹಿಳೆ ತನ್ನ ಮಗುವಿನೊಂದಿಗೆ 10 ಎಪ್ರಿಲ್ 2024 ರಂದು ಮನೆಯಿಂದ ಹೋದವಳು ಕಾಣೆಯಾಗಿದ್ದಾಗಿ ರಾಣೇಬೆನ್ನೂರ ಶಹರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

ಕಾಣೆಯಾದ ಗಂಗಮ್ಮ ರೇವಣಪ್ಪ ಮಾಳಗಿ 4.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಸಾದಗೆಂಪು ಮೈಬಣ್ಣ, ದುಂಡನೆ ಮುಖ ಹೊಂದಿದ್ದು, ನೀಲಿ ಬಣ್ಣದ ಟಾಪ್ ಹಾಗೂ ಆಕಾಶ ಬಣ್ಣದ ಪ್ಯಾಂಟ್ ಧರಿಸಿದ್ದಾಳೆ. ಮಗು ಲಹರಿ ಎರಡುವರೆ ಅಡಿ ಎತ್ತರ, ಸದೃಢವಾದ ಮೈಕಟ್ಟು ಹಾಗೂ ಸಾಧಗಪ್ಪು ಮೈ ಬಣ್ಣ, ದುಂಡು ಮುಖ ಹೊಂದಿದೆ.

ಗಂಗಮ್ಮ ಕುಶಪ್ಪ ವರವಜ್ಜಿ 5.4 ಅಡಿ ಎತ್ತರ, ಸಾಧಾರಣ ಮೈಕಟ್ಟು, ಸಾದಗಪ್ಪು ಮೈಬಣ್ಣ, ದುಂಡನೆ ಮೂಗು, ಎಡಗೈ ಮೇಲೆ ಇಂಗ್ಲೀಷನಲ್ಲಿ ಅಪ್ಪಾ ಎಂದು ಟ್ಯಾಟೋ ಇದೆ. ನೀಲಿ ಕಲರ್ ಚೂಡಿದಾರ ಧರಿಸಿದ್ದಾಳೆ. ಎರಡುವರೆ ವರ್ಷದ ಪ್ರೇರಣಾ ಎರಡುವರೆ ಅಡಿ ಎತ್ತರ, ತೆಳ್ಳನೆ ಮೈಕಟ್ಟು, ಬೆಳ್ಳನೆ ಮೈ ಬಣ್ಣ ಹೊಂದಿದ್ದು, ಎಡಗೈ ಮೇಲೆ ಪೋಲಿಯೋ ಹಾಕಿದ ಗಾಯ ಇದೆ. ಕೆಂಪು ಬಣ್ಣದ ಫ್ರಾಕ್ ಧರಿಸಿದ್ದಾಳೆ. ಇವರುಗಳ ಗುರುತು ಪತ್ತೆಯಾದಲ್ಲಿ ಹತ್ತಿರದ ಪೊಲೀಸ್ ಠಾಣೆ ಅಥವಾ ರಾಣೇಬೆನ್ನೂರ ಶಹರ ಪೊಲೀಸ್ ಠಾಣೆ ದೂ.ಸಂ.08373-266333, ಪಿಎಸ್‌ಐ ಮೊ.9480804550 ಹಾಗೂ ಶಹರ ವೃತ್ತ ಸಿಪಿಐ ಮೊ.9480804532 ಸಂಪರ್ಕಿಸಲು ರಾಣೇಬೆನ್ನೂರು ಶಹರ ಠಾಣೆ ಆರಕ್ಷಕ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಗದಗ : ಗದಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರ–ರಿಗೆ ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕು–ರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು ಅರ್ಜಿ ಸಲ್ಲಿಸುವ ಅವಧಿಯನ್ನು ನವೆಂಬರ್ 30 ರವರೆಗೆ ವಿಸ್ತರಿಸಲಾಗಿದೆ.

ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ನೀಡುವ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ' ಎಂದು ನಮೂದಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವುದು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲ ವರ್ಷಗಳ ಅಂಕಪಟ್ಟಿಗಳು, ಸ್ನಾತ್ತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿಸಲ್ಲಿಸಬೇಕು. ತರಬೇತಿಯ ಅವಧಿ ವೇಳೆ ಮಾಹೆಯಾನ 15,000/– ರೂ. ಗಳ ಸ್ಟೈಫೆಂಡ್ ನೀಡಲಾಗುವುದು.

ತರಬೇತಿಯು 2025 ರ ಜನವ–ರಿಯಿಂದ ಡಿಸೆಂಬರ್ ವರೆಗೆ 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸಲು ಯಾವುದೇ ಅವಕಾಶ ಇರುವುದಿಲ್ಲ. ತರಬೇತಿಯ ಅವಧಿಯಲ್ಲಿ ತರಬೇತಾರ್ಥಿಗಳು ಬೇರೆ ಉದ್ಯೋಗ ಮಾಡುವಂತಿಲ್ಲ. ತರಬೇತಿ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದರೆ, ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದುರುಗಿಸುವುದಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ ಭವನ ರೂಮ್ ನಂ 30 ಗದಗ ಇವರನ್ನು ಸಂಪರ್ಕಿಸಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 6 ಕೋಟಿ ವೆಚ್ಚದಲ್ಲಿ ಇಂದಿರಮ್ಮನ ಕೆರೆ ಅಭಿವೃದ್ಧಿ ಕಾಮಗಾರಿಗೆ ಸಚಿವ ಸಂತೋಷ್ ಲಾಡ್



ಧಾರವಾಡ : ಅಳ್ನಾವರ ತಾಲೂಕಿನ ಇಂದಿರಮ್ಮನ ಕೆರೆಯ ಅಭಿವೃದ್ಧಿ ಕಾಮಗಾ–ರಿಯನ್ನು ಸುಮಾರು 6 ಕೋಟಿ ವೆಚ್ಚದಲ್ಲಿ ಇಂದಿರಮ್ಮನ ಕೆರೆ ಅಭಿವೃದ್ಧಿ ಕಾಮಗಾ–ರಿಯನ್ನು ಕೈಗೊಳ್ಳಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಇಂದು ಬೆಳಿಗ್ಗೆ ಅವರು ಅಳ್ನಾವರ ತಾಲೂಕಿನ ಇಂದಿರಮ್ಮನ ಕೆರೆಯ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ಮಾಡುವ ಮೂಲಕ ಚಾಲನೆ ನೀಡಿ, ಮಾತನಾಡಿದರು.

ಕಾಮಗಾರಿಯ ಸಂದರ್ಭದಲ್ಲಿ ಗುತ್ತಿಗೆದಾರರು ಹಾಗೂ ಸಾರ್ವಜನಿಕರು ಸಹಕರಿಸಬೇಕು. ಕೆರೆಯ ಕಾಮಗಾರಿಯನ್ನು 9 ತಿಂಗಳ ಅವಧಿಯೊಳಗೆ ಮುಗಿಸಬೇಕು ಎಂದು ಅಧಿಕಾರಿಗಳಿಗೆ ಸಚಿವರು ಸೂಚನೆಯನ್ನು ನೀಡಿದರು.

ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಬೋಸರಾಜು ಅವರು ಅಧಿಕಾರಿಗಳ ಜೋತೆ ಬಂದು ಕೆರೆಯ ಸುತ್ತ ಮುತ್ತಲಿನ ಪ್ರದೇಶವನ್ನು ಪರಿಶೀಲಿಸಿದರು. ನಾವೆಲ್ಲರೂ ಒಂದೇ ಇದು ಸರ್ಕಾರದ ಕೆಲಸವನ್ನು ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡೋಣ. ಇದಕ್ಕೆ ಎಲ್ಲರ ಸಹಭಾಗಿತ್ವ ಅವಶ್ಯಕ. ಸುಮಾರು 2 ಸಾವಿರ ಹೆಕ್ಟೇರ್ ಅಂದರೆ 5 ಸಾವಿರ ಎಕರೆಗೆ ಕೆರೆಯ ನೀರು ಉಪಯೋಗವಾಗಲಿದೆ. ರೈತರಿಗೆ ಬರಗಾಲದ ಸಂದರ್ಭದಲ್ಲಿ ಬೆಳೆ ಬೆಳೆಯಲು ಕೆರೆ ನೀರು ಉಪಯೋಗಿಸಲು ಸಹಾಯಕವಾಗಲಿದೆ. ಮುಂದಿನ ದಿನಗಳಲ್ಲಿ ರೈತರಿಗೆ ನೀರು ಸರಬರಾಜು ಆಗುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಅಳ್ನಾವರ ತಾಲೂಕಿನ ತಹಶೀಲ್ದಾರ ಬಸವರಾಜ ಬೆಣ್ಣಿಶಿರೋರ, ತಾಲ್ಲೂಕು ಮಟ್ಟದ ಅಧಿಕಾರಿಗಳು, ಹುಲಿಕೇರಿ ಗ್ರಾಮಸ್ಥರು ಭಾಗವಹಿಸಿದ್ದರು.

## ಚೂರು–ಪಾರು

### ಜಿಲ್ಲಾ ಪಂಚಾಯತ ನ. ೨೫ ರಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಪ್ರಗತಿ ಪರಿಶೀಲನಾ ಸಭೆ

ಧಾರವಾಡ : ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕಾರ್ಯ ವಿಧಾನಗಳು ಹಾಗೂ ಯೋಜನೆಗಳನ್ನು ಪರಿಣಾಮಕಾ–ರಿಯಾಗಿ ಜಾರಿಗೊಳಿಸುವ ಬಗ್ಗೆ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಾಧಿಕಾರದ ಅಧ್ಯಕ್ಷ ಎಸ್. ಆರ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನವೆಂಬರ 25, 2024 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಎಲ್ಲ ಜಿಲ್ಲಾಮಟ್ಟದ ಅಧಿಕಾರಿಗಳು ಪ್ರಗತಿ ಪರಿಶೀಲನಾ ಸಭೆಗೆ ತಮ್ಮ ಇಲಾಖೆಯ ಪ್ರಗತಿ ವರದಿ ಮತ್ತು ಅನುಪಾಲನಾ ವರದಿಯೊಂದಿಗೆ ಹಾಜರಾಗಲು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ. 23 ರಂದು ಜಿಲ್ಲೆಯ ನ್ಯಾಯಾಧೀಶರುಗಳೊಂದಿಗೆ ಸಂವಾದ ಕಾರ್ಯಕ್ರಮ

ಧಾರವಾಡ : ಕರ್ನಾಟಕ ಲೋಕಾಯುಕ್ತದ ಉಪ ಲೋಕಾಯುಕ್ತ ಕೆ. ಎನ್. ಫಣೀಂದ್ರ ಅವರಿಂದ ಸಾರ್ವಜನಿಕ ಆಡಳಿತ ಮತ್ತು ಕರ್ನಾಟಕ ಲೋಕಾಯುಕ್ತ ಸಂಸ್ಥೆ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಪಾತ್ರದ ಬಗ್ಗೆ ಧಾರವಾಡ ಜಿಲ್ಲೆಯ ಎಲ್ಲಾ ನ್ಯಾಯಾಧೀಶರುಗಳೊಂದಿಗೆ ಸಂವಾದ ಕಾರ್ಯಕ್ರಮವನ್ನು ನವೆಂಬರ್ 23, 2024 ರಂದು ಸಂಜೆ 6:30 ಗಂಟೆಯಿಂದ 7:30 ಗಂಟೆಯವರೆಗೆ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿ ಆಯೋಜಿಸಲಾಗಿದೆ.

ಕರ್ನಾಟಕ ಲೋಕಾಯುಕ್ತದ ಉಪ ಲೋಕಾಯುಕ್ತ ಕೆ. ಎನ್.ಫಣೀಂದ್ರ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಬಿ.ಜಿ. ರಮಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಪಿ. ಶ್ರೀನಿವಾಸ, ನರಸಿಂಹಸಾ ಎಂ.ವಿ., ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ಎಫ್.ದೊಡ್ಡಮನಿ, ಸಿವಿಲ್ ನ್ಯಾಯಾಧೀಶ ಹಾಗೂ ಉಪ ಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಕಿರಣ ಪಿ. ಎಂ.ಪಾಟೀಲ್ ಅವರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಮದ್ಯ ಮಾರಾಟ ವಹಿವಾಟಿನ ಶುಷ್ಕ ದಿನ ಘೋಷಣೆ

ಗದಗ : ಗ್ರಾಮ ಪಂಚಾಯತ ವಿವಿಧ ಕಾರಣಗಳಿಂದ ಖಾಲಿ ಇರುವ/ ತೆರವಾಗಿರುವ ಸ್ಥಾನಗಳಿಗೆ ಉಪ ಚುನಾವಣೆ–2024 ರ ಹಿನ್ನೆಲೆಯಲ್ಲಿ ನವೆಂಬರ್ 23 ರಂದು ಮತದಾನ ನಡೆಯುತ್ತದೆ, ಚುನಾವಣೆ ಪ್ರಕ್ರಿಯೆ ಪರಿಶುದ್ಧತೆ, ಶಿಸ್ತು ಹಾಗೂ ಶಾಂತಿಯನ್ನು ಕಾಪಾಡುವುದಕ್ಕಾಗಿ ಶಿರಹಟ್ಟಿ ತಾಲೂಕಿನ ಕೊಂಚಿಗೇರಿ ಹಾಗೂ ವಡವಿ, ಮುಂಡರಗಿ ತಾಲೂಕಿನ ಡಂಬಳ ಗ್ರಾಮ ಪಂಚಾಯ್ತಿಗಳ ನೀತಿ ಸಂಹಿತೆ ಜ್ಯಾರಿಯಲ್ಲಿರುವ ಪ್ರದೇಶಗಳ ವ್ಯಾಪ್ತಿಯಲ್ಲಿ ನವೆಂಬರ್ 21 ರ ಸಂಜೆ 5–00 ಗಂಟೆಯಿಂದ ನವೆಂಬರ್ 23 ರ ಮಧ್ಯರಾತ್ರಿಯವರೆಗೆ ಮದ್ಯ ವಹಿವಾಟಿನ ಶುಷ್ಕ ದಿನ ಎಂದು ಘೋಷಿಸಲಾಗಿದೆ.

ಈ ಸಂದರ್ಭದಲ್ಲಿ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿರ್ಭಂಧಿಸಿ, ಮದ್ಯ ಮಾರಾಟದ ಎಲ್ಲ ವರ್ಗಗಳ ಮಳಿಗೆಗಳನ್ನು ಮುಚ್ಚಲು ಹಾಗೂ ಮದ್ಯ ತಯಾರಿಕಾ ಘಟಕಗಳನ್ನು ಅದರ,ಮಾಲೀಕರು, ಅಧಿಭೋಗದಾರರು ಮತ್ತು ಸಂದರ್ಭಾನುಸಾರ ಅದರ ವ್ಯವಸ್ಥಾಪಕರು ಮುಚ್ಚಲು ಆದೇಶಿಸಿದೆ. ಈ ಅವಧಿಯಲ್ಲಿ ಯಾವುದೇ ಮದ್ಯದ ಅಂಗಡಿ ಬಾರ್ ರೆಸ್ಟೋರೆಂಟ್, ಕ್ಲಬ್, ಡಿಪೋಗಳಲ್ಲಿ ಮದ್ಯ ಮಾರಾಟ ಸೇವೆಯ ಕುರಿತು ಅಧಿಕೃತ ಲೈಸೆನ್ಸ್ ಪಡೆದ ಯಾವುದೇ ವ್ಯವಹಾರ ಕೇಂದ್ರಗಳಲ್ಲಿ ಮದ್ಯ ಮಾರಾಟ ಸರಬರಾಜು ಮತ್ತು ಸೇವೆಗಳನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳಾದ ಗೋವಿಂದ ರೆಡ್ಡಿ ಅವರು ಆದೇಶಿಸಿದ್ದಾರೆ.


# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಗದಗ : ಗದಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರ–ರಿಗೆ ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕು–ರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು ಅರ್ಜಿ ಸಲ್ಲಿಸುವ ಅವಧಿಯನ್ನು ನವೆಂಬರ್ 30 ರವರೆಗೆ ವಿಸ್ತರಿಸಲಾಗಿದೆ.

ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ನೀಡುವ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ' ಎಂದು ನಮೂದಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವುದು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲ ವರ್ಷಗಳ ಅಂಕಪಟ್ಟಿಗಳು, ಸ್ನಾತ್ತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿಸಲ್ಲಿಸಬೇಕು. ತರಬೇತಿಯ ಅವಧಿ ವೇಳೆ ಮಾಹೆಯಾನ 15,000/– ರೂ. ಗಳ ಸ್ಟೈಫೆಂಡ್ ನೀಡಲಾಗುವುದು. ತರಬೇತಿಯು 2025 ರ ಜನವರಿಯಿಂದ ಡಿಸೆಂಬರ್ ವರೆಗೆ 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ.

ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸಲು ಯಾವುದೇ ಅವಕಾಶ ಇರುವುದಿಲ್ಲ. ತರಬೇತಿಯ ಅವಧಿಯಲ್ಲಿ ತರಬೇತಾರ್ಥಿಗಳು ಬೇರೆ ಉದ್ಯೋಗ ಮಾಡುವಂತಿಲ್ಲ. ತರಬೇತಿ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದರೆ, ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದುರುಗಿಸುವುದಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು. ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ ಭವನ ರೂಮ್ ನಂ 30 ಗದಗ ಇವರನ್ನು ಸಂಪರ್ಕಿಸಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಎನ್.ಎಸ್.ವಿ ಪಾಕ್ಷಿಕ ನವಜಾತ ಶಿಶು ಸಪ್ತಾಹ ಕಾರ್ಯಕ್ರಮ

## ಚಿಕ್ಕ ಕುಟುಂಬ ಚೊಕ್ಕ ಕುಟುಂಬ: ಡಾ.ಮಹೇಶ್ ಉಮಚಗಿ



ಕೊಪ್ಪಳ : ಹೆಣ್ಣಾಗಲಿ ಗಂಡಾಗಲಿ ಎರಡೇ ಮಕ್ಕಳು ಸಾಕು. ಚಿಕ್ಕ ಕುಟುಂಬ ಚೊಕ್ಕ ಕುಟುಂಬವಾಗಿದೆ ಎಂದು ಕೊಪ್ಪಳ ನಗರ ಪ್ರಾಥ–ಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ.ಮಹೇಶ ಉಮಚಗಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರದಂದು ಕೊಪ್ಪಳ ನಗರದ ಗವಿಮಠ ಹಿಂದುಗಡೆಯ ಕುವೆಂಪು ನಗರದ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಎನ್. ಎಸ್.ವಿ ಪಾಕ್ಷಿಕ" ಹಾಗೂ ನವಜಾತ ಶಿಶು ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷ ನವಂಬರ್ 21 ರಿಂದ ಡಿಸೆಂಬರ್ 05 ರವರೆಗೆ ಎನ್.ಎಸ್.ವಿ ಪಾಕ್ಷಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತದೆ. ಈ ಕಾರ್ಯಕ್ರಮದ ಉದ್ದೇಶ ಸಂತಾನ ನಿರೋಧ ಶಸ್ತ್ರಚಿಕಿತ್ಸೆಯಲ್ಲಿ ಪುರುಷರ ಸಹಭಾಗಿತ್ವದ ಬಗ್ಗೆ ಅರಿವು ಮೂಡಿಸಿ ಸೇವೆ ನೀಡುವುದಾಗಿದೆ. ತಾಯಿ ಮರಣ ಮತ್ತು ಶಿಶುಮರಣ ತಡೆಗಟ್ಟಲು, ಜನಸಂಖ್ಯಾ ನಿಯಂತ್ರಣದಲ್ಲಿ ತರಲು ಪುರುಷರ ಸಂತಾನ ನಿರೋಧ ಶಸ್ತ್ರಚಿಕಿತ್ಸೆ ಪ್ರಮುಖವಾಗಿದೆ. ಯಾವ ಹೆಣ್ಣು ಮಕ್ಕಳಿಗೆ ಹೃದಯ ತೊಂದರೆ, ಕ್ಯಾನ್ಸರ್ ಖಾಯಿಲೆ ಹಾಗೂ ಇತರೆ ಗಂಭೀರ ಖಾಯಿಲೆಯಿಂದ ಬಳಲುತ್ತಿದ್ದರೆ, ಅಂತವರ ಪತಿಯಂದಿರರಿಗೆ ಎನ್.ಎಸ್.ವಿ ಶಸ್ತ್ರಚಿಕಿತ್ಸೆ ಮಾಡಬಹುದು. ಇದು ಸರಳ ಹಾಗೂ ಸುರಕ್ಷಿತ ವಿಧಾನವಾಗಿದೆ. ಗಾಯ ಇಲ್ಲ, ಹೊಲಿಗೆ ಇಲ್ಲ, ಚಿಕಿತ್ಸಾ ವಿಧಾನ ಕೇವಲ 05 ರಿಂದ 10 ನಿಮಿಷಗಳಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಮಾಡಲಾಗುವುದು. ಈ ಶಸ್ತ್ರಚಿಕಿತ್ಸೆಯ ನಂತರ ಸಾಧರಣವಾಗಿ ಎಲ್ಲಾ ಕೆಲಸ–ಕಾರ್ಯಗಳನ್ನು ಮಾಡಬಹುದು. ಯಾವುದೇ ರೀತಿಯ ಅಡ್ಡ ಪರಿಣಾಮಗಳು ಉಂಟಾಗುವುದಿಲ್ಲ, ತಕ್ಷಣ ಮನೆಗೆ ಹೋಗಬಹುದು. ಈ ಶಸ್ತ್ರಚಿಕಿತ್ಸೆ ನಂತರ 03 ತಿಂಗಳವರೆಗೆ ಲೈಂಗಿಕ ಕ್ರಿಯೆಯಲ್ಲಿ ತೊಡಗುವಾಗ ಕಡ್ಡಾಯವಾಗಿ ನಿರೋಧ್ ಬಳಸಬೇಕು. ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ದೊರೆಯುತ್ತವೆ. ಪ್ರತಿ ಕುಟುಂಬಕ್ಕೆ ಹೆಣ್ಣಾಗಲಿ ಗಂಡಾಗಲಿ ಎರಡೇ ಮಕ್ಕಳು ಸಾಕು. ಚಿಕ್ಕ ಕುಟುಂಬ ಚೊಕ್ಕ ಕುಟುಂಬ. ಚಿಕ್ಕ ಕುಟುಂಬ ಸುಖಿ ಕುಟುಂಬ. ಎನ್.ಎಸ್.ವಿ ಮಾಡಿಸಿಕೊಳ್ಳಿ ಉತ್ತಮ ಪತಿ ಅನಿಸಿಕೊಳ್ಳಿ. ಜನಸಂಖ್ಯೆ ಹೆಚ್ಚಳದಿಂದ ನಮ್ಮ ದೇಶದಲ್ಲಿ ಬಹಳಷ್ಟು ಸಮಸ್ಯೆಗಳು ಉಂಟಾಗುತ್ತವೆ. ಜನಸಂಖ್ಯೆ ನಿಯಂತ್ರಣಕ್ಕೆ ಸರ್ಕಾರ ಹಮ್ಮಿಕೊಂಡ ಇಂತಹ ಕಾರ್ಯಕ್ರಮಗಳಿಂದ ದೇಶದ ಅಭಿವೃದ್ಧಿ ಸಾಧ್ಯ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಅವರು ಮಾತನಾಡಿ, ಹುಟ್ಟಿದ 28 ದಿನದೊಳಗಿನ ಶಿಶುವಿನ ಮರಣವನ್ನು ತಡೆಗಟ್ಟುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. ನವಜಾತ ಶಿಶುವನ್ನು ಕಾಂಗರೂ ಮಾದರಿಯಲ್ಲಿ ಬೆಚ್ಚಗಿಡುವುದು, ಗಂಟೆಗೊಂದು ಬಾರಿ ತಾಯಿಯ ಎದೆಹಾಲು ನೀಡುವುದು, ಹೆರಿಗೆಯಾದ ಶಿಶುವಿಗೆ ಸೋಂಕು ಉಂಟಾಗದಂತೆ ನೋಡಿಕೊಳ್ಳುವುದಲ್ಲದೆ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಮಗುವನ್ನು ತಾಯಿಯ ಪಕ್ಕದಲ್ಲಿಯೇ ಮಲಗಿಸಿಕೊಳ್ಳಬೇಕು. ಮಗುವಿಗೆ ಒಕ್ಕಳಬಳ್ಳಿಗೆ ಏನನ್ನೂ ಹಚ್ಚಬಾರದು ಮತ್ತು ಮಗುವಿಗೆ ಚರ್ಮದ ಮೇಲೆ ಯಾವುದೇ ರೀತಿಯ ಬರೆ ಹಾಕಬಾರದು. ಹುಟ್ಟಿದ ಅರ್ಧಗಂಟೆಯೊಳಗೆ ಮಗುವಿಗೆ ತಾಯಿಯ ಎದೆಹಾಲು ನೀಡಬೇಕು. 06 ತಿಂಗಳವರೆಗೆ ಕೇವಲ ತಾಯಿಯ ಎದೆಹಾಲನ್ನು ಮಾತ್ರ ನೀಡಬೇಕು. ಇದರ ಬದಲಿಗೆ ಬೇರೇನೂ ನೀಡಬಾರದು. ಮಗುವಿಗೆ ನೀಡುವ ಎಲ್ಲಾ ಲಸಿಕೆಗಳನ್ನು ತಪ್ಪದೇ ಸರಿಯಾದ ಸಮಯಕ್ಕೆ ಹಾಕಿಸಬೇಕು. ಒಂದು ಮಗುವಿನಿಂದ ಇನ್ನೊಂದು ಮಗುವಿಗೆ ಕನಿಷ್ಠ 03 ವರ್ಷ ಅಂತರ ಕಾಪಾಡಲು ಕುಟುಂಬ ಕಲ್ಯಾಣ ಯೋಜನೆಯ ತಾತ್ಕಾಲಿಕ ವಿಧಾನಗಳನ್ನು ಅಳವಡಿಸಿಕೊಂಡು, ಮಕ್ಕಳ ಆರೋಗ್ಯವನ್ನು ಕಾಪಾಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಲೇರಿಯಾ ಲಿಂಕ್‌ವರ್ಕರ್ ಶ್ರೀನಿವಾಸ, ಉದಯ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಜಯಲಕ್ಷ್ಮೀ, ಆಶಾ ಕಾರ್ಯಕರ್ತೆ ಪೂರ್ಣಿಮಾ, ಅಂಗನವಾಡಿ ಕಾರ್ಯಾಕರ್ತೆ ಮಂಜುಳಾ ಸೇರಿದಂತೆ ಗರ್ಭಿಣಿಯರು, ಬಾಣಂತಿಯರು, ತಾಯಂದಿರು, ಕಿಶೋರಿಯರು, ನಾಗರಿಕರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಚನ್ನರಾಜ ಹಟ್ಟಿಹೊಳಿ ಜನ್ಮದಿನಕ್ಕೆ ಶುಭಾಶಯಗಳ ಮಹಾಪೂರ



ಬೆಳಗಾವಿ : ಜನ್ಮ ದಿನದ ಹಿನ್ನೆಲೆಯಲ್ಲಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರಿಗೆ ಅಪಾರ ಸಂಖ್ಯೆಯಲ್ಲಿ ಅಭಿಮಾನಿಗಳು ಶುಭ ಕೋರಿದರು.

ಬೆಳಗ್ಗೆಯಿಂದ ಸಂಜೆಯವರೆಗೂ ಸಾವಿರಾರು ಜನರು ಮನೆಗೆ ಆಗಮಿಸಿ ಶುಭ ಕೋರಿದರು. ಅನೇಕರು ತಾವೇ ಕೇಕ್ ಗಳನ್ನು ತಂದು ಚನ್ನರಾಜ ಅವರ ಹಸ್ತದಿಂದ ಕಟ್ ಮಾಡಿಸಿ ತಿನ್ನಿಸಿದರು. ಅಭಿಮಾನಿಗಳು, ಕಾರ್ಯಕರ್ತರು, ಅಧಿಕಾರಿಗಳು, ಸ್ನೇಹಿತರು, ಹಿತೈಷಿಗಳು ಇಷ್ಟೊಂದು ದೊಡ್ಡ ಸಂಖ್ಯೆಯಲ್ಲಿ ಆಗಮಿಸಿದ್ದನ್ನು ಕಂಡು ಭಾವುಕರಾದ ಚನ್ನರಾಜ ಹಟ್ಟಿಹೊಳಿ, ಜನರ ಈ ಪ್ರೀತಿ, ವಿಶ್ವಾಸವೇ ನಮ್ಮನ್ನು ಈ ಮಟ್ಟಕ್ಕೆ ಬೆಳೆಸಿದೆ. ಜನರ ವಿಶ್ವಾಸಕ್ಕೆ ಚಿರ ಋಣಿಯಾಗಿರುವೆ. ಇದನ್ನು ಉಳಿಸಿಕೊಂಡು ಹೋಗುತ್ತೇನೆ ಎಂದು ತಿಳಿಸಿದರು.

# ಅರಣ್ಯ ಇಲಾಖೆ ನ. ೩೦ ರಂದು ಮರ ತೆರವಿಗೆ ಬಹಿರಂಗ ಹರಾಜು



ಧಾರವಾಡ : ಕಲಘಟಗಿ ವಲಯದ ಮುಂಡಗೋಡ ರಸ್ತೆಯ ಕೆ.ಎ.ಬಿ ಕಾಲೋನಿ ರಸ್ತೆ ಪಕ್ಕದಲ್ಲಿ ಬೆಳೆದ ಅಪಾಯಕಾರಿ ಸ್ಥಿತಿಯಲ್ಲಿರುವ ಬೇವಿನ ಮರ ಮಳೆ–ಗಾಳಿಗೆ ಟಿಪ್ಪರ ವಾಹನದ ಮೇಲೆ ಬಿದ್ದಿದ್ದು, ಮರವನ್ನು ಇದ್ದ ಸ್ಥಿತಿಯಲ್ಲಿ ತೆರುವುಗೊಳಿಸಲು ಕಲಘಟಗಿ ವಲಯ ಅರಣ್ಯ ಅಧಿಕಾರಿ ಕಛೇರಿಯಲ್ಲಿ ನವೆಂಬರ 30, 2024 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.

ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (ಗಿಖಖ) ರ ಸೆಕ್ಷನ್‌ಗಳಲ್ಲಿ ಅಗತ್ಯ ಪಡಿಸಿರುವಂತೆ ಈ ಬಗ್ಗೆ ತಕರಾರು ಸಲ್ಲಿಸ ಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ, ಧಾರವಾಡ ಹಾಗೂ ಧಾರವಾಡದ ಕೆ.ಸಿ.ಪಾರ್ಕ ಎದುರು ಅರಣ್ಯ ಸಂಕೀರ್ಣದಲ್ಲಿರುವ ಮರ ಅಧಿಕಾರಿಯವರಿಗೆ ಲಿಖಿತ ರೂಪದಲ್ಲಿ ನವೆಂಬರ 29, 2024 ರ ಒಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆ

# ಗ್ಯಾರಂಟಿ ಯೋಜನೆಗಳ ಮಾಹಿತಿ ಸಾರ್ವಜನಿಕರಿಗೆ ತಲುಪಿಸಿ – ರೆಡ್ಡಿ ಶ್ರೀನಿವಾಸ

ಕೊಪ್ಪಳ : ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಹೆಚ್ಚು ಪ್ರಚಾರ ನೀಡುವುದರ ಮೂಲಕ ಸಾರ್ವಜನಿಕರಿಗೆ ಈ ಯೋಜನೆಗಳ ಮಾಹಿತಿ ತಲುಪಿಸುವ ಕೆಲಸವನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮಾಡಬೇಕೆಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಎಚ್ ಪಟೇಲ್ ಸಭಾಂಗಣದಲ್ಲಿ ನಡೆದ ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಜನ ಸಾಮಾನ್ಯರ ಏಳ್ಗೆಗಾಗಿ ರಾಜ್ಯ ಸರ್ಕಾರವು ಶಕ್ತಿ ಯೋಜನೆ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಯುವನಿಧಿ, ಈ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಜನಪರವಾದ ಈ ಕಾರ್ಯಕ್ರಮಗಳನ್ನು ಕೊಪ್ಪಳ ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಿ ಇವುಗಳ ಲಾಭವನ್ನು ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ಸಿಗಬೇಕು. ಯಾವುದೇ ಅರ್ಹ ಫಲಾನುಭವಿಗಳು ಈ ಯೋಜನೆಗಳಿಂದ ಹೊರಗುಳಿಯದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಪ್ರತಿ ತಿಂಗಳು ನಡೆಯುವ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸಭೆಯ ನಡುವಳಿಗಳನ್ನು ಆಯಾ ತಿಂಗಳ 15ನೇ ತಾರೀಖಿನೊಳಗೆ ಜಿಲ್ಲಾ ಸಮಿತಿಗೆ ಸಲ್ಲಿಸಿಬೇಕು. ಇದರಿಂದ ಜಿಲ್ಲಾ ಮಟ್ಟದಲ್ಲಿ ಚರ್ಚೆ ಮಾಡಲು ಅವಶ್ಯಕವಿರುವ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲು ಅನುಕೂಲವಾಗುತ್ತದೆ ಎಂದು ತಾಲೂಕ ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರುಗಳಿಗೆ ತಿಳಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಬಾಕಿ ಇರುವ ಅರ್ಜಿಗಳ ವಿಲೇವಾರಿ ಮಾಡಲು ಆಯಾ ತಾಲೂಕಿನ ಸಿ.ಡಿ.ಪಿ.ಓಗಳು ಕ್ರಮ ವಹಿಸಬೇಕು. ಬಸ್ ವ್ಯವಸ್ಥೆಗಳ ಸರಿಯಾಗಿ ನಿರ್ವಹಣೆಗೆ ಸೂಕ್ತ ಕ್ರಮ ವಹಿಸಬೇಕೆಂದು ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಬಿಪಿಎಲ್ ಕಾರ್ಡ್ ವಿತರಣೆಗೆ ಕ್ರಮ ಕೈಗೊಳ್ಳಿ. ನ್ಯಾಯಬೆಲೆ ಅಂಗಡಿಗಳನ್ನು ಸರಿಯಾದ ಸಮಯಕ್ಕೆ ತೆರೆದು ಜನರಿಗೆ ಆಹಾರ ಧಾನ್ಯಗಳನ್ನು ಸರಿಯಾದ ಪ್ರಮಾಣದಲ್ಲಿ ವಿತರಿಸಬೇಕು. ಸಾರ್ವಜನಿಕರೊಂದಿಗೆ ಉತ್ತಮ ರೀತಿಯಲ್ಲಿ ವ್ಯವಹರಿಸುವಂತೆ ಎಲ್ಲಾ ನ್ಯಾಯಾಬೆಲೆ ಅಂಡಿಗಳ ಮಾಲೀಕರಿಗೆ ನಿರ್ದೇಶನ ನೀಡಬೇಕು ಮತ್ತು ನ್ಯಾಯಾಬೆಲೆ ಅಂಗಡಿಗಳಲ್ಲಿ ಸಿಸಿ ಟಿವಿ ಅಳವಡಿಸಲು ಕ್ರಮ ವಹಿಸಿ.

ಗೃಹಲಕ್ಷ್ಮಿ: ಈ ಯೋಜನೆಯಡಿ ಕೊಪ್ಪಳ ಜಿಲ್ಲೆಯಲ್ಲಿ 3,21,494 ಜನ ಮನೆ ಯಜಮಾನಿಯರು ನೋಂದಣಿ ಮಾಡಿಕೊಂಡಿದ್ದು, ಆಗಸ್ಟ್2023 ರಿಂದ ಆಗಸ್ಟ್–2024 ರವರೆಗೆ ಡಿ.ಬಿ.ಟಿ. ಮೂಲಕ ಒಟ್ಟು 779 ಕೋಟಿ 35 ಲಕ್ಷ 72 ಸಾವಿರ ರೂ.ಗಳನ್ನು ಪಾವತಿಸಲಾಗಿರುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಗೃಹ ಜ್ಯೋತಿ: ಈ ಯೋಜನೆಯಡಿ ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 2,75,487 ಫಲಾನುಭವಿಗಳು ನೋಂದಣಿಯಾಗಿರುತ್ತಾರೆ. ಆಗಸ್ಟ್–2023 ರಿಂದ ಅಕ್ಟೋಬರ್–2024ರ ಅಂತ್ಯಕ್ಕೆ ಸಬ್ಸಿಡಿ ಮೂಲಕ ಒಟ್ಟು 162.3 ಕೋಟಿ ರೂ.ಗಳನ್ನು ಈ ಯೋಜನೆಗೆ ಪಾವತಿಸಲಾಗಿದ್ದು, ಶೇ 97.10ರಷ್ಟು ಪ್ರಗತಿ ಜಿಲ್ಲೆಯಲ್ಲಿ ಸಾಧಿಸಲಾಗಿದೆ ಎಂದು ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಸಭೆಗೆ ತಿಳಿಸಿದರು.

ಯುವನಿಧಿ: ಯೋಜನೆಯಡಿ ಡಿಸೆಂಬರ್–2023 ರಿಂದ ಇಲ್ಲಿಯವರೆಗೆ 14,265 ಪದವಿಧರರಿಗೆ ತಿಂಗಳಿಗೆ ರೂ. 3,000 ರಂತೆ ಹಾಗೂ 182 ಡಿಪ್ಲೋಮಾ ಅಭ್ಯರ್ಥಿಗಳಿಗೆ ತಿಂಗಳಿಗೆ ರೂ. 1,500 ರಂತೆ ಒಟ್ಟು 14,447 ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಹಣ ವರ್ಗಾಯಿಸಲಾಗಿದ್ದು, ಇದಕ್ಕಾಗಿ ಒಟ್ಟು ಮೊತ್ತ 4.30 ಕೋಟಿ ರೂ. ಗಳನ್ನು ಪಾವತಿಸಲಾಗಿರುತ್ತದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಅಧಿಕಾರಿಗಳು ತಿಳಿಸಿದರು.

ಅನ್ನಭಾಗ್ಯ: ಯೋಜನೆಯಡಿ ಕೊಪ್ಪಳ ಜಿಲ್ಲೆಯಲ್ಲಿರುವ ಒಟ್ಟು 3,22,209 ಪಡಿತರ ಚೀಟಿಗಳ ಪೈಕಿ ಆಗಸ್ಟ್–2024ರ ಮಾಹೆಗೆ 2,94,969 ಪಡಿತರ ಚೀಟಿಗಳಿಗೆ 17.98 ಕೋಟಿ ರೂ.ಗಳನ್ನು ಪಾವತಿಸಲು ಕ್ರಮವಹಿಸಲಾಗಿದೆ. ಇದರಲ್ಲಿ 2,35,108 ಪಡಿತರ ಚೀಟಿಗಳಿಗೆ ಈಗಾಗಲೇ ಡಿಬಿಟಿ ಮೊತ್ತವನ್ನು ಪಾವತಿಸಲಾಗಿದೆ ಹಾಗೂ ಉಳಿದ 59,861 ಚೀಟಿಗಳಿಗೆ 3.64 ಕೋಟಿ ರೂ. ಪಾವತಿ ಕಾರ್ಯ ಪ್ರಗತಿಯಲ್ಲಿದೆ ಎಂದು ಆಹಾರ ಇಲಾಖೆಯ ಅಧಿಕಾರಿಗಳು ಮಾಹಿತಿ ನೀಡಿದರು.

ಶಕ್ತಿ ಯೋಜನೆ: ಶಕ್ತಿ ಯೋಜನೆಯಡಿ ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 5.45 ಕೋಟಿ ಮಹಿಳಾ ಪ್ರಯಾಣಿಕರು ಈ ಯೋಜನೆಯಡಿ ಜೂನ್–2023 ರಿಂದ ಅಕ್ಟೋಬರ್–2024 ರವರೆಗೆ ಉಚಿತವಾಗಿ ಪ್ರಯಾಣಿಸಿದ್ದಾರೆ ಎಂದು ಕಲ್ಯಾಣ ಕರ್ನಾಟಕದ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗದ ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಬಿ ಖಾದ್ರಿ, ಅಮರೇಶಪ್ಪ ಎಸ್.ಜಿ., ನಾಗರಜ ಅರಳಿ ಹಾಗೂ ಖಾಸಿಂ ಸಾಬ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಮುಖ್ಯ ಯೋಜನಾ ನಿರ್ದೇಶಕ ಡಿ.ಮಂಜುನಾಥ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಜಿಲ್ಲಾ ಉದ್ಯೋಗ್ಯ ವಿನಿಮತ ಅಧಿಕಾರಿ ಪ್ರಾಣೇಶ್, ಮಹಿಳಾ ಮತ್ತು ಮಕ್ಕಳು ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರುಶುರಾಮ ವೈ.ಎಸ್., ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ಹಾಗೂ ತಾಲ್ಲೂಕಾ ಅಧ್ಯಕ್ಷರು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಿಡಿಓ ಆಫ್ ದಿ ಮಂತ್ ಪ್ರಶಸ್ತಿಗೆ ಜಯಲಕ್ಷ್ಮೀ ಬಿ. ಭಾಜನ

ಕಾರವಾರ – ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ನಿಂದ ಪ್ರತಿ ತಿಂಗಳು ನೀಡಲಾಗುವ ಜಿಲ್ಲಾ ಮಟ್ಟದ ನವೆಂಬರ್ ತಿಂಗಳ ಪಿಡಿಓ ಆಫ್ ದಿ ಮಂತ್ ಪ್ರಶಸ್ತಿಗೆ ಭಾಜನಾರದ ಶಿರಸಿ ತಾಲ್ಲೂಕಿನ ಇಟಗುಳಿ ಗ್ರಾಮ ಪಂಚಾಯತ್‌ನ ಅಭಿವೃದ್ಧಿ ಅಧಿಕಾರಿ ಜಯಲಕ್ಷ್ಮೀ ಬಿ. ರವರಿಗೆ ಗುರುವಾರ ಕಾರವಾರದ ಜಿಲ್ಲಾ ಪಂಚಾಯತ್ ಕಛೇರಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅವರು ಪ್ರಶಸ್ತಿ ಪತ್ರ ನೀಡಿ, ಅಭಿನಂದಿಸಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಜಯಲಕ್ಷ್ಮೀ ಬಿ. ಅವರು, ಗ್ರಾಮ ಮಟ್ಟದಲ್ಲಿ ಸಮಸ್ಯೆಗಳ ನಿವಾರಣೆ ಹಾಗೂ ಜನರ ಜೀವನ ಸುಧಾರಣೆಗಾಗಿ ನಿರಂತರ ಶ್ರಮಿಸುವ ಪಿಡಿಓ ಗಳ ಕಾರ್ಯವನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಮೇಲಾಧಿಕಾರಿಗಳು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸುವುದು ಅತ್ಯಂತ ಖುಷಿಯ ಜೊತೆಗೆ ಪ್ರಶಂಸನೀಯ ಸಂಗತಿಯಾಗಿದೆ ಎಂದರು.

ಈ ತರಹದ ಪುರಸ್ಕಾರಗಳಿಂದ ಗ್ರಾಮೀಣ ಜನರಿಗೆ ಸರಕಾರದ ವಿವಿಧ ಯೋಜನೆಗಳ ಸಿಗುವಂತಹ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಲು ಪ್ರೇರಣೆ ಸಿಕ್ಕಂತಾಗಿದೆ. ವಿಕೇಂದ್ರೀಕರಣ ವ್ಯವಸ್ಥೆಯಡಿ ಸ್ಥಾಪಿತವಾದ ಗ್ರಾಮ ಪಂಚಾಯತ್ ಗ್ರಾಮೀಣ ಜನರಿಗೆ ಅತೀ ಅವಶ್ಯಕ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತ ಮಹತ್ತರ ಪಾತ್ರವಹಿಸುತ್ತಿದೆ. ಇಲ್ಲಿ ಮೇಲಾಧಿಕಾರಿಗಳ ಮಾರ್ಗದರ್ಶನ, ಚುನಾಯಿತ ಜನಪ್ರತಿನಿಧಿಗಳ ಸಹಕಾರ, ಸಿಬ್ಬಂದಿ ವರ್ಗದವರ ಕಾರ್ಯ ನಿರ್ವಹಣೆಯಿಂದ ಮಾತ್ರ ಉತ್ತಮವಾಗಿ ಕಾರ್ಯ ನಿರ್ವಹಿಸಲು ಸಾಧ್ಯವಿದ್ದು, ಸಹಕರಿಸಿದ ಹಾಗೂ ಪ್ರಶಸ್ತಿಗೆ ಪರಿಗಣಿಸಿದ ಪ್ರತಿಯೊಬ್ಬರಿಗೂ ಕೃತಜ್ಞತೆ ತಿಳಿಸಿದರು.

ಜಯಲಕ್ಷ್ಮೀ ಬಿ. ಅವರು ಬಿಇ ಪದವಿದರರಾಗಿದ್ದು, 2018ರಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಸೇವೆ ಪ್ರಾರಂಭಿಸಿದ್ದಾರೆ. ಪ್ರಶಸ್ತಿ ಪುರಸ್ಕೃತರು ಈ ಹಿಂದೆ ಬದನಗೋಡ, ಸುಗಾವಿ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದು, ಪ್ರಸ್ತುತ ಇಟಗುಳಿ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುತ್ತಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್‌ನ ಆಡಳಿತ ಶಾಖೆಯ ಉಪ ಕಾರ್ಯದರ್ಶಿ ನಾಗೇಶ ರಾಯ್ಕರ್, ಯೋಜನಾ ನಿರ್ದೇಶಕ ಕರೀಂ ಅಸಾದಿ, ಮುಖ್ಯ ಲೆಕ್ಕಾಧಿಕಾರಿ ಆನಂದಸಾ ಹಬೀಬ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪಾವಿನಕುರ್ವೆ ಬಂದರು ಅಭಿವೃದ್ಧಿಗಾಗಿ ಜಾಗತಿಕ ಟೆಂಡರ್

ಕಾರವಾರ – ಕರ್ನಾಟಕ ಜಲಸಾರಿಗೆ ಮಂಡಳಿ ವತಿಯಿಂದ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲ್ಲೂಕಿನ ಪಾವಿನಕುರ್ವೆಯಲ್ಲಿ ಖಾಸಗಿ ಸಹಭಾಗಿತ್ವದಡಿಯಲ್ಲಿ 14 MTPA ಸಾಮರ್ಥ್ಯದ ಸರ್ವಋತು ಬಂದರಿನ ಅಭಿವೃದ್ಧಿಗಾಗಿ ಈಗಾಗಲೇ ಜಾಗತಿಕ ಟೆಂಡರ್ ಕರೆಯಲಾಗಿದೆ.

ಈ ಬಂದರಿನ ಮೂಲಕ ಕಬ್ಬಿಣದ ಅದಿರು, ಕಲ್ಲಿದ್ದಲು ಮತ್ತು ಕೋಕಿಂಗ್ ಕಲ್ಲಿದ್ದಲು, ಸುಣ್ಣದ ಕಲ್ಲು ಮತ್ತು ಡಾಲಮೈಟ್, ಹಸಿರು ಹೈಡ್ರೋಜನ್, ಹಸಿರು ಅಮೋನಿಯಾ, ದ್ರವೀಕೃತ ನೈಸರ್ಗಿಕ ಅನಿಲ ಮತ್ತು ಸಿದ್ಧಪಡಿಸಿದ ಉಕ್ಕಿನ ಉತ್ಪನ್ನಗಳು ಮುಂತಾದ ಸರಕುಗಳನ್ನು ನಿರ್ವಹಿಸಬಹುದಾಗಿದೆ.

ಬಂದರಿನ ಆರಂಭದಲ್ಲಿ 14 MTPA (ಮಿಲಿಯನ್ ಟನ್ ಪ್ರತಿ ವರ್ಷ) ಸಾಮರ್ಥ್ಯದ ಕಾರ್ಗೋ ನಿರ್ವಹಣೆಗೆ ಯೋಜಿಸಲಾಗಿದ್ದು, ಭವಿಷ್ಯದಲ್ಲಿ ಸುಮಾರು 40 ಒಖಿಕಂ ಗೆ ವಿಸ್ತರಿಸುವ ಸಾಧ್ಯತೆಯನ್ನು ಹೊಂದಿದೆ. ಈ ಬಂದರು 1,80,000 ಆಫಖಿ ಸಾಮರ್ಥ್ಯದ ಬೃಹತ್ ಗಾತ್ರದ ಹಡಗುಗಳನ್ನು ನಿರ್ವಹಿಸಲು ಆಧುನಿಕ, ಪರಿಸರ ಸ್ನೇಹಿ ಮತ್ತು ಹೆಚ್ಚಿನ ಸಾಮರ್ಥ್ಯದ ಉಪಕರಣಗಳೊಂದಿಗೆ ಆಳವಾದ ವಾಣಿಜ್ಯ ಹಡಗುಗಳು ತಂಗಲು ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಅಳವಡಿಸಲು ಅವಕಾಶವಿರುತ್ತದೆ.

ಬಂದರಿನ ಸುಗಮ ನಿರ್ವಹಣೆಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸುಮಾರು 214 ಹೆಕ್ಟರ್ ಬಂದರು ಜಾಗೆ ಲಭ್ಯವಾಗುವ ಸಾಧ್ಯತೆಯಿದೆ. ಉದ್ದೇಶಿತ ಬಂದರು ಜಾಗೆಯನ್ನು ಹೂಳೆತ್ತುವಿಕೆಯ ಮಣ್ಣಿನಿಂದ ಭರಾವು ಮಾಡಿ ಸೃಜಿಸಲಾಗುತ್ತದೆ. ಸದರಿ ಬಂದರಿನ ಅಭಿವೃದ್ಧಿಗೆ ಯೋಜನಾ ವೆಚ್ಚ 3,047.86 ಕೋಟಿ ರೂ. ಎಂದು ಅಂದಾಜಿಸಲಾಗಿದ್ದು, ಉದ್ದೇಶಿತ ಪಾವಿನಕುರ್ವೆ ಬಂದರಿನ ಅಭಿವೃದ್ಧಿಗಾಗಿ ಆಸಕ್ತ ಬಿಡ್ಡುದಾರರಿಗೆ ಎಲ್ಲಾ ರೀತಿಯ ಸಹಾಯ, ಸಹಕಾರವನ್ನು ನೀಡಲು ಕರ್ನಾಟಕ ಜಲಸಾರಿಗೆ ಮಂಡಳಿಯು ಬದ್ಧವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಕೋಲಸಿರ್ಸಿ ಗ್ರಾಮ ಪಂಚಾಯತ್‌ನಲ್ಲಿ "ರೋಜಗಾರ್ ದಿನ" ಆಚರಣೆ




ಕಾರವಾರ – ಸಿದ್ದಾಪುರ ತಾಲೂಕಿನ ಕೋಲಸಿರ್ಸಿ ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಶುಕ್ರವಾರ 2025–26ನೇ ಸಾಲಿನ ನರೇಗಾ ಕಾರ್ಮಿಕ ಆಯವ್ಯಯ ತಯಾರಿಕೆ ನಿಮಿತ್ತ "ನರೇಗಾ ನಡಿಗೆ ಸುಸ್ಥಿರತೆಯಡೆಗೆ" ಅಭಿಯಾನದಡಿ 'ರೋಜಗಾರ ದಿವಸ್' ಆಚರಿಸಲಾಯಿತು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಗುಡ್ಡೆಕೇರಿಯಿಂದ ಹಿತ್ಲಕೈ ವರೆಗೆ ಕೈಗೊಂಡಿರುವ ಕಚ್ಚಾ ರಸ್ತೆ ದುರಸ್ಥಿ ಕಾಮಗಾರಿ ಸ್ಥಳದಲ್ಲಿ ಸೇರಿರುವ ಕೂಲಿಕಾರರಿಗೆ ಉದ್ಯೋಗ ಖಾತರಿ ಯೋಜನೆಯಡಿ ಸಿಗುವ ವೈಯಕ್ತಿಕ ಹಾಗೂ ಸಾಮುದಾಯಿಕ ಕಾಮಗಾರಿ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವವರು ನ. 30 ರೊಳಗಾಗಿ ಗ್ರಾಮ ಪಂಚಾಯತ್‌ನಲ್ಲಿ ಕಾಮಗಾರಿ ಬೇಡಿಕೆ ಅರ್ಜಿಗಳನ್ನು ನೀಡಬಹುದಾಗಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುಬ್ರಹ್ಮಣ್ಯ ಹೆಗಡೆ ತಿಳಿಸಿದರು.

ನರೇಗಾದಡಿ 349ರೂ ಕೂಲಿಯೊಂದಿಗೆ ಕುಟುಂಬವೊಂದಕ್ಕೆ 100 ದಿನಗಳ ಕೆಲಸ. ಕುಟುಂಬವೊಂದು ಜೀವಿತಾವಧಿಗೆ ವೈಯಕ್ತಿಕ ಕಾಮಗಾರಿಗಳಿಗೆ 5 ಲಕ್ಷದವರೆಗೆ ಸಹಾಯಧನ ಪಡೆಯಬಹುದಾಗಿದೆ. ಇನ್ನೂ ರೈತರು ಕೃಷಿಗೆ ಹೆಚ್ಚಿನ ಆದ್ಯತೆ ನೀಡಿ ಕೃಷಿ ಹೊಂಡ, ಕೃಷಿ ಬಾವಿ, ಬದು ನಿರ್ಮಾಣ, ಇಂಗುಗುಂಡಿ ಇತ್ಯಾದಿ ಕೃಷಿ ಮತ್ತು ತೋಟಗಾರಿಕಾ ಇಲಾಖೆಯಡಿಯೂ ಸಹ ಸಾಕಷ್ಟು ಕಾಮಗಾರಿಗಳನ್ನು ಪಡೆಯಬಹುದಾಗಿದೆ ಎಂದು ತಾಲೂಕು ಐಇಸಿ ಸಂಯೋಜಕಿ ಪೂರ್ಣಿಮಾ ಗೌಡ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಹಾಜರಿದ್ದರು.

# ಇತಿಹಾಸ ಬಲ್ಲವರು ಮಾತ್ರ ಇತಿಹಾಸ ಸೃಷ್ಟಿಸ ಬಲ್ಲರು



ಗದಗ : ಇತಿಹಾಸ ಬಲ್ಲವರು ಮಾತ್ರ ಇತಿಹಾಸ ಸೃಷ್ಟಿಸುತ್ತಾರೆ, ಪಾರಂಪರಿಕ ಲಕ್ಕುಂಡಿ ಕ್ಷೇತ್ರದ ಅನ್ವೇಷಣೆ ಮೂಲಕ ಇತಿಹಾಸ ತಿಳಿದು ಲಭ್ಯವಿರುವ ಪ್ರಾಚ್ಯ ವಸ್ತುಗಳನ್ನು ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ ವಾಗಿದೆ ಎಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ನಲ್ಲಿ ಶುಕ್ರವಾರ ಪ್ರವಾಸೋದ್ಯಮ ಇಲಾಖೆ ಬೆಂಗಳೂರು,ಮೈಸೂರಿನ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ,ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಹಾಗೂ ಗ್ರಾಮ ಪಂಚಾಯತ ಲಕ್ಕುಂಡಿಇವರುಗಳ ಸಹಯೋಗದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆ ನಿಮಿತ್ಯ ಅಧಿಕಾರಿಗಳಿಗೆ ಹಾಗೂ ಸ್ವಯಂ ಸೇವಕರಿಗೆ ತರಬೇತಿ ಕಾರ್ಯಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಕ್ಕುಂಡಿಯ ಮನೆಗಳಲ್ಲಿ, ಅಂಗಳದಲ್ಲಿ, ತಿಪ್ಪೆಗಳಲ್ಲಿ ಸ್ಮಾರಕಗಳು ಇದೆ, ಜನರಿಗೆ ಅದರ ಬಗ್ಗೆ ಅರಿವಿಲ್ಲದೆ ಇದ್ದರು,ಲಭ್ಯವಿರುವ ಶಾಸನ,ಶಿಲೆ,ಸ್ಮಾರಕ,ನಾಣ್ಯ ಕುರಿತು ಜನರಲ್ಲಿ ಅರಿವು ಪ್ರಾಚ್ಯಾ ವಸ್ತುಗಳನ್ನು ಅವರಿಂದ ಪಡೆದುಕೊಂಡು ಶೇಖರಣೆ ಮಾಡುವುದು ಈ ಕಾರ್ಯಗಾರದ ಮುಖ್ಯ ಉದ್ದೇಶವಾಗಿದೆ, ಲಕ್ಕುಂಡಿಗೆ ತೆರಳಿ ಸಚಿವರ ಸಂದೇಶ ಪತ್ರವನ್ನು ನೀಡಿ ಯಾವ ಓಣಿಗಳಲ್ಲಿ ಯಾರ ಮನೆಗಳಲ್ಲಿ ಸ್ಮಾರಕಗಳು ಲಭ್ಯವಿದೆ ಎನ್ನುವ ಮಾಹಿತಿಯನ್ನು ಕಲೆಹಾಕಿ ಪಟ್ಟಿಮಾಡಿ ಅಂತಹ ಮನೆಗಳನ್ನು ಗುರುತು ಮಾಡಬೇಕು ಎಂದು ಹೇಳಿದರು.

ಸಚಿವರು,ಅಧಿಕಾರಿಗಳು,ಸ್ವಯಂ ಸೇವಕರನ್ನು ಒಳಗೊಂಡ ತಂಡದ ಜೊತೆಗೆ ಈಗಾಗಲೇ ಗುರುತು ಮಾಡಿರುವ ಮನೆಗಳಿಗೆ ಹೋಗಿ ಪ್ರಾಚ್ಯ ವಸ್ತುಗಳನ್ನು ನೀಡುವ ಬಗ್ಗೆ ರಶೀದಿ ನೀಡಿ ಪುರಾತನ ವಸ್ತಗಳ ಭಾರದ ಆಧಾರದ ಮೇಲೆ ವಸ್ತುಗಳನ್ನು ಪಾಲಕಿಯಲ್ಲಿ,ಟ್ಯಾಕ್ಟರ್ ಗಳಲ್ಲಿ ಸಂಗ್ರಹಿಸುವ ಕಾರ್ಯವಾಗಬೇಕು ಎಂದು ನುಡಿದರು.

ಈ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯವು ವಿದ್ಯಾರ್ಥಿ ಜೀವನದಲ್ಲಿಯೇ ಅತ್ಯುತ್ತಮ ಪ್ರಯೋಗಿಕ ಮತ್ತು ಉತ್ತಮ ಅನುಭವ ನೀಡುವ ಕೆಲಸವಾಗಲಿದೆ ವಿದ್ಯಾರ್ಥಿಗಳು ಈ ಸಮಯವನ್ನು ಸದ್ಬಳಕೆ ಮಾಡಿಕೊಂಡು ಎಲ್ಲರಿಗೂ ಸಹಕಾರ ನೀಡಿ ಪ್ರಾಚ್ಯಾವಶೇಷಗಳ ಅನ್ವೇಷಣೆಯನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ನಿರ್ದೇಕರರಾದ ಸ್ಮಿತಾ ಅವರು ಮಾತನಾಡಿ ರಾಜರ ಕಾಲದಲ್ಲಿ ಲಕ್ಕುಂಡಿಯಲ್ಲಿ ಠಂಕಸಾಲೆ ಇತ್ತು ಎಂದು ಶಾಸನಗಳಲ್ಲಿ ಉಲ್ಲೇಖವಿದೆ ಹಾಗಾಗಿ ಲಕ್ಕುಂಡಿಯಲ್ಲಿ ಮಹತ್ವ ಹಾಗೂ ಮೌಲ್ಯವಿತವಾದ ಶಾಸನ ನಾಣ್ಯ ಸ್ಮಾರಕದ ಸಂಪತ್ತಿದೆ,ಮಣ್ಣಿನಲ್ಲಿ ಹುದುಗಿಹೋದ ಮರಳಿ ತೆಗೆಯುವ ಕಾರ್ಯ ಆಗಬೇಕು ಪ್ರಾಚ್ಯಾವಶೇಷಗಳ ಅನ್ವೇಷಣೆಯಲ್ಲಿ ಕಣ್ಣಿಗೆ ಕಾಣುವ ಶಾಸನ,ಶಿಲ್ಪಕಲೆ ದೇವಾಲಯ ಕುರಿತು ಸ್ಥಳೀಯರಿಗೆ ಇರುವ ಮಾಹಿತಿ ಅವರ ಆಚರಣೆಯನ್ನು ದಾಖಲಿಸಕೊಂಡು ಪ್ರತಿಯೊಬ್ಬರ ಸಹಕಾರದಿಂದ ಲಕ್ಕುಂಡಿಂಯಲ್ಲಿ ಲಭ್ಯವಾಗುವ ಪ್ರಾಚ್ಯವಸ್ತುಗಳನ್ನು ಸಂಗ್ರಹಿಸಿ ವಸ್ತು ಸಂಗ್ರಹಾಲಯ ಮಾಡಿ ಜಾಗತಿಕವಾಗಿ ಲಕ್ಕುಂಡಿಯ ಬಗ್ಗೆ ಗಮನ ಸೆಳೆದು ವಿಶ್ವದ ಪ್ರಸಿದ್ಧ ತಾಣವಾಗಿ ಮಾಡವ ಕಾರ್ಯವಾಗಬೇಕು ಎಂದು ಹೇಳಿದರು.


ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಆಯುಕ್ತರಾದ ಶರಣು ಗೋಗೇರಿ ಮಾತನಾಡಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಮಟ್ಟದ ಸಲಹಾ ಸಮಿತಿ ಅಧ್ಯಕ್ಷರಾದ ಎಚ್ ಕೆ ಪಾಟೀಲ ಮತ್ತು ಶಾಸಕ ಸಿ.ಸಿ.ಪಾಟೀಲ ಹಾಗೂ ವಿವಿಧ ಇಲಾಖೆಗಳ ಮುಖ್ಯಸ್ಥರುಗಳ ನೇತೃತ್ವದಲ್ಲಿ ಜರುಗುವ ಪ್ರಾಚ್ಯಾವಶೇಷಗಳ ಅನ್ವೇಷಣೆ ತಂಡಗಳ ವಿವರ ನೀಡಿ,ತಂಡದ ಕಾರ್ಯ ಹಾಗೂ ರೂಪರೇಶೆ ತಿಳಿಸಿ ಸಂಪೂರ್ಣ ಪ್ರಾಚ್ಯಾವಶೇಷಗಳ ಅನ್ವೇಷಣೆ ಬಗ್ಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಎನ್ ಎಸ್ ಎಸ್, ಎನ್ ಸಿಸಿ,ಸ್ವಯಂ ಸೇವಕರು,ಪ್ರವಾಸಿ ಗೈಡ್,ಇತಿಹಾಸ ಉಪನ್ಯಾಸಕರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಜರಿದ್ದರು.

# ಅಪರಿಚಿತ ವ್ಯಕ್ತಿ ಸಾವು : ವಾರಸುದಾರರ ಪತ್ತೆಗೆ ಮನವಿ

ಕಾರವಾರ – ಅಂದಾಜು 35 ರಿಂದ 40 ವರ್ಷದ ಅಪರಿಚಿತ ಗಂಡಸು,

ನಂದನಗ್ಗಾದ ನ್ಯೂ ಹೈ ಸ್ಕೂಲ್ ಮುಂದುಗಡೆ ರಸ್ತೆಯ ಪಕ್ಕದಲ್ಲಿ ಅಸ್ವಸ್ತ ಸ್ಥಿತಿಯಲ್ಲಿದವನನ್ನು 122 ಪೋಲೀಸರು ಹಾಗೂ 18 ಅಂಬ್ಯುಲೇನ್ಸ್ ಸಹಾಯದಿಂದ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದಾಗ ವೈದರು ಆತನ ಮೃತ ಪಟ್ಟ ಬಗ್ಗೆ ತಿಳಿಸಿದ್ದು, ಆತನು ಸಾರಾಯಿ ನಶೆಯಿಂದಲೋ, ಆತನಿಗಿರುವ ಖಾಯಿಲೆಯಿಂದಲೋ, ಅಥವಾ ಇನ್ಯಾವುದೋ ಕಾರಣಗಳಿಂದ ಮೃತ ಪಟ್ಟಿದ್ದು, ಮೃತನ ಸಾವಿನಲ್ಲಿ ಸಂಶಯ ಕಂಡು ಬರುತ್ತಿದ್ದು, ಮೃತ ದೇಹವನ್ನು ಕಾರವಾರದ ಜಿಲ್ಲಾ ಆಸ್ಪತ್ರೆಯ ಶವಾಗಾರದಲ್ಲಿ ಇಡಲಾಗಿದೆ. ಈವರೆಗೂ ಆತನ ಹೆಸರು, ವಿಳಾಸ ಹಾಗೂ ವಾರಸುದಾರರ ಪತ್ತೆಯಾಗಿದ್ದು ಇರುವುದಿಲ್ಲ. ಅಪರಿಚಿತ ಶವದ ವಿವರ: ವಯಸ್ಸು ಸುಮಾರು 35–40 ವರ್ಷ ಎತ್ತರ 5.6 ಅಡಿ ಎತ್ತರ, ಸಣಕಲು ದೇಹ, ಗೋಧಿ ವರ್ಣದವನಾಗಿದ್ದು, ಗುಲಾಬಿ ಬಣ್ಣದ ಟೀ ಶರ್ಟ್ ಹಾಗೂ ಜಿನ್ಸ್ ಬರ್ಮುಡಾ ಚಡ್ಡಿ ಧರಿಸಿರುತ್ತಾನೆ. ಇತನ ಎದೆಯ ಬಲಬದಿ ಇಂಗ್ಲೀಷ್ ಅಕ್ಷರದಿಂದ ಪಿ. ಲಕ್ಷ್ಮೀ ಎಂದು ಟ್ಯಾಟೋ ಹಾಕಿಸಿಕೊಂಡಿದ್ದಾನೆ. ಈ ಮೇಲಿನ ಚಹರೆಯುಳ್ಳ ಮೃತ ದೇಹದ ಗಂಡಸಿನ ಮತ್ತು ವಾರಸುದಾರರು ಮಾಹಿತಿಯಿದ್ದಲ್ಲಿ ಕಾರವಾರ ಶಹರ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 8382226333, 9480805245 ನ್ನು ಸಂಪರ್ಕಿಸುವಂತೆ ಕಾರವಾರ ಶಹರ ಪೊಲೀಸ್ ಠಾಣೆಯ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರ ಜಿಲ್ಲಾ ಪ್ರವಾಸ



ಗದಗ : ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರ ನವೆಂಬರ್ 23 ಹಾಗೂ 24 ರ ಗದಗ ಜಿಲ್ಲಾ ಪ್ರವಾಸದ ವಿವರ ಇಂತಿದೆ.

ನವೆಂಬರ್ 23 ರಂದು ಗದಗ ನಲ್ಲಿ ನಿಯೋಜಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಸಾಯಂಕಾಲ 5:00 ಗಂಟೆಗೆ ವಾರ್ಡ್ ನಂಬರ್ 35 ರಲ್ಲಿ ಸಿಸಿ ರಸ್ತೆ ಹಾಗೂ ಗಟಾರ ನಿರ್ಮಾಣ ಕಾಮಗಾರಿಯ ಭೂಮಿ ಪೂಜೆ ನೆರವೇರಿಸುವರು. ಸಾಯಂಕಾಲ 5:30 ಗಂಟೆಗೆ ವಾರ್ಡ್ ನಂಬರ್ 30ರ ಮುಂಡರಗಿ ರಸ್ತೆ ವ್ಯಾಂಬೆ ಬಡಾವಣೆಗಳಲ್ಲಿ ನೂತನವಾಗಿ ನಿರ್ಮಾಣ ಮಾಡುತ್ತಿರುವ ಮನೆಗಳ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗನಲ್ಲಿ ವಾಸ್ತವ್ಯ ಮಾಡುವರು.

ನವೆಂಬರ್ 24ರಂದು ಬೆಳಗ್ಗೆ 9:30 ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಪ್ರಾಚ್ಯಾವವೇಶ ಅನ್ವೇಷಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಸಚಿವರ ಕಾರ್ಯಲಯ ಪ್ರಕಟಣೆ ತಿಳಿಸಿದೆ.

# ಕರಾವಳಿಯ ಪ್ರಾಕೃತಿಕ ಸೌಂದರ್ಯ ಹೆಚ್ಚು ಪರಿಚಯವಾಗಬೇಕು : ಡಿ.ಕೆ. ಶಿವಕುಮಾರ್



ಕಾರವಾರ – ರಾಜ್ಯದಲ್ಲಿರುವ 360 ಕಿ.ಮೀ ಕರಾವಳಿ ಪ್ರದೇಶದ ಪ್ರಕೃತಿ ಸೌಂದರ್ಯವನ್ನು ಹೆಚ್ಚಿನ ರೀತಿಯಲ್ಲಿ ಜಗತ್ತಿಗೆ ಪರಿಚಯಿಸುವ ಅಗತ್ಯವಿದ್ದು, ಇದನ್ನು ಇನ್ನೂ ಉತ್ತಮ ರೀತಿಯಲ್ಲಿ ಅಭಿವೃದ್ಧಿಪಡಿಸುವ ಅವಶ್ಯಕತೆಯಿದೆ ಎಂದು ಉಪ ಮುಖ್ಯ ಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು.

ಅವರು ಶುಕ್ರವಾರ ಮುರುಡೇಶ್ವರದಲ್ಲಿ ಮಾತನಾಡಿ,ಕರಾವಳಿ ಭಾಗದ ಪ್ರದೇಶದಲ್ಲಿರುವ ಮುರುಡೇಶ್ವರ, ಗೋಕರ್ಣ ಬೀಚ್‌ಗಳು ಗೋವಾ ಬೀಚ್‌ಗಳಿಂದ ಉತ್ತಮವಾಗಿದೆ ಅವುಗಳನ್ನು ಇನ್ನೂ ಹೆಚ್ಚು ಅಭಿವೃದ್ಧಿ ಪಡಿಸಬೇಕಾಗಿದೆ. ಕರಾವಳಿ ಭಾಗದ ಪ್ರವಾಸೋದ್ಯಮ ಅಭಿವೃದ್ಧಿಗೆ ಹೊಸ ಪ್ರವಾಸೋದ್ಯಮ ನೀತಿ ಸಿದ್ಧಪಡಿಸಲು ಸಲಹೆ ಪಡೆಯಲಾಗಿದೆ. ಇಲ್ಲಿ ಬಂಡವಾಳ ಹೂಡಿಕೆದಾರರು ಬರಬೇಕು, ಇಲ್ಲಿನ ಯುವಕರಿಗೆ ಹೆಚ್ಚು ಉದ್ಯೋಗ ಸೃಷ್ಟಿಯಾಗಬೇಕು ಎಂದರು.

ಕರಾವಳಿಯಲ್ಲಿ ದೊಡ್ಡ ಮಟ್ಟದ ಉದ್ಯಮ ಬೆಳೆಸಲು ಯೋಜಿಸಲಾಗಿದೆ. ಇಲ್ಲಿಗೆ ಉತ್ತಮವಾದ ಹೂಡಿಕೆದಾರರ ಅವಶ್ಯಕತೆ ಇದೆ. ಇದರಿಂದ ಇಲ್ಲಿನ ಯುವಕರು ಉತ್ತಮ ಜ್ಞಾನ ಮತ್ತು ಕೌಶಲ್ಯವನ್ನು ಹೊಂದಿರುವುದರಿಂದ ಉದ್ಯೋಗ ಅವಕಾಶ ಸೃಷ್ಠಿಗೆ ಪೂರಕವಾಗಲಿದೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ಎಂ.ಸಿ.ಎ. ಅಧ್ಯಕ್ಷ ಸತೀಶ್ ಸೈಲ್ ಇದ್ದರು.

# ನ.23 ರಂದು ಬೆಳಗಾವಿ ವಿಭಾಗ ಮಟ್ಟದ ಥ್ರೋಬಾಲ್ ಪಂದ್ಯಾವಳಿ

ಕಾರವಾರ –ಜಿಲ್ಲಾಡಳಿತ ಜಿಲ್ಲಾ ಪಂಚಾಯತ, ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಲಯ ಹೊನ್ನಾವರ ಇವರ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ವಿಭಾಗ ಮಟ್ಟದ 14 ಮತ್ತು 17 ವರ್ಷದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳ ಥ್ರೋಬಾಲ್ ಪಂದ್ಯಾವಳಿಯನ್ನು ನ.23 ರಂದು ಸಂಜೆ 4.30 ಗಂಟೆಗೆ ಹೊನ್ನಾವರದ ನ್ಯೂ ಇಂಗ್ಲೀಷ್ ಆಂಗ್ಲ ಮಾಧ್ಯಮ ಪ್ರೌಢಶಾಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರದಲ್ಲಿ ಕ್ರೀಡಾಕೂಟದ ಉದ್ಘಾಟಣೆಯನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್. ವೈದ್ಯ ಮಾಡಲಿದ್ದಾರೆ. ಕುಮಟಾ ಶಾಸಕ ದಿನಕರ ಕೆ. ಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ. ದೇಶಪಾಂಡೆ, ಕರ್ನಾಟಕ ರಾಜ್ಯ ಮಾರ್ಕೆಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ್ ಕೆ. ಸೈಲ್, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಉಲ್ವೇಕರ, ಹೊನ್ನಾವರ ಪಟ್ಟಣ ಪಂಚಾಯತ ಅಧ್ಯಕ್ಷ ನಾಗರಾಜ ಪರಮೇಶ್ವರ ಭಟ್ಟಮತ್ತಿತರರು ಪಾಲ್ಗೊಳ್ಳಲಿದ್ದಾರೆ.

# ಸರಕಾರಿ ನೌಕರರಿಗೆ ಲೋಕಾಯುಕ್ತದ ಬಗ್ಗೆ ಅನಗತ್ಯ ಭಯ ಆತಂಕ ಬೇಡ : ಕಾನೂನಾತ್ಮಕವಾಗಿ ತಮ್ಮ ಕರ್ತವ್ಯ ವೃತ್ತಿ ನಿಷ್ಠೆ ಲೋಕಾ ಕಾಯ್ದೆ ಅರಿವು ಹೊಂದುವುದು ಅಗತ್ಯ : ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ

ಧಾರವಾಡ : ಸರಕಾರಿ ನೌಕರರು ತಮ್ಮ ಹುದ್ದೆಗೆ ಅನ್ವಯಿಸುವ ಕಾರ್ಯಗಳನ್ನು ನಿಯಮಾನುಸಾರ ಮಾಡಿದರೆ ದೂರುಗಳ ಪ್ರಶ್ನೆ ಬರುವದಿಲ್ಲ. ಲೋಕಾಯುಕ್ತದ ಬಗ್ಗೆ ಅನಗತ್ಯ ಭಯ, ಆತಂಕ ಪಡದೆ ಕಾನೂನಾತ್ಮಕವಾಗಿ ತಮ್ಮ ಕರ್ತವ್ಯ ನಿರ್ವಹಿಸಿ, ವೃತ್ತಿ ನಿಷ್ಠೆ ತೋರಬೇಕು. ಲೋಕಾಯುಕ್ತದ ಕಾಯ್ದೆ, ಕಾರ್ಯಗಳ ಬಗ್ಗೆ ಅರಿವು ಹೊಂದುವುದು ಅಗತ್ಯವಾಗಿದೆ ಎಂದು ಕರ್ನಾಟಕ ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ. ಎನ್.ಫಣೀಂದ್ರ ಅವರು ಹೇಳಿದರು.


ಅವರು ನಿನ್ನೆ (ನ.21) ಸಂಜೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಧಾರವಾಡ ಲೋಕಾಯುಕ್ತ ಕಚೇರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತ ಆಶ್ರಯದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ಆಯೋಜಿಸಿದ್ದ ಲೋಕಾಯುಕ್ತ ಕಾಯ್ದೆಯ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಕರ್ನಾಟಕ ಲೋಕಾಯುಕ್ತ ಕಾಯ್ದೆ ಬಗ್ಗೆ ಸರಕಾರಿ ನೌಕರರಿಗೆ ಭಯ, ಆತಂಕ ಬೇಡ. ಲೋಕಾಯುಕ್ತ ಕಾನೂನು ಬಗ್ಗೆ ಸರಿಯಾದ ಅರಿವು, ತಿಳುವಳಿಕೆ ಇರುವುದು ಬಹು ಮುಖ್ಯ ಎಂದು ಅವರು ಹೇಳಿದರು.

ಕರ್ನಾಟಕ ಲೋಕಾಯುಕ್ತವು ಸಾರ್ವಜನಿಕ ನೌಕರರ ಕರ್ತವ್ಯ, ದುರ್ನಡತೆಗೆ ಸಂಬಂಧಿಸಿದ ದೂರುಗಳನ್ನು ಪರಿಶೀಲಿಸಲು ಮತ್ತು ವರದಿ ಮಾಡಲು ಸ್ಥಾಪಿಸಲಾಗಿರುವ ಸಂಸ್ಥೆಯಾಗಿದೆ. ಸಾರ್ವಜನಿಕ ಆಡಳಿತದ ಗುಣಮಟ್ಟ ಸುಧಾರಿಸುವುದು, ಸಾರ್ವಜನಿಕ, ಸರ್ಕಾರಿ ನೌಕರರ ದುರ್ನಡತೆಯಿಂದ ಸಂಭವಿಸಿದ ಕುಂದುಕೊರತೆಗಳನ್ನು ನಿವಾರಣೆ ಮಾಡುವುದು, ತಪ್ಪಿತಸ್ಥರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984, ಭ್ರಷ್ಟಾಚಾರ ತಡೆ ಕಾಯ್ದೆ 1988, ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು, 1966 ಹಾಗೂ ಕರ್ನಾಟಕ ನಾಗರೀಕ ಸೇವೆ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರನ್ವಯ ಶಿಸ್ತಿನ ಕ್ರಮಕ್ಕೆ ಸರ್ಕಾರಕ್ಕೆ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡುವುದು ಈ ಸಂಸ್ಥೆಯ ಕಾರ್ಯ ವ್ಯಾಪ್ತಿಗೆ ಒಳಪಡುತ್ತದೆ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ಹೇಳಿದರು.

ಯಾರ ವಿರುದ್ಧ ದೂರು: ಯಾವುದೇ ವ್ಯಕ್ತಿ ಕರ್ನಾಟಕ ರಾಜ್ಯದ ಆಡಳಿತ ನಿರ್ವಹಣೆಯಲ್ಲಿ ಭ್ರಷ್ಟಾಚಾರ, ಸ್ವಜನ ಪಕ್ಷಪಾತ, ದುರ್ನಡತೆ, ಅಶಿಸ್ತು ಮತ್ತು ಕರ್ತವ್ಯ ಲೋಪ ನಡೆದಿದೆ ಎಂದು ಹೇಳುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯದ ಸಾರ್ವಜನಿಕ, ಸರ್ಕಾರಿ ನೌಕರರ ವಿರುದ್ಧ ಮಾತ್ರ ದೂರು ನೀಡಬಹುದಾಗಿದೆ. ಕರ್ನಾಟಕ ಲೋಕಾಯುಕ್ತ ಅಧಿನಿಯಮ, 1984 ರಂತೆ ಸಾರ್ವಜನಿಕ ನೌಕರರು ಮಾತ್ರ ಕ್ರಮವಾಗಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುತ್ತಾರೆ.

ಕರ್ನಾಟಕ ಲೋಕಾಯುಕ್ತಕ್ಕೆ ಯಾವ ರೀತಿ ದೂರು ಸಲ್ಲಿಸಬೇಕು: ದೂರುದಾರರು, ಭಾದಿತ ವ್ಯಕ್ತಿಯು ಯಾವ ಸಾರ್ವಜನಿಕ, ಸರ್ಕಾರಿ ನೌಕರನ ವಿರುದ್ಧ ಯಾವ ಕರ್ತವ್ಯಕ್ಕೆ, ದುರ್ನಡತೆಗೆ ಸಂಬಂಧಿಸಿದಂತೆ ಆಪಾದನೆ ಮಾಡುತ್ತಿದ್ದಾರೆ ಹಾಗೂ ಅವರ ಕುಂದುಕೊರತೆ ಮತ್ತು ಪರಿಹಾರದ ಬಗ್ಗೆ ಸ್ಪಷ್ಟವಾಗಿ ತಿಳಿಸುವುದರ ಜೊತೆಗೆ ಅವರ ಹೆಸರು, ದೂರವಾಣಿ ಸಂಖ್ಯೆ, ಇ–ಮೇಲ್ ಐ.ಡಿ., ಸಂಪೂರ್ಣ ವಿಳಾಸ ಮತ್ತು ಸಾರ್ವಜನಿಕ,



ಸರ್ಕಾರಿ ನೌಕರರ ಹೆಸರು, ವಿಳಾಸ, ಹುದ್ದೆಯ ವಿವರಗಳನ್ನು ದೂರಿನಲ್ಲಿ ತಿಳಿಸಬೇಕು. ದೂರಿನ ಜೊತೆಗೆ ನಮೂನೆ–1 ಮತ್ತು 2ನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳ ದೃಢೀಕೃತ ಅಥವಾ ಯಥಾಪ್ರತಿಗಳೊಂದಿಗೆ ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಬಹುದು.

ಭ್ರಷ್ಟಾಚಾರ ತಡೆ ಕಾಯ್ದೆಯಡಿ ದಾಖಲಿಸಬಹುದಾದ ಪ್ರಕರಣಗಳು: ಕರ್ನಾಟಕ ಲೋಕಾಯುಕ್ತ ಅಧಿನಿಯಮದಡಿ ಬರುವ ದೂರುಗಳನ್ನಲ್ಲದೆ ಭ್ರಷ್ಟಾಚಾರ ಪ್ರತಿಬಂಧ ಅಧಿನಿಯಮದಡಿ ಬರುವ ಅಪರಾಧಗಳಿಗೆ ಸಂಬಂಧಪಟ್ಟಂತೆ ಸಹ ತನಿಖೆ ನಡೆಸಿ ಕಾನೂನು ಕ್ರಮ ತೆಗೆದುಕೊಳ್ಳಲು ಕರ್ನಾಟಕ ಲೋಕಾಯುಕ್ತ ಪೊಲೀಸರಿಗೆ ಅಧಿಕಾರವಿದೆ. ಈ ಸಂಬಂಧ ಬೆಂಗಳೂರು ನಗರ ಮತ್ತು ಗ್ರಾಮೀಣ ವಲಯಕ್ಕೆ ಸಂಬಂಧಪಟ್ಟಂತೆ ಬೆಂಗಳೂರಿನ ಅಂಬೇಡ್ಕರ್ ವೀಧಿಯ ಲೋಕಾಯುಕ್ತ ಕಛೇರಿಯಲ್ಲಿರುವ ಲೋಕಾಯುಕ್ತ ಪೊಲೀಸ್ ಠಾಣೆಗೆ ಮತ್ತು ಪ್ರತಿಯೊಂದು ಜಿಲ್ಲೆಯಲ್ಲಿರುವ ಲೋಕಾಯುಕ್ತ ಕಛೇರಿಯ ಆವರಣದಲ್ಲಿ ಸ್ಥಾಪಿಸಿರುವ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ಕೊಡಬಹುದಾಗಿದೆ.

ಯಾವುದೇ ಸಾರ್ವಜನಿಕ, ಸರ್ಕಾರಿ ನೌಕರ ತನ್ನಿಂದಾಗಲೀ ಅಥವಾ ಇನ್ನೊಬ್ಬ ಸರ್ಕಾರಿ ನೌಕರನಿಂದಾಗಲೀ ಸಾರ್ವಜನಿಕ ಕರ್ತವ್ಯವನ್ನು ಮಾಡದೇ ಇರುವಂತೆ ಮಾಡಲು ಅಥವಾ ಮಾಡದಿರುವುದಕ್ಕೆ ಅಥವಾ ಆ ಕರ್ತವ್ಯವನ್ನು ಅನುಚಿತವಾಗಿ ಅಥವಾ ಅಪ್ರಾಮಾಣಿಕವಾಗಿ ನಿರ್ವಹಿಸಲು ಅಥವಾ ನಿರ್ವಹಿಸುವ ಉದ್ದೇಶದಿಂದ ಯಾವುದೇ ವ್ಯಕ್ತಿಯಿಂದ ಅನಗತ್ಯ ಪ್ರಯೋಜನ ಪಡೆಯುವುದು ಅಥವಾ ಸ್ವೀಕರಿಸುವುದು ಅಥವಾ ಪ್ರತಿಫಲವಾಗಿ ಅನಗತ್ಯ ಪ್ರಯೋಜನ ಪಡೆಯುವುದು ಅಥವಾ ಸ್ವೀಕರಿಸುವುದು ಅಥವಾ ಅದಕ್ಕಾಗಿ ಪ್ರಯತ್ನಿಸುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಈ ರೀತಿಯಾಗಿ ವರ್ತಿಸಲು ಇನ್ನೊಬ್ಬ ಸಾರ್ವಜನಿಕ ನೌಕರನನ್ನು ಪ್ರೇರೇಪಿಸುವುದು ಸಹ ಶಿಕ್ಷಾರ್ಹ ಅಪರಾಧವಾಗುತ್ತದೆ ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿಗಳು ಹೇಳಿದರು.

ಯಾವುದೇ ವ್ಯಕ್ತಿ, ಸಾರ್ವಜನಿಕ, ಸರ್ಕಾರಿ ನೌಕರ ತನ್ನ ಕರ್ತವ್ಯ ಮಾಡದೇ ಇರಲು ಅಥವಾ ಅನುಚಿತವಾಗಿ ಅಥವಾ ಅಪ್ರಮಾಣಿಕವಾಗಿ ಮಾಡಲು ಭ್ರಷ್ಟ ಅಥವಾ ಕಾನೂನು ಬಾಹಿರ ವಿಧಾನಗಳಿಂದ ಅಥವಾ ತನ್ನ ವೈಯಕ್ತಿಕ ಪ್ರಭಾವವನ್ನು ಚಲಾಯಿಸಿ ಆ ಸಾರ್ವಜನಿಕ ನೌಕರನನ್ನು ಪ್ರೇರೇಪಿಸುವುದು ಮತ್ತು ಯಾವುದೇ ವ್ಯಕ್ತಿಗೆ ಅನಗತ್ಯ ಪ್ರಯೋಜನ ನೀಡಲು ಅಥವಾ ತನಗಾಗಿಯೇ ಬೇರೊಬ್ಬ ವ್ಯಕ್ತಿಯಿಂದ ಇನಾಮು ಪಡೆದರೆ, ಪಡೆಯುವುದಕ್ಕೆ ಪ್ರಯತ್ನಿಸಿದರೆ ಅಥವಾ ಸ್ವೀಕರಿಸಿದರೆ ಅದು ಶಿಕ್ಷಾರ್ಹ ಅಪರಾಧವಾಗುತ್ತದೆ.

ಭ್ರಷ್ಟಾಚಾರ ತಡೆ ಅಧಿನಿಯಮದಡಿಯಲ್ಲಿ ಶಿಕ್ಷಾರ್ಹವಾದ ಅಪರಾಧಗಳಿಗೆ ಆರೋಪಿತರ ವಿರುದ್ಧ ದೋಷಾರೋಪಣೆ ಪಟ್ಟಿಯನ್ನು ವಿಶೇಷ ನ್ಯಾಯಾಲಯದಲ್ಲಿ ಸಲ್ಲಿಸಿದಾಗ ನ್ಯಾಯಾಲಯವು ವಿಚಾರಣೆ ನಡೆಸಿ ಸಂಬಂಧಪಟ್ಟ ಸರ್ಕಾರಿ ನೌಕರ ತಪ್ಪಿತಸ್ಥ ಎಂದು ಕಂಡುಬಂದಲ್ಲಿ, ಆತನಿಗೆ ಸೂಕ್ತ ಶಿಕ್ಷೆ ಮತ್ತು ದಂಡನೆಯನ್ನು ವಿಧಿಸುತ್ತದೆ. ಅಲ್ಲದೇ ಶಿಕ್ಷೆಗೆ ಒಳಪಟ್ಟ ವ್ಯಕ್ತಿಯನ್ನು ಕೆಲಸದಿಂದ ವಜಾಗೊಳಿಸಬೇಕಾಗುತ್ತದೆ. ಇದಲ್ಲದೇ ಇಲಾಖಾ ವಿಚಾರಣೆಗೆ ಸಂಬಂಧಿಸಿದಂತೆ ಸಾರ್ವಜನಿಕ, ಸರ್ಕಾರಿ ನೌಕರನ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ಸರ್ಕಾರದ ವಹಿಸುವಿಕೆಯ ಮೇರೆಗೆ ತನಿಖೆಯನ್ನು ನಡೆಸಿ ಆತನ ವಿರುದ್ಧ ಇಲಾಖಾ ವಿಚಾರಣೆ ಅವಶ್ಯಕತೆ ಕಂಡು ಬಂದರೆ ಅದರ ಬಗ್ಗೆ ಮತ್ತು ಇಲಖಾ ವಿಚಾರಣೆಯ ನಂತರ ಸೂಕ್ತ ಶಿಫಾರಸ್ಸನ್ನು ಸರ್ಕಾರಕ್ಕೆ ಲೋಕಾಯುಕ್ತದಿಂದ ಮಾಡಲಾಗುತ್ತದೆ ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿಗಳು ತಿಳಿಸಿದರು.

ಸರಕಾರಿ ನೌಕರ ತನಗೆ ಸುಳ್ಳು ದೂರುಗಳಿಂದ ತೊಂದರೆ ಆದಾಗ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಿಸಬಹುದು. ಯಾರೇ ಆಗಲಿ ಲೋಕಾಯುಕ್ತಕ್ಕೆ ದೂರುಗಳನ್ನು kla.kar(at)nic(dot)in ಇ–ಮೇಲ್ ಮೂಲಕವು ಸಲ್ಲಿಸಬಹುದು ಮತ್ತು ಹೆಚ್ಚಿನ ಮಾಹಿತಿಯನ್ನು ಅಂತರ್ಜಾಲ https://lokayukta.kar.nic.in ಮತ್ತು ದೂರವಾಣಿ 080–22258767, 080–22250278 ಪಡೆಯಬಹುದು ಎಂದು ಹೇಳಿದರು.

ಧಾರವಾಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಜಿ.ರಮಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾನತೆ ಸಂದೇಶ ಹೊತ್ತ ನಾವು ಪ್ರತಿಯೊಂದರಲ್ಲೂ ಪ್ರಾಮಾಣಿಕತೆ ಅಗತ್ಯ. ಕರ್ನಾಟಕ ಲೋಕಾಯುಕ್ತ ಮಾದರಿಯಾಗಿದೆ. ಪ್ರತಿಯೊಬ್ಬ ಅಧಿಕಾರಿಯು ಲೋಪವಿಲ್ಲದಂತೆ ಕರ್ತವ್ಯ ನಿರ್ವಹಿಸಬೇಕು. ಪ್ರತಿ ಹಂತದಲ್ಲಿ ಕೆಲಸ ಮಾಡುವಾಗ ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ. ನಿಷ್ಠೆ ಮತ್ತು ಪ್ರಾಮಾಣಿಕತೆಯನ್ನು ಅಳವಡಿಕೊಳ್ಳೋಣ ಎಂದು ಹೇಳಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಸ್ವಾಗತಿಸಿದರು.

ವೇದಿಕೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಉಪ ಪೊಲೀಸ್ ಆಯುಕ್ತರಾದ ಸಿ.ಆರ್.ರವೀಶ, ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಕಚೇರಿಯಲ್ಲಿನ ವಿಚಾರಣಾ ವಿಭಾಗದ ಅಪರ ನಿಬಂಧಕರಾದ ಪಿ.ಶ್ರೀನಿವಾಸ, ನರಸಿಂಹಸಾ ಎಂ.ವಿ., ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ, ಉಪಲೋಕಾಯುಕ್ತ ಕಚೇರಿಯ ಸಿವಿಲ್ ನ್ಯಾಯಾಧೀಶ ಕಿರಣ ಪಿ.ಎಂ.ಪಾಟೀಲ್, ಧಾರವಾಡ ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಹನುಮಂತರಾಯ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ಶಿಕ್ಷಕಿ ಜಯಲಕ್ಷ್ಮಿ ಕಾರ್ಯಕ್ರಮ ನಿರೂಪಿಸಿದರು. ಧಾರವಾಡ ತಹಶಿಲ್ದಾರ ಡಾ.ಡೊಡ್ಡಪ್ಪ ಹೂಗಾರ ವಂದಿಸಿದರು.

**ಕವಡಿಮಟ್ಟಿ ಗ್ರಾಮ ಪಂಚಾಯತಿ ಮಹಾತ್ಮ ನರೇಗಾ ಯೋಜನೆಯ 2025-2026ನೇ ಸಾಲಿನ ಕ್ರಿಯಾ ಯೋಜನೆ ತಯಾರಿಕೆ ಬಗ್ಗೆ ಗ್ರಾಮ ಸಭೆ**

# ಕವಡಿಮಟ್ಟಿ ಗ್ರಾಮ ಪಂಚಾಯತಿಯಲ್ಲಿ ಉದ್ಯೋಗ ಖಾತ್ರಿ ನಡೆಗೆ ಸಬಲತೆಯಡೆಗೆ ಅಭಿಯಾನ ಕಾರ್ಯಕ್ರಮ

ಮುದ್ದೇಬಿಹಾಳ: 2025-26ನೇ ಸಾಲಿನ ನರೇಗಾ ಕ್ರಿಯಾ ಯೋಜನೆ ತಯಾರಿಕೆಯ ಪ್ರಕ್ರಿಯೆ ಪ್ರಾರಂಭವಾಗಿದ್ದು, ಸಾರ್ವಜನಿಕರು ತಮಗೆ ಅಗತ್ಯವಾದ ಕಾಮಗಾರಿಗಳ ಹೆಸರುಗಳನ್ನು ಬರೆಯಿಸಬಹುದು ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪಿ.ಎಸ್.ಕಸನಕ್ಕಿ ಅವರು ಹೇಳಿದರು.

ತಾಲ್ಲೂಕಿನ ಕವಡಿಮಟ್ಟಿ ಗ್ರಾಮ ಪಂಚಾಯತಿ ಆವರಣದಲ್ಲಿ ಕವಡಿಮಟ್ಟಿ ಗ್ರಾಮ ಪಂಚಾಯತಿಯ ಮಹಾತ್ಮ ನರೇಗಾ ಯೋಜನೆಯ 2025-2026ನೇ ಸಾಲಿನ ಕ್ರಿಯಾ ಯೋಜನೆ ತಯಾರಿಕೆಯ ಕುರಿತು ಗುರುವಾರ ಗ್ರಾಮ ಸಭೆಯಲ್ಲಿ ಮಾತನಾಡಿ,ಇದಕ್ಕಾಗಿ ಉದ್ಯೋಗ ಖಾತ್ರಿ ನಡೆಗೆ ಸಬಲತೆಯಡೆಗೆ ಅಭಿಯಾನ ಹಮ್ಮಿಕೊಂಡು ಕವಡಿಮಟ್ಟಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕವಡಿಮಟ್ಟಿ, ಸರೂರ, ಶಿರೋಳ, ಸರೂರ ತಾಂಡ ಹಾಗೂ ಜಲಪೂರ ಗ್ರಾಮಗಳಲ್ಲಿ ನರೇಗಾ ಯೋಜನೆ ಬಗ್ಗೆ ವ್ಯಾಪಾಕ ಪ್ರಚಾರ ಕೈಗೊಂಡು ಸಾರ್ವಜನಿಕರಿಂದ ಕಾಮಗಾರಿ ಬೇಡಿಕೆಗಳನ್ನು ಸಂಗ್ರಹಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯ 6 ವಾರ್ಡ್ ಗಳಲ್ಲಿ ನಿಯಮಾನುಸಾರ ವಾರ್ಡ್ ಸಭೆಗಳನ್ನು ಜರುಗಿಸಿ ಯೋಜನೆಯ ಮಾಹಿತಿ ಮುಟ್ಟಿಸಿ 198 ಕಾಮಗಾರಿಗಳ




ಬೇಡಿಕೆ ಅರ್ಜಿಗಳು ಸಲ್ಲಿಕೆಯಾಗಿವೆ. ಸದರಿ ಕಾಮಗಾರಿಗಳ ಅನುಮೋದನೆ ಕುರಿತು ಗ್ರಾಮ ಸಭೆಯಲ್ಲಿ ಚರ್ಚಿಸಿ ಕ್ರಿಯಾ ಯೋಜನೆ ರೂಪಿಸಲಾಗುವುದು ಎಂದು ಪಿಡಿಒ ಕಸನಕ್ಕಿ ಗ್ರಾಮಸಭೆಗೆ ತಿಳಿಸಿದರು.

ಸಾಮಾಜಿಕ ಅರಣ್ಯ ಇಲಾಖೆ ಉಪವಲಯ ಅರಣ್ಯ ಅಧಿಕಾರಿ ಅನಿಲ ಚವ್ಹಾಣ ಮಾತನಾಡಿ, ನರೇಗಾ ಯೋಜನೆಯಡಿ ರಸ್ತೆ ಬದಿ ನೆಡುತೋಪು ನಿರ್ಮಾಣ, ಗೋಮಾಳ, ಸರ್ಕಾರಿ ಜಾಗದಲ್ಲಿ ನೆಡುತೋಪು ನಿರ್ಮಾಣ ಹಾಗೂ ರೈತರ ಜಮೀನಿನಲ್ಲಿ ಶ್ರೀಗಂಧ, ಹೆಬ್ಬೆವು ಅರಣ್ಯ ಕೃಷಿ ಮಾಡಲು ಅವಕಾಶವಿದ್ದು, ರೈತರು ಬೇಡಿಕೆ ಸಲ್ಲಿಸಬಹುದು ಎಂದು ಮಾಹಿತಿ ನೀಡಿದರು.

ಇದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಗ್ರಾ.ಪಂ.ಸದಸ್ಯ ಹನುಮಂತ ಹಂಡ್ರಗಲ್ಲ, ಕೇವಲ ರಸ್ತೆ ಬದಿಯಲ್ಲಿ ಕಾಮಗಾರಿ ಪ್ರಾರಂಭಿಸಿ 4 ವರ್ಷ ನಿರ್ವಹಣೆ ವೆಚ್ಚ ಭರಿಸುತ್ತೀರಿ ಇದರಿಂದ ಯಾರಿಗೂ ಪ್ರಯೋಜನವಾಗದೆ ಸರ್ಕಾರದ ದುಡ್ಡು ಪೋಲಾಗುತ್ತಿದೆ.

ಕಾಮಗಾರಿ ಅನುಷ್ಠಾನಗೊಂಡ ಸ್ಥಳಗಳಲ್ಲೆ ಮತ್ತೆ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ರೈತರಿಗೆ ಅರಣ್ಯ ಕೃಷಿ ಬಗ್ಗೆ ಮಾಹಿತಿ ನೀಡಿ ರೈತರಿಗೆ ಉಪಯುಕ್ತವಾಗುವಂತಹ ಕಾಮಗಾರಿಗಳ ಅನುಷ್ಠಾನ ಮಾಡಿ ಎಂದು ಹೇಳಿದರು.

ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಸೇರಿದಂತೆ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು ಅಗತ್ಯ ಕಾಮಗಾರಿಗಳ ಮಾಹಿತಿ ನೀಡಿ ಫಲಾನುಭವಿಗಳಿಂದ ಬೇಡಿಕೆ ಅರ್ಜಿಗಳನ್ನು ಸ್ವೀಕರಿಸಿದರು.

ಗ್ರಾಮ ಪಂಚಾಯತಿ ಕಾರ್ಯದರ್ಶಿ ಅಶೋಕ ಕೊರವೇರ ಬೇಡಿಕೆ ಸಲ್ಲಿಕೆಯಾದ 198 ಕಾಮಗಾರಿಗಳ ಹೆಸರುಗಳನ್ನು ಓದಿ ಸಭೆಗೆ ಮಾಹಿತಿ ನೀಡಿದರು.

ಮುದ್ದೇಬಿಹಾಳ ಬ್ಲಾಕ್ ಆರೋಗ್ಯ ಅಧಿಕಾರಿ ಅನಸೂಯ ತೇರದಾಳ ಮಾತನಾಡಿ, ಗ್ರಾಮೀಣ ಪ್ರದೇಶದ ಆರೋಗ್ಯ ಸುಧಾರಣೆಗೆ ಶೌಚಾಲಯಗಳ ಅಗತ್ಯತೆ ಮತ್ತು ಬಳಕೆ ಕುರಿತು ವಿವರಿಸಿದರು.

ಈ ಸಭೆಯಲ್ಲಿ ಗ್ರಾ.ಪಂ.ಅಧ್ಯಕ್ಷೆ ಶ್ರೀಮತಿ ಶಕುಂತಲಾ ಹಂಡರಗಲ್ಲ ಉಪಾಧ್ಯಕ್ಷೆ ಶ್ರೀದೇವಿ ಬಿರಾದಾರ, ಸದಸ್ಯರಾದ ಸಿದ್ರಾಮಯ್ಯ ಗುರುವಿನ, ಹಣಮಂತ ಹಂಡರಗಲ್ಲ,ಸಿದ್ದಮ್ಮ ಬೀರಪ್ಪ ಬಳಬಟ್ಟಿ, ದ್ಯಾವಣ್ಣ ಹುಣಶ್ಯಾಳ, ಸಹಾಯಕ ತೋಟಗಾರಿಕೆ ಅಧಿಕಾರಿ ಸಿದ್ದಪ್ಪ ಮದರಬಂಡಿ, ಐಇಸಿ ಸಂಯೋಜಕ ಪರಮೇಶ ಹೊಸಮನಿ, ಕೃಷಿ ಇಲಾಖೆ ತಾಂತ್ರಿಕ ಸಹಾಯಕ ಅನಿಲ್ ಚವ್ಹಾಣ, ಮುಖ್ಯ ಶಿಕ್ಷಕ ಎನ್.ಬಿ.ನಾವದಗಿ, ಸಿಹೆಚ್ ಒ ಜ್ಯೋತಿ ಬಿರಾದಾರ,ಗ್ರಾಪಂ ಸಿಬ್ಬಂದಿಗಳು, ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತರು, ಗ್ರಾಮಸ್ಥರು ಸೇರಿದಂತೆ ಉಪಸ್ಥಿತರಿದ್ದರು.

# ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶೂರೆನ್ಸ್‌ನಿಂದ ಮಣಿಪಾಲ್ ಸಿಗ್ನಾ ಸರ್ವ'ಘೋಷಣೆ

ಬೆಳಗಾವಿ, ನವೆಂಬರ್ 22,2024: ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶೂರೆನ್ಸ್ ತನ್ನ ಹೊಸ ಆರೋಗ್ಯ ವಿಮಾ ಕೊಡುಗೆಯಾದ 'ಮಣಿಪಾಲ್ ಸಿಗ್ನಾ ಸರ್ವ' ಅನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ.ಇದು ಸರ್ವ ಪ್ರಥಮ್, ಸರ್ವ ಉತ್ತಮ್ ಹಾಗೂ ಸರ್ವ ಪರಮ್ ಎಂಬ ಮೂರು ಸೂಕ್ತವಾದ ಯೋಜನೆಗಳನ್ನು ಈ ಮೂಲಕ ನೀಡಲಿದೆ.ಇದು ಜನರ ಆರೋಗ್ಯವನ್ನು ಸುರಕ್ಷಿತಗೊಳಿಸಲು ವಿನ್ಯಾಸಗೊಳಿಸಿದ ಉತ್ತಮ ಆರೋಗ್ಯ ರಕ್ಷಣೆಯನ್ನು ಒದಗಿಸುತ್ತದೆ.

ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶೂರೆನ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಶ್ರೀ ಪ್ರಸೂನ್ ಸಿಕ್ದರ್ ಅವರು ಈ ಕುರಿತು ಮಾತನಾಡುತ್ತಾ , "ಮಣಿಪಾಲ್ ಸಿಗ್ನಾದಲ್ಲಿ, ನಮ್ಮ ಬದ್ಧತೆಯು ಕೇವಲ ಆರೋಗ್ಯ ವಿಮೆಯನ್ನು ನೀಡುವುದನ್ನು ಮೀರಿದೆ-ಇದು ಆರೋಗ್ಯದ ಪ್ರವೇಶ ಮತ್ತು ಕೈಗೆಟುಕುವ ವೆಚ್ಚದಲ್ಲಿನ ನಿರ್ಣಾಯಕ ಅಂತರವನ್ನು ನಿವಾರಿಸುವ ಹೊಸ ಪರಿಹಾರಗಳ ಬಗ್ಗೆ, ವಿಶೇಷವಾಗಿ ಭಾರತದಲ್ಲಿ ಈಗ ಲಭ್ಯವಿಲ್ಲದ ಸೌಲಭ್ಯವನ್ನೂ ಒದಗಿಸುತ್ತಿದೆ. 'ಮಣಿಪಾಲ್ ಸಿಗ್ನಾ ಸರ್ವ' ಬಿಡುಗಡೆಯೊಂದಿಗೆ, ನಾವು ಸಂಪೂರ್ಣ ಆರೋಗ್ಯ ವಿಮಾ ಪರಿಹಾರವನ್ನು ಪರಿಚಯಿಸುತ್ತಿದ್ದೇವೆ ಅದು ವೈವಿಧ್ಯಮಯ ಗ್ರಾಹಕರ ವಿಭಾಗಗಳನ್ನು ಪೂರೈಸುತ್ತದೆ. 2047 ರ ಹೊತ್ತಿಗೆ ದೇಶದ ಎಲ್ಲರಿಗೂ ವಿಮೆ ಸೌಲಭ್ಯ ದೊರಕಿಸುವ ಪ್ರಯತ್ನದ ಭಾಗವಾಗಿದೆ" ಎಂದರು.

ಮಣಿಪಾಲ್ ಸಿಗ್ನಾ ಸರ್ವ ಅನಂತ್ ಹೆಸರಿನಲ್ಲಿ ಅನಂತ ಸುರಕ್ಷಾ ಆಯ್ಕೆಯೊಂದಿಗೆ ವೈಯಕ್ತಿಕಗೊಳಿಸಿದ ಮತ್ತು ಸಮಗ್ರ ಆರೋಗ್ಯ ವಿಮಾ ರಕ್ಷಣೆಯನ್ನು ನೀಡುತ್ತದೆ. ಇನ್ನು ಸಿಗ್ನಾ ಪರಮ್ ಮೊದಲ ದಿನದಿಂದಲೇ ವಿಮಾ ರಕ್ಷೆ ಒದಗಿಸುತ್ತದೆ. ಕಾಯುವಿಕೆಯ ತಲೆಬಿಸಿ ಇರಲ್ಲ. ಇದರಿಂದ ಗ್ರಾಹಕರು ಗುಣಮಟ್ಟದ ಆರೋಗ್ಯ ರಕ್ಷಣೆಗೆ ತಕ್ಷಣದ ಪ್ರವೇಶವನ್ನು ಪಡೆಯಬಹುದು. ಯೋಜನೆಯು ಅನಿಯಮಿತ ವಿಮಾ ಮೊತ್ತವನ್ನು ಸಹ ಒದಗಿಸುತ್ತದೆ. ಮಣಿಪಾಲ್ ಸಿಗ್ನಾ ಸರ್ವ ಪ್ರಥಮ್ ಅಗತ್ಯ ಮತ್ತು ಕೈಗೆಟುಕುವ ಆರೋಗ್ಯ ವಿಮಾ ರಕ್ಷಣೆಯ ಆಯ್ಕೆಯನ್ನು ಒದಗಿಸುತ್ತದೆ.

**ವಿಕಲಚೇತನ ಮಕ್ಕಳಿಗೆ, ಪುನರ್ವಸತಿ ಕಾರ್ಯಕರ್ತರಿಗೆ ವಿಕಲಚೇತನ ಸಾರ್ವಜನಿಕರಿಗೆ ವಿವಿಧ ಕ್ರೀಡಾ ಸ್ಪರ್ಧೆ ಆಯೋಜನೆ**

ಧಾರವಾಡ : ವಿಶ್ವ ವಿಕಲಚೇತನರ ದಿನಾಚರಣೆ-2024ರ ಪ್ರಯುಕ್ತ ಜಿಲ್ಲೆಯ ವಿಕಲಚೇತನ ಮಕ್ಕಳಿಗೆ, ಪುನರ್ವಸತಿ ಕಾರ್ಯಕರ್ತರಿಗೆ ಹಾಗೂ ವಿಕಲಚೇತನ ಸಾರ್ವಜನಿಕರಿಗೆ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ. ಕ್ರೀಡಾಕೂಟವನ್ನು ನವನಗರ ಸುತಗಟ್ಟಿಯ ಡಾನ್‌ಬಾಸ್ಕೋ ವಸತಿಯುತ ಶಾಲೆಯಲ್ಲಿ ನವೆಂಬರ 20, 2024 ರ ರಂದು ಬೆಳಿಗ್ಗೆ.9.00 ರಿಂದ ಸಂಜೆ.4.30ರವರೆಗೆ ವಿಶೇಷ ಶಾಲೆಗಳ ಮಕ್ಕಳಿಗಾಗಿ ಕ್ರೀಡಾಕೂಟ ಸ್ಪರ್ಧೆ ಹಾಗೂ ನವೆಂಬರ 21, 2024 ರಂದು ಬೆಳಿಗ್ಗೆ.9.00 ರಿಂದ ಸಂಜೆ.4.30ರವರೆಗೆ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಪುನರ್ವಸತಿ ಕಾರ್ಯಕರ್ತರಿಗೆ ಹಾಗೂ ವಿಕಲಚೇತನ ಸಾರ್ವಜನಿಕರಿಗೆ ಕ್ರೀಡಾಕೂಟ ನಡೆಸಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಲ್ಲಾ ಸಮುದಾಯ ಜನರಿಗೆ ಉಚಿತ ಆರೋಗ್ಯ ಶಿಬಿರ




ಗೋಕಾಕ: ರವಿವಾರ 24 ರಂದು ನಗರದ ನ್ಯೂ ಇಂಗ್ಲಿಷ್ ಸ್ಕೂಲ ಆವರಣದಲ್ಲಿ ಎಲ್ಲಾ ಸಮುದಾಯ ಜನರಿಗೆ ಉಚಿತ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಜಂಗಮ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ಡಾ.ಸಂಜಯ ಹೊಸಮಠ ಹೇಳಿದರು.

ಗುರುವಾರದಂದು ನಗರದ ಸಂಘದ ಕಛೇರಿಯಲ್ಲಿ ಕರೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಅಂದು ಮುಂಜಾನೆ 9.30 ರಿಂದ ಮಧ್ಯಾಹ್ನ 2ಘಂಟೆಯ ವರೆಗೆ ಈ ಉಚಿತ ಆರೋಗ್ಯ ಶಿಬಿರ ನಡೆಯಲ್ಲಿದ್ದು, ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಇಲ್ಲಿನ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು.ಶಿಬಿರದ ಉದ್ಘಾಟನೆಯನ್ನು ಶಾಸಕ ರಮೇಶ ಜಾರಕಿಹೊಳಿ ಅವರು ನೆರವೇರಿಸುವರು.

ಅತಿಥಿಗಳಾಗಿ ಅಶೋಕ್ ಪೂಜಾರಿ, ಡಾ.ಶರಣಪ್ಪ ಗಡೇದ, ಡಾ.ಮುತ್ತಣ್ಣಾ ಕೊಪ್ಪದ, ಡಾ.ರವೀಂದ್ರ ಅಂಟಿನ ಆಗಮಿಸುವರು. ಉಚಿತ ಆರೋಗ್ಯ ಶಿಬಿರದಲ್ಲಿ ಎಲ್ಲಾ ಸಮಾಜದ ಜನರಿಗೆ ಮುಕ್ತ ಅವಕಾಶ ಕಲ್ಲಸಿಲಾಗಿದ್ದು, ನುರಿತ 14 ಜನ ತಜ್ಞರು ಶಿಬಿರಾರ್ಥಿಗಳ ಆರೋಗ್ಯ ತಪಾಸಣೆ ನಡೆಸುವರು. ಈ ಶಿಬಿರದಲ್ಲಿ ಭಾಗವಹಿಸಿ ರಕ್ತ ತಪಾಸಣೆ, ಇ.ಸಿ.ಜಿ., ಸೇರಿದಂತೆ ಇತರ ಸ್ಕ್ಯಾನಿಂಗ ಗಳನ್ನು ಮಾಡಿಸಲು ನಗರದ ಗೋರೋಶಿ ರಕ್ತ ತಪಾಸಣಾ ಕೇಂದ್ರ, ಗುರು ರಕ್ತ ತಪಾಸಣಾ ಕೇಂದ್ರಗಳಲ್ಲಿ 50% ಪ್ರತಿಶತ ರಿಯಾಯಿತಿಯಲ್ಲಿ ರಕ್ತ ತಪಾಸಣೆ ಸೇರಿದಂತೆ ಇತರ ತಪಾಸಣೆಗಳನ್ನು ಮಾಡಲಾಗುವುದು ಎಂದ ಅವರು ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಆರೋಗ್ಯ ಸೌಲಭ್ಯ ಸಿಗಲಿ ಎಂಬ ಉದ್ದೇಶದಿಂದ ಈ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಜನರು ಈ ಶಿಬಿರದಲ್ಲಿ ಪಾಲ್ಗೊಂಡು ಆರೋಗ್ಯವಂತರಾಗಬೇಕು ಎಂದು ಡಾ.ಸಂಜಯ ಕೋರಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಜಂಗಮ ಕ್ಷೇಮಾಭಿವೃದ್ಧಿ ಸಂಘದ ಪ್ರಕಾಶ ಕಂಬಿ, ಸೇವಂತಾ ಮುಚ್ಚಂಡಿ ಹಿರೇಮಠ, ಸಂಗಮೇಶ ಗುಡದೂರ್ಕಲಮಠ, ಸೋಮಶೇಖರ್ ಹಿರೇಮಠ, ಈರಣ್ಣ ಹಿರೇಮಠ, ಉದಯ ಹೊಸಟ್ಟಿಮಠ, ದೇವು ಬೆಳಂಕಿಮಠ, ಡಾ.ಪ್ರವೀಣ ಕೆಳಗಿನಮಠ, ರವಿವರ್ಮಾ ಮುಚ್ಚಂಡಿಮಠ, ಪ್ರಶಾಂತ ಕುಮಾರಮಠ, ಆದರ್ಶ ಪೂಜಾರಿ, ಸಂಗಯ್ಯ ಹಿರೇಮಠ, ವಿರೇಂದ್ರ ಹಿರೇಮಠ, ಅನಿತಾ ಗುಡದೂರ್ಕಲಮಠ, ನಿರ್ಮಲಾ ಮುನ್ನೋಳಿಮಠ, ದೀಪಾ ಹಿರೇಮಠ ಉಪಸ್ಥಿತರಿದ್ದರು.

# ಪ್ರತಿಯೊಬ್ಬರು ಶೌಚಾಲಯ ಬಳಕೆ ಮಾಡಿ ಆರೋಗ್ಯಯುತವಾಗಿ -ಎಡಿ ವಿನಯಕುಮಾರ ನಾಯ್ಡು




**ಗೋಕಾಕ:** ಗ್ರಾಮೀಣ ಪ್ರದೇಶದಲ್ಲಿ ಪ್ರತಿ ಮನೆ-ಮನೆಗಳಲ್ಲಿ ಶೌಚಾಲಯ ನಿರ್ಮಿಸಿಕೊಳ್ಳುವುದರ ಜೊತೆಗೆ ಪ್ರತಿಯೊಬ್ಬರು ಶೌಚಾಲಯ ಬಳಕೆ ಮಾಡಿ ಆರೋಗ್ಯಯುತ ಜೀವನ ನಡೆಸುವಂತೆ ಗೋಕಾಕ ತಾಲೂಕ ಪಂಚಾಯತ ಎಡಿ ವಿನಯಕುಮಾರ ನಾಯ್ಡು ಹೇಳಿದರು.

ಬೆಳಗಾವಿ ಜಿಲ್ಲಾ ಪಂಚಾಯತ, ಗೋಕಾಕ ತಾಲೂಕ ಪಂಚಾಯತ ಹಾಗೂ ಬೆಟಗೇರಿ ಗ್ರಾಮ ಪಂಚಾಯತ ಸಹಯೋಗದಲ್ಲಿ ನ.19 ರಂದು ನಡೆದ ವಿಶ್ವ ಶೌಚಾಲಯ ದಿನಾಚರಣೆ ಕಾರ್ಯಕ್ರಮವನ್ನು ಸಸಿಗೆ ನೀರು ಹನಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಶೌಚಾಲಯ ಬಳಕೆ ಬಗ್ಗೆ ವಿದೇಶಕ್ಕೆ ಹೋಲಿಸಿದರೆ ನಮ್ಮ ದೇಶದ ಹಳ್ಳಿಗಳಲ್ಲಿ ಶೌಚಾಲಯ ಬಳಕೆ ಪ್ರಮಾಣ ಕಡಿಮೆ ಇದೆ. ಗ್ರಾಮೀಣ ವಲಯದಲ್ಲಿ ಶೌಚಾಲಯ ಬಳಕೆ ಪ್ರಮಾಣ ಹೆಚ್ಚಾಗಲು ಮತ್ತು ಬಯಲು ಶೌಚ ಮುಕ್ತಿ ಜಾಗೃತಿ ಮೂಡಿಸಲು ಸ್ಥಳೀಯ ಪ್ರಜ್ಞಾವಂತ ಯುವಕರು ಪ್ರಯತ್ನಿಸಬೇಕು ಎಂದರು.

ಗ್ರಾಪಂ ಮಾಜಿ ಅಧ್ಯಕ್ಷ ಲಕ್ಷ್ಮಣ ಚಂದರಗಿ ಅಧ್ಯಕ್ಷತೆ ವಹಿಸಿದ್ದರು. ಗೋಕಾಕ ತಾಲೂಕ ಪಂಚಾಯತ ಇಓ ಪರಶುರಾಮ ಘಸ್ತೆ, ಸ್ಥಳೀಯ ವಿವಿಡಿ ಸರಕಾರಿ ಪ್ರೌಢ ಶಾಲೆ ಮುಖ್ಯೋಪಾಧ್ಯಯ ರಮೇಶ ಅಳಗುಂಡಿ ಮುಖ್ಯತಿಥಿಗಳಾಗಿ ವಿಶ್ವ ಶೌಚಾಲಯ ದಿನ ಮತ್ತು ಶೌಚಾಲಯ ಬಳಕೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಬೆಟಗೇರಿ ಗ್ರಾಪಂ ಪಿಡಿಒ ಎಚ್.ಎನ್.ಬಾವಿಕಟ್ಟಿ, ರಮೇಶ ನೀಲಣ್ಣವರ, ರಶ್ಮಿ ಹುಂಡೇಕಾರ, ಬಸವರಾಜ ಪಣದಿ, ಸುರೇಶ ಬಾಣಸಿ, ವಿಠಲ ಚಂದರಗಿ, ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ, ಗ್ರಾಮದ ವಿವಿಧ ಶಾಲೆಯ ಮುಖ್ಯೋಪಾಧ್ಯಯರು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಗ್ರಾಪಂ ಅಧ್ಯಕ್ಷರು, ಸದಸ್ಯರು, ಸಿಬ್ಬಂದಿ, ಸ್ಥಳೀಯರು ಇದ್ದರು.

# ನಾಟಕ ಪ್ರದರ್ಶನಕ್ಕೆ ಚಾಲನೆ



ಧಾರವಾಡ : ನಾಟಕಗಳಿಗೆ ಪ್ರೇಕ್ಷಕರೇ ಜೀವಾಳ. ಆಧುನಿಕತೆಯ ಭರಾಟೆಯಲ್ಲಿರಂಗಕಲೆ ನಶಿಸಿ ಹೋಗುತ್ತಿರುವುದುಆತಂಕಕಾರಿಯಾದ ಬೆಳವಣಿಗೆಯಾಗಿದೆ ಎಂದುಧಾರವಾಡಜಿಲ್ಲಾ ಕ.ಸಾ.ಪ. ಅಧ್ಯಕ್ಷಡಾ. ಲಿಂಗರಾಜಅಂಗಡಿಅಭಿಪ್ರಾಯಪಟ್ಟರು.

ಕರ್ನಾಟಕ ವಿದ್ಯಾವರ್ಧಕ ಸಂಘವು, 69ನೇ ರಾಜ್ಯೋತ್ಸವ, ಕರ್ನಾಟಕ ನಾಮಕರಣ - 50ರ ಸಂಭ್ರಮ ಅಂಗವಾಗಿ 10 ದಿನಗಳ ನಾಟಕೋತ್ಸವದಲ್ಲಿಎರಡನೇ ದಿನ 'ವಿಶ್ವಾಮಿತ್ರ ಮೇನಕೆ ಡಾನ್ಸ್ ಮಾಡೋದು ಏನಕೆ ?'ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿಅವರು ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿದಅವರು, ಕ.ವಿ.ವ. ಸಂಘಕ್ಕೆ 134 ವರ್ಷಗಳ ಸುದೀರ್ಘಇತಿಹಾಸವಿದೆ. ಕ.ವಿ.ವ. ಸಂಘವು ಕಳೆದ 3 ವರ್ಷಗಳಿಂದ ಅನೇಕ ಅಭಿವೃದ್ಧಿ ಕಾರ್ಯಗಳ ಜೊತೆಗೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದುಅಭಿನಂದನೀಯ.10 ದಿನಗಳ ನಾಟಕೋತ್ಸವದ ನಿಮಿತ್ತ ಪ್ರತಿದಿನ ಸಾಧನೆ ಮಾಡಿದರಂಗಕಲಾವಿದರನ್ನುಗೌರವಿಸುವುದು ಶ್ಲಾಘನೀಯಕಾರ್ಯವಾಗಿದೆ.ನವ್ವಂಬರಇಡೀ ತಿಂಗಳು ಕಾರ್ಯಕ್ರಮಗಳಿಗೆ ಸರ್ಕಾರ ನಿರೀಕ್ಷಿತಅನುದಾನ ನೀಡದಿದ್ದರೂ ಸಂಘವು ತನ್ನಆದಾಯದಇತಿಮಿತಿಯಲ್ಲಿಕಾರ್ಯಕ್ರಮಆಯೋಜಿಸುತ್ತಿರುವುದು ಶ್ರಮದಾಯಕವೂ ಹೌದು.ಧಾರವಾಡದ ಸಾಂಸ್ಕೃತಿಕ ಹಿರಿಮೆಗೆಇದು ಸಾಕ್ಷಿಎಂದು ಹೇಳಿದರು.

2ನೇ ದಿನದ ನಾಟಕೋತ್ಸವದಲ್ಲಿಧಾರವಾಡದ ಲಕ್ಷ್ಮೀ ಬಡಿಗೇರ ಹಾಗೂ ಹುಬ್ಬಳ್ಳಿಯ ಶೋಭಾ ಪವಾರರಂಗಕಲಾವಿದರನ್ನು ಸಂಘದ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು. ಇರ್ವರೂರಂಗಕಲಾವಿದರು ಸನ್ಮಾನ ಸ್ವೀಕರಿಸಿ ಮಾತನಾಡಿದರು.

ವೇದಿಕೆಯಲ್ಲಿ ಕ.ವಿ.ವ. ಸಂಘದಅಧ್ಯಕ್ಷಚಂದ್ರಕಾಂತ ಬೆಲ್ಲದ ಉಪಸ್ಥಿತರಿದ್ದರು.ಸತೀಶತುರಮರಿ ಸ್ವಾಗತಿಸಿದರು.ಡಾ. ಜಿನದತ್ತ ಹಡಗಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೀರಣ್ಣಒಡ್ಡೀನ ಸಂಯೋಜಿಸಿದರು.ವಿಶ್ವೇಶ್ವರಿ ಬ. ಹಿರೇಮಠ ವಂದಿಸಿದರು.ಕೆ.ಎಚ್. ನಾಯಕ, ಪ್ರಮೀಳಾ ಜಕ್ಕಣ್ಣವರ, ಸವಿತಾ ನೆಲ್ಲಗಣಿ, ಶಿವಾನಂದ ಹೂಗಾರ ಸೇರಿದಂತೆ ಮುಂತಾದವರಿದ್ದರು.

ಧಾರವಾಡದ ಗೊಂಬೆ ಮನೆ ಕಲಾವಿದರಿಂದಡಾ. ಪ್ರಕಾಶಗರುಡ ನಿರ್ದೇಶನದ 'ವಿಶ್ವಾಮಿತ್ರ ಮೇನಕೆ ಡಾನ್ಸ್ ಮಾಡೋದು ಏನಕೆ ?ಎಂಬ ನಾಟಕ ಪ್ರದರ್ಶನಗೊಂಡಿತು.



# ಭೂಮಿ ಸಂಸ್ಥೆಯಿಂದ ರಾಜ್ಯದ 300 ರೈತರಿಗೆ ಪ್ರಶಸ್ತಿ ಪ್ರದಾನ



ಬೆಳಗಾವಿ 22: ಬೆಳಗಾವಿಯ ಚೆನ್ನಮ್ಮ ವೃತ್ತದ ಬಳಿ ಇರುವ ಕನ್ನಡ ಸಾಹಿತ್ಯ ಭವನದಲ್ಲಿ ಇಂದು ದಿನಾಂಕ 22 ಶುಕ್ರವಾರದಂದು ಮುಂಜಾನೆ 11 ಗಂಟೆಗೆ ಭೂಮಿ ಡಿಜಿಟಲ್ ಅಗ್ರಿ ಪ್ಲಾಟಫಾರ್ಮದವರು ಪತ್ರಿಕಾಗೋಷ್ಠಿಯನ್ನು ಕರೆದಿದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಘುನಂದನ ಟಿ. ಎನ್. ಅವರು ಮಾತನಾಡಿದರು.

ಕಳೆದ ಹತ್ತು ವರ್ಷಗಳಿಂದ ಕೃಷಿ ಕ್ಷೇತ್ರದಲ್ಲಿ ಆಧುನಿಕ ತಂತ್ರಜ್ಞಾನ ಬಳಕೆ ಹಾಗೂ ರೈತರ ಬೆಳೆಗಳಿಗೆ ಉತ್ತಮ ಆದಾಯ ನೀಡುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿರುವ, 'ಭೂಮಿ' ಸಂಸ್ಥೆ, ಇದೀಗ ಇನ್ನೊಂದು ಮೈಲಿಗಲ್ಲು ಸ್ಥಾಪಿಸಲು ಮುಂದಾಗಿದೆ ಎಂದು ಅವರು ಹೇಳಿದರು.

ಭೂಮಿ ಸಂಸ್ಥೆಯು ಡಿಸೆಂಬರ್ 22 ರಂದು ವಿಶ್ವ ರೈತರ ದಿನಾಚರಣೆ ಈ ಸಂದರ್ಭದಲ್ಲಿ ಪ್ರಥಮ ಬಾರಿಗೆ ರಾಜ್ಯದ 25 ಜಿಲ್ಲೆಗಳಿಂದ ಆಯ್ಕೆ ಮಾಡಿ, ಮುನ್ನೂರು ರೈತರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಬೆಂಗಳೂರಿನ ಪ್ರೆಸ್ ಕ್ಲಬ್ ಆವರಣದಲ್ಲಿ ನಡೆಯುವ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಬರುವ ರೈತರಿಗೆ ಉಚಿತ ಪ್ರಯಾಣ, ವಸತಿ ಮತ್ತು ಎಲ್ಲಾ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ರಘುನಂದನ್ ಹೇಳಿದರು.

ರೈತರಿಗೆ ಆರ್ಥಿಕವಾಗಿ ಸಹಾಯ ಮಾಡಲು 'ಐ ಸಪೋರ್ಟ ಫಾರ್ಮರ್' ಎಂಬ ವಿನೂತನ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ರೈತರಿಗೆ ಆನ್ಲೈನ್ ಮೂಲಕ ಪ್ರೋತ್ಸಾಹ ಧನ ನೀಡಲಾಗುವುದು ಹಾಗೂ ಇದಕ್ಕಾಗಿ ಮೊಬೈಲ್ ಅಪ್ಲಿಕೇಶನ್ ಅಭಿವೃದ್ಧಿ ಪಡಿಸಲಾಗಿದೆ. ಇದರ ಮೂಲಕ ಸಣ್ಣ ಮತ್ತು ಅತಿಸಣ್ಣ ರೈತು ಎದುರಿಸುತ್ತಿರುವ ಸವಾಲುಗಳನ್ನು ಪರಿಹರಿಸಲು ಪ್ರಾರಂಭಿಸಲಾಗಿದೆ ಎಂದು ರಘುನಂದನ್ ವಿವರಿಸಿದರು.

ರೈತರಿಗೆ ಮಾರ್ಗದರ್ಶನ, ಉತ್ತಮ ಮಾರುಕಟ್ಟೆ ಹಾಗೂ ಅವರ ಜೀವನ ಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ 'ಭೂಮಿ' ಸಂಸ್ಥೆ ಸೇವೆ ಸಲ್ಲಿಸುತ್ತಿದೆ ಎಂದು ಅವರು ಹೇಳಿದರು. 'ಭೂಮಿ' ಸಂಸ್ಥೆಯ ಮಾಧ್ಯಮ ಸಲಹೆಗಾರ ಹಾಗೂ ಹಿರಿಯ ಪತ್ರಕರ್ತ ಹನುಮೇಶ್ ಕೆ ಯಾವಗಲ್ ಮಾತನಾಡಿ, ಕೃಷಿ ಕ್ಷೇತ್ರದಲ್ಲಿ ಅಪಾರ ಪ್ರಮಾಣದ ಉದ್ಯೋಗ ಅವಕಾಶಗಳಿದ್ದು, ಈ ಕ್ಷೇತ್ರದತ್ತ ಯುವ ಜನಾಂಗ ಆಕರ್ಷಿಸುವ ಉದ್ದೇಶದಿಂದ 'ಭೂಮಿ' ಸಂಸ್ಥೆ ಸೇವೆ ಸಲ್ಲಿಸುತ್ತಿದೆ. ದೇಶ ಕಾಯುವ ಯೋಧನಿಗೆ ಸಿಗುವ ಗೌರವ ಪ್ರಾಶಸ್ತದಷ್ಟೇ ದೇಶಕ್ಕೆ ಅನ್ನ ನೀಡುವ ರೈತನಿಗೂ ಎನ್ನುವುದ ನಮ್ಮ ಸಂಸ್ಥೆಯ ಉದ್ದೇಶವಾಗಿದೆ ಎಂದು ಪತ್ರಿಕಾ ಗೋಷ್ಠಿಯಲ್ಲಿ ಹೇಳಿದರು.

# ನಡೆ ನುಡಿ ಇವು ತಕ್ಕಡಿ ಇದ್ದಂತೆ-ನಿರಂಜನಶ್ರೀ

ತಾಳಿಕೋಟೆ, ಯಾವಾಗಲೂ ನಡೆ ನುಡಿ ಎನ್ನುವವು ಎರಡೂ ಒಂದಾಗಿರಬೇಕು ಪಾಂಡಿತ್ಯದ ಬೆನ್ನು ಹತ್ತುವದು ಬೇಡಾ ಸರಳವಾಗಿ ಬಧುಕುವ ಕಾರ್ಯವಾಗಿರಲಿ ಉಸಿರು ಇರುವ ತನಕ ಕೊನೆಯವರೆಗೆ ಸಾಧನೆ ಎಂಬುದನ್ನು ಮಾಡಬೇಕು ನಿರಂತರವಾಗಿ ಯೋಗ, ಭಜನೆ ಎಂಬುದನ್ನು ಮಾಡಬೇಕೆಂದು ಖ್ಯಾತ ಆದ್ಯಾತ್ಮೀಕ ಪ್ರವಚನಕಾರರಾದ ಪ.ಪೂ.ಶ್ರೀ ನಿರಂಜನ ಮಹಾ ಸ್ವಾಮಿಗಳು ನುಡಿದರು.

ಗುರುವಾರರಂದು ಯೋಗೋತ್ಸವ ಸಮಿತಿ ತಾಳಿಕೋಟೆ ಇವರ ವತಿಯಿಂದ ಸ್ಥಳೀಯ ಕನ್ನಡ ಶಾಲಾ ಮೈಧಾನದಲ್ಲಿ ಏರ್ಪಡಿಸಲಾದ ಸಾಮೂಹಿಕ ಭಜನೆ, ಹಾಗೂ ಆದ್ಯಾತ್ಮೀಕ ಪ್ರವಚನದ 10ನೇ ದಿನದಂದು ಮಾತನಾಡುತ್ತಿದ್ದ ಅವರು ಸತ್ಸಂಗದಿಂದ ಭಾವ ಬದಲಾಗುತ್ತದೆ ಮನಸ್ಸು ಆನಂದದಾಯಕವಾಗುತ್ತದೆ ಇದು ನಿರಂತರದಾಯಕವಾಗಿರಬೇಕೆಂದರು. ಮಾಡುವಂತಹ ದಿನದ ಕಾಯಕ ಬಿಡಬಾರದು ಆದ್ಯಾತ್ಮೀಕ ಸಾಧನೆ ಎಂಬುದು ನಿರಂತರವಾಗಿರಲಿ ಅಭ್ಯಾಸ ಅನ್ನುವದು ಬಿಡಬಾರದು ಬಿಟ್ಟರೆ ನೆಮ್ಮದಿ ಶಾಂತಿಯನ್ನು ಕಳೆದುಕೊಳ್ಳುತ್ತದೆ ಎಂದರು.


ಹಾಡುವ ಹವ್ಯಾಸ ನಗುವಂತಹ ಹವ್ಯಾಸ ಯಾರಲ್ಲಿ ಇರುತ್ತದೆಯೋ ಆತನಲ್ಲಿ ದನಾತ್ಮಕ ಶಕ್ತಿ ಬರುತ್ತದೆ ನಗು ನಗುತ್ತಾ ಎಲ್ಲರಲ್ಲಿ ಒಳ್ಳೆಯ ಭಾವವಿದ್ದರೆ ದನಾತ್ಮಕ ಎನ್ನುವದು ಬರುತ್ತದೆ ಎಂದು ಹೇಳಿದ ಶ್ರೀಗಳು ಹೆಚ್ಚಾಗಿ ಜನತೆ ದನಾತ್ಮಕ ಶಕ್ತಿ ಬರುವವರ ಹತ್ತಿರ ಕುಳಿತುಕೊಳ್ಳಲು ಇಚ್ಚಿಸುತ್ತಾರೆ ಪ್ರೇಮ ಇದ್ದಲ್ಲಿ ಪರಮಾತ್ಮ ಇದ್ದಾನೆ ಅಲ್ಲಿ ಶಾಂತಿ ನೆಮ್ಮದಿ ಇರುತ್ತದೆ ಎಂದು ಹೇಳಿದ ಶ್ರೀಗಳು ಶ್ರೀಮಂತ ಬಡತನವೆಂಬುದು ಶಾಶ್ವತವಲ್ಲಾ ಅಧಿಕಾರವೂ ಶಾಶ್ವತ ಅಲ್ಲಾ ಮನೆಯಲ್ಲಿ ಎಂದೂ ಜಗಳವಾಡಬಾರದು ಎಲ್ಲರೂ ಪ್ರೀತಿ ಪ್ರೇಮದಿಂದ ಇರಬೇಕು ಎಂದೂ ವೈಮನಸ್ಸು ಜಗಳವಾಗಬಾರದು ಕಾರಣ ಕೂಡಿ ಬಧುಕಬೇಕು ಈ ಕೂಡಿ ಬಧುಕುವಂತಹ ಪ್ರೇಮದ ದೀಪ ಎಂದೂ ಆರಬಾರದೆಂಬುದನ್ನು ಸೊಸೆಯಾದವಳು ಮಾವನು ಕೇಳಿದ ಪ್ರಶ್ನೇಗೆ ಉತ್ತರಿಸಿದಾಗ ಲಕ್ಷ್ಮೀ ವಲುಮೆ ಪಡೆದ ಮಾವ ಮಹಾಲಕ್ಷ್ಮೀತಾಯಿ ಈ ರೈತ ಮಾವನಿಗೆ ಹಾಗೂ ಮನೆತನಕ್ಕೆ ಮೆಚ್ಚಿ ನಿನಗೇನು ಬೇಕು ಎಂದು ಕನಸ್ಸಿನಲ್ಲಿ



ಕೇಳಿದಾಗ ಸೋಸೆ ಹೇಳಿದ ಮಾತನ್ನೇ ಲಕ್ಷ್ಮೀದೇವಿಗೆ ಹೇಳಿದಾಗ ಮನೆಯಿಂದ ಹೊರಗೆ ಹೋಗಬೇಕೆಂಬ ಇಚ್ಚಿತ ಲಕ್ಷ್ಮೀದೇವಿ ಪುನಃ ಅದೇ ಮನೆಯಲ್ಲಿ ವಾಸವಾದಳೆಂಬ ಚಿಕ್ಕ ಕಥೆಯೊಂದನ್ನು ಹೇಳಿ ಮನವರಿಕೆ ಮಾಡಿದ ಶ್ರೀಗಳು ನಮ್ಮ ಬಧುಕು ಎಂಬುದು ನೂರು ವರ್ಷದ್ದಾಗಿದ್ದು ಈ ಬಧುಕು ಸಮೃದ್ಧ ಸಂತಸದಾಯಕವಾಗಿರಬೇಕೆಂದರು. ಇರುವತನಕ ದುಡಿಯಬೇಕು ಮೇಲುಕು ಹಾಕಿದಾಗ ಸಾರ್ಥಕವಾಗಿದುದ್ದು ಹೃದಯ ತುಂಬಿ ಬರಬೇಕು ಹುಟ್ಟಿದಾಗ ಅಳುತ್ತಲೇ ಬಂದಿದ್ದೇವೆ ಜೀವನವನ್ನು ಕೊಟ್ಟು ಆಶಿರ್ವದಿಸಿದ ಭಗವಂತನಿಗೆ ಹೇಳುವಾಗ ನಗು ಬರಬೇಕು ಸಮಾಜಕ್ಕೆ ದೇಶಕ್ಕೆ ದುಡಿದು ಕಳಕೊಂಡಾಗ ನಗಬೇಕೆಂದರು.

ಹುಟ್ಟಿದಾಗ ಉಸಿರಿತ್ತು ಹೆಸರಿರಲಿಲ್ಲಾ ಬಧುಕಿದರೆ ನಾಲ್ಕು ಜನತೆ ಹೊಗಳುವಂತೆ ಹೆಸರಿರಬೇಕು ಬಸವಣ್ಣನವರು, ಅಕ್ಕಮಹಾದೇವಿ, ಮಹಾತ್ಮಾಗಾಂಧಿಜಿ ಅವರಂತಹ ಅನೇಕ ಮಹಾತ್ಮರು ಆಗಿ ಹೋಗಿದ್ದಾರೆ ಅವರ ಹೆಸರುಗಳು ಇನ್ನೂ ಅಜರಾಮರವಾಗಿ ಉಳಿದಿವೆ ಅವರು ಸಮಾಜಕ್ಕಾಗಿ ದೇಶಕ್ಕಾಗಿ ದುಡಿದಿದ್ದೇ ಕಾರಣವಾಗಿದೆ ಎಂದು ಹೇಳಿದ ಶ್ರೀಗಳು ಸತ್ತ ನಂತರವೂ ಹೆಸರು ಇರುವಂತೆ ಬಧುಕಬೇಕೆಂದರು.

ಮಹಾತ್ಮರು ಸಂತರು ಆದವರು ಕವನ, ಪಧ್ಯ ಗದ್ದೆ ಬರೆಯುತ್ತಾರೆ ಕವನ ಬರೆದು ಸದುಪಯೋಗ ಪಡೆದುಕೊಂಡರೆ ಜೀವನ ಸಾರ್ಥಕವಾಗುತ್ತದೆ ಎಂದರು. ಜೀವನ ಅನ್ನುವಂತಹದ್ದನ್ನು ಖಾಲಿ ಪೇಪರ ಇದ್ದಂತೆ ಈ ಖಾಲಿ ಪೇಪರದಲ್ಲಿ ಗೀಚಬಾರದು 84 ಲಕ್ಷ ಜೀವರಾಶಿಗಳಲ್ಲಿ ಹುಟ್ಟಿ ಬಂದ ಮನುಷ್ಯ ಜನ್ಮ ಇದನ್ನು ಸರಿಯಾಗಿ ಬಳಿಸಿಕೊಳ್ಳಬೇಕೆಂದು ಗುರು ಶಿಷ್ಯರ ಕಥೆಯೊಂದನ್ನು ಹೇಳಿದ ಶ್ರೀಗಳು ಶಿಷ್ಯನೋರ್ವ ಗುರುಗಳು ನೀಡಿದ ದಾನ್ಯವನ್ನು ಉಪಯೋಗಿಸಿ ಬಿತ್ತನೆ ಮಾಡಿ ಗುರುಗಳು 12 ವರ್ಷಗಳ ಕಾಲ ಬರುವದಿಲ್ಲಾವೆಂದು ಅವರು ಊರಿಗೆ 12ವರ್ಷದ ನಂತರ ಬರುವವರೆಗೂ ಗುರುಗಳು ಕೊಟ್ಟು ಹೋದಂತಹ ಭೊಗಸೆ ಜೋಳದಿಂದ ತನ್ನ ಭೂಮಿಯಲ್ಲಿ ಬಿತ್ತನೆ ಮಾಡಿ ಸಾವಿರಾರು ಜೋಳದ ಚೀಲನ್ನು ಸಂಗ್ರಹಿಸಿ ಅದೇ ಸ್ಥಳದಲ್ಲಿ ಪುರಾಣ ಪ್ರವಚನ ನಡೆಸಿ ದಾಸೋಹ ವ್ಯವಸ್ಥೆ ಕಲ್ಪಿಸಿದ್ದನ್ನು ಆ ಶಿಷ್ಯನನ್ನು ಗುರುಗಳು ನೋಡಿ ಮೆಚ್ಚುಗೆ ವ್ಯಕ್ತಪಡಿಸಿದ್ದರ ಕುರಿತು ಕಥೆಯೊಂದನ್ನು ಹೇಳಿದ ಶ್ರೀಗಳು ತನಗಾಗಿ ಹಾಗೂ ಸಮಾಜಕ್ಕಾಗಿ ದುಡಿದರೆ ಸಮಾಜಕ್ಕೆ ಪ್ರೀಯನಾಗುತ್ತಾನೆ ಜೀವನದಲ್ಲಿ ಕಾಯಕ ಆನಂದ ಕಾಯಕ ಇದರಿಂದ ಆನಂದ ಸಿಗುತ್ತದೆ ಧರ್ಮದ ಕಾಯಕ ಅಂದರೆ ದೇಶ, ಪ್ರಕೃತಿ, ವಾಣಿ, ಪಶು ಪಕ್ಷೀ ರಕ್ಷಣೆ, ತಂದೆ ತಾಯಿ ರಕ್ಷಣೆ, ಸಹಾಯ ಮಾಡಿದವರಿಗೆ ಉಪಕಾರ ಮಾಡಿದಂತಹ ಕಾರ್ಯವಾಗುತ್ತದೆ ದಿವ್ಯ ಕಾಯಕ ಇದೆಲ್ಲವನ್ನು ಮಾಡಿ ಮರೆತು ಬಿಡುವಂತಹದ್ದಾಗಿದೆ ಈ ನಾಲ್ಕು ಕಾಯಕ ಮಾಡುತ್ತಾ ಬಧುಕಿದರೆ ಜೀವನ ಆನಂದದಾಯಕವಾಗುತ್ತದೆ ಎಂದರು. ಬೆಳಿಗ್ಗೆ ಎದ್ದು ಯೋಗ ವಾಯುಹಾರ ನಂತರ ಲಿಂಗ ಪೂಜೆ ಚೆನ್ನಾಗಿ ಅಪೇಕ್ಷಿತ ಕಾಯಕದೊಂದಿಗೆ ದಾಸೋಹ ಮಾಡಬೇಕು ಆಡುತ್ತಾ ನಗುತ್ತಾ ಇದ್ದರೆ ಸತ್ಯದ ಜ್ಞಾನ ಇರುತ್ತದೆ ಎಂದು ಕೆಲವು ಚಿಕ್ಕ ಕಥೆಗಳನ್ನು ಹೇಳಿ ಉದಾರಿಸಿದರು. ಈ ಸಮಯದಲ್ಲಿ ಅಸಂಖ್ಯಾತ ಭಕ್ತಸಮೂಹ ಯೋಗೋತ್ಸವ ಸಮಿತಿಯ ಪದಾಧಿಕಾರಿಗಳು, ಹಾಗೂ ಸದಸ್ಯರು ಪಾಲ್ಗೊಂಡಿದ್ದರು.



ಬೆಳಗಾವಿ ಜಿಲ್ಲಾ ಡಿಸಿಸಿ ಬ್ಯಾಂಕಿಗೆ ಅಧ್ಯಕ್ಷರಾಗಿ ಅಪ್ಪಸಾಹೇಬ ಕುಲಗೋಡ ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಗುರುವಾರ ಬೆಳಗಾವಿಯಲ್ಲಿ ಬಸವನಬಾಗೇವಾಡಿಯ ಯುವ ಮುಖಂಡ, ವಿಜಯಪುರ ಸೌಹಾರ್ದ ಬ್ಯಾಂಕಿನ ನಿರ್ದೇಶಕ ಜಟ್ಟಿಂಗರಾಯ ಮಾಲಗಾರ ಅವರು ಸಾಂಸ್ಕೃತಿಕ ನಾಯಕ ಬಸವೇಶ್ವರರ ಭಾವಚಿತ್ರ ನೀಡುವ ಮೂಲಕ ಸನ್ಮಾನಿಸಿದರು.

## ಶ್ರೀ ಅಮರಸಿದ್ಧೇಶ್ವರ ಮಹಾಸ್ವಾಮಿಗಳಿಗೆ ಪಿಎಚ್‌ಡಿ ಪದವಿ ನೀಡಿದ ಹಿನ್ನಲೆ

# ನಾಳೆ ಅಂಕಲಗಿ ಅಡವಿಸಿದ್ಧೇಶ್ವರ ಶ್ರೀಮಠದಲ್ಲಿ ಅಭಿನಂಧನಾ ಸಮಾರಂಭ



**ಗೋಕಾಕ:** ಅಂಕಲಗಿ–ಕುಂದಗರಿ ಶ್ರೀ ಅಡವಿಸಿದ್ಧೇಶ್ವರ ಸಂಸ್ಥಾನ ಮಠದ ಪೀಠಾಧೀಪತಿ ಶ್ರೀ ಅಮರಸಿದ್ಧೇಶ್ವರ ಮಹಾಸ್ವಾಮಿಗಳಿಗೆ ಧಾರವಾಡ ವಿಶ್ವವಿದ್ಯಲಯದಿಂದ ಪಿಎಚ್‌ಡಿ ಪದವಿ ನೀಡಿದ ಹಿನ್ನಲೆ ರವಿವಾರ ದಿ.24ರಂದು ಸಂಜೆ ಅಂಕಲಗಿ ಅಡವಿಸಿದ್ಧೇಶ್ವರ ಶ್ರೀಮಠದಲ್ಲಿ ಅಭಿನಂಧನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬೋರಯ್ಯ ಅಂಕಲಗಿಮಠ ಹೇಳಿದರು.

ಅವರು, ತಾಲೂಕಿನ ಅಂಕಲಗಿ ಅಡವಿಸಿದ್ಧೇಶ್ವರ ಮಠದಲ್ಲಿ ಕರೇದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಸದಾ ಭಕ್ತರ ಕಷ್ಟಕಾರ್ಪಣ್ಯಗಳಿಗೆ ಮಿಡಿಯುವ ಶ್ರೀಗಳಿಗೆ ಪಿಎಚ್‌ಡಿ ಪದವಿ ಒಲಿದಿದ್ದು ಕುಂದರನಾಡು ಭಾಗದ ಅಡವಿಸಿದ್ಧೇಶ್ವರ ಮಠದ ಭಕ್ತರು, ಗಣ್ಯಮಾನ್ಯರು, ವಿವಿಧ ಸಂಘ ಸಂಸ್ಥೆಗಳು, ಕನ್ನಡಪರ ಸಂಘಟನೆಗಳಿಂದ ಶ್ರೀಮಠದ ಆವರಣದಲ್ಲಿ ಅಭಿನಂಧನ ಸಮಾರಂಭ ಜರುಗಲಿದೆ ಎಂದರು.

'ದಶೋಪನಿಷತ್ತು ಸ್ವರೂಪ' ಎಂಬ ವಿಷಯ ಕುರಿತು ಸಂಸ್ಕೃತದಲ್ಲಿ ಮಹಾಪ್ರಬಂಧ ಸಲ್ಲಿಸಿದ್ದ ಶ್ರೀ ಅಮರಸಿದ್ಧೇಶ್ವರ ಶ್ರೀಗಳಿಗೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ನೀಡಿದೆ. ಶ್ರೀಗಳಿಗೆ ಕರ್ನಾಟಕ ಕಲಾ ಮಹಾವಿದ್ಯಾಲಯ ಸಂಸ್ಕೃತ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ರಜನಿ ಎಚ್ ಮಾರ್ಗದರ್ಶಕರಾಗಿದ್ದರು. ಶ್ರೀ ಅಮರಸಿದ್ದೇಶ್ವರ ಶ್ರೀಗಳು ಮೂಲತಃ ರಾಯಚೂರು ಜಿಲ್ಲೆಯ ಸಿರಿವಾರದವರು. ಬದಾಮಿ ಹತ್ತಿರದ ಶಿವಯೋಗ ಮಂದಿರದಲ್ಲಿ ಪ್ರಾಥ–'ಮಿಕ ಶಿಕ್ಷಣ, ಕಮತಗಿಯಲ್ಲಿ ಪ್ರೌಢ ಶಿಕ್ಷಣ ಮತ್ತು ಸೂತ್ತೂರು ಮಠದ ಜೆ–ಎಸ್‌ಎಸ್ ಗುರುಕುಲದಲ್ಲಿ ಪೂರೈಸಿರುವ ಅವರು ಮೈಸೂರು ವಿವಿಯಿಂದ ತತ್ವಶಾಸ್ತ್ರ ಮತ್ತು ಸಂಸ್ಕೃ ವಿಷಯದಲ್ಲಿ ಎಮ್‌ಎ ಪೂರೈಸಿದ್ದಾರೆ. ಖ್ಯಾತ ವಾಗ್ಮಿಗಳಾಗಿರುವ ಶ್ರೀಗಳು ಪ್ರವಚನದ ಮೂಲಕ ಯುವಪೀಳಿಗೆಯಲ್ಲಿ ಜಾಗೃತಿ ಮೂಢಿಸುವ ಕಾರ್ಯ ಮಾಡುತ್ತಲಿದ್ದಾರೆ. ಶ್ರೀಮಠದಿಂದ ಧಾರ್ಮಿಕ ಆದ–'ಧ್ಯಾತ್ಮೀಕ ಕಾರ್ಯಗಳಲ್ಲದೆಸಮಾಜಮುಖಿ ಕಾರ್ಯಗಳಿಂದ ಹೆಸರುವಾಸಿಯಾಗಿರುವ ಶ್ರೀಗಳಿಗೆ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳುವ ಮೂಲಕ ಶ್ರೀಗಳನ್ನು ಅಭಿನಂಧಿಸುವ ಕಾರ್ಯಮಾಡಲಾಗುತ್ತಿದ್ದು ಅಂಕಲಗಿ–ಕುಂದಗರಿ ಶ್ರೀ ಅಡವಿಸಿದ್ಧೇಶ್ವರ ಸಂಸ್ಥಾನ ಮಠದ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾರಂಭ ಯಶಸ್ವಿಗೊಳಿಸುವಂತೆ ಕೋರಿದರು.

ಪತ್ರಿಕಾಗೋಷ್ಠಿಯಲ್ಲಿ ಮಲ್ಲಿಕಾರ್ಜುನ ಕೂಲಿನವರ, ಶಂಕರ ಘೋಡಗೇರಿ, ಈರಣ್ಣ ಮದವಾಲ, ಅರುಣ ಮದವಾಲ, ಸಿದ್ದು ಸೇರಿದಂತೆ ಇತರರು ಇದ್ದರು.

****

# ದೇವದಾಸಿ ಪದ್ಧತಿ ಮನುಕುಲಕ್ಕೆ ಅವಮಾನ: ಶ್ವೇತಾ ಬಿಡಕರ




**ಜಮಖಂಡಿ:** ಸಾಮಾಜಿಕ ಪಿಡುಗುಗಳು ಹೋಗಬೇಕಾಗಿದೆ. ಸರಕಾರ ಜೊತೆಗೆ ಸಾರ್ವಜನಿಕರು ಕೈಜೋಡಿಸಬೇಕು. ಬೆಳಗಾವಿ, ಬಾಗಲಕೋಟ ಎಚ್.ಐ.ವಿ.ಪೀಡತರ ಸಂಖ್ಯೆ ಹೆಚ್ಚಾಗಿದೆ. ದೇವದಾಸಿ ಅನಿಷ್ಠ ಪದ್ಧತಿ ಸಂಪೂರ್ಣವಾಗಿ ನಿರ್ಮೂಲನೆ ಆಗಬೇಕಾಗಿದೆ ಎಂದು ಉಪವಿಭಾಗಾಧಿಕಾರಿ ಶ್ವೇತಾ ಬಿಡಕರ ಹೇಳಿದರು. ನಗರದ ಬಸವೇಶ್ವರ ವೃತ್ತದಲ್ಲಿರುವ ಗ್ರ್ಯಾಂಡ–ಇನ್–ವಸತಿ ಸಭಾಭವನದಲ್ಲಿ ಚೈತನ್ಯ ಮಹಿಳಾ ಸಂಸ್ಥೆ ಮುಧೋಳ ಮತ್ತು ಗುಡ್ ಯೋಜನೆ ಹಮ್ಮಿಕೊಂಡಿದ್ದ ವಿಶ್ವ ಮಕ್ಕಳ ದಿನಾಚರಣೆ ನಿಮಿತ್ತ ಮಕ್ಕಳನ್ನು ರಕ್ಷಿಸಿ ಭವಿಷ್ಯಕ್ಕಾಗಿ ಪರಿಸರ ಉಳಿಸಿ, ಬೆಳಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸಾಮಾಜಿಕ, ಆರ್ಥಿಕವಾಗಿ ಸದೃಢರಾಗಲು ದೇವದಾಸಿ ಮಹಿಳೆಯರು ಸರಕಾರದ ಎಲ್ಲ ರೀತಿಯ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ದೇವದಾಸಿ ಪದ್ಧತಿ ಮನುಕುಲಕ್ಕೆ ಅವಮಾನ ಸಂಗತಿಯಾಗಿದೆ. ದೇವದಾಸಿ ಮಕ್ಕಳು ಗಟ್ಟಿತನ ಬೆಳಸಿಕೊಳ್ಳುವ ಮೂಲಕ ಸಮಾಜದಲ್ಲಿ ಮಾದರಿಯಾಗಿ ಬದುಕಬೇಕು ಎಂದರು.

ಹಿರಿಯ ಪತ್ರಕರ್ತ ಮಲ್ಲೇಶ ಆಳಗಿ ಮಾತನಾಡಿ, ರಾಜ್ಯದಲ್ಲಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಆಗಬೇಕೆಂದು ರಾಜ್ಯಮಟ್ಟದ ಕಾರ್ಯಾಗಾರದಲ್ಲಿ ಬೇಡಿಕೆ ಇಡಲಾಗಿದ್ದು, ಅದರಂತೆ ಸರಕಾರ ಮರು ಸಮೀಕ್ಷೆಗೆ ಸಿದ್ಧತೆ ಮಾಡಿಕೊಂಸು ನಿರ್ದೇಶನ ನೀಡಿದೆ. ವಂಚಿತ ದೇವದಾಸಿ ಮಹಿಳೆಯರು ಮರು ಸಮೀಕ್ಷೆಯಲ್ಲಿ ತಮ್ಮ ಹೆಸರು ನೊಂದಾಯಿಸುವ ಮೂಲಕ ಅನಿಷ್ಠ ಪದ್ಧತಿಗೆ ಕೊನೆಗೊಳ್ಳಬೇಕು. ಮುಧೋಳದ ಚೈತನ್ಯ ಮಹಿಳೆ ಸಂಸ್ಥೆ ಕಳೆದ 10 ವರ್ಷದಿಂದ ನಿರಂತರವಾಗಿ 5 ಜಿಲ್ಲೆಗಳಲ್ಲಿ ದೇವದಾಸಿ ಮಹಿಳೆಯರಿಗೆ ಆತ್ಮಸ್ಥೆರ್ಯ ತುಂಬುವ ಮೂಲಕ ಸದೃಢರನ್ನಾಗಿ ಮಾಡುವ ಕೆಲಸದಲ್ಲಿ ತೊಡಗಿಕೊಂಡಿದೆ ಎಂದರು.

ಮುಧೋಳದ ಚೈತನ್ಯ ಮಹಿಳಾ ಸಂಸ್ಥೆ ಅಧ್ಯಕ್ಷೆ ಮಧು ನಡುವಿನಮನಿ ಮಾತನಾಡಿದರು. ವೇದಿಕೆಯಲ್ಲಿ ಗುಡ್ ಯೋಜನೆ ಕಾರ್ಯದರ್ಶಿ ರೇಖಾ ಗಾಡಿವಡ್ಡರ, ಸಮಾಜ ಕಲ್ಯಾಣ ಇಲಾಖೆ ಅಧಿಕ್ಷಕ ಸಿದ್ದು ಕೊಲಕಂಬಿ, ಕಾಶೀನಾಥ ಹೊಸಮನಿ ಸಹಿತ ಹಲವರು ಇದ್ದರು.

ಸ್ವಪ್ನಾ ಗೊಂಗಗೋಳ ಪ್ರಾರ್ಥಿಸಿದರು. ಐಶ್ವರ್ಯ ತಳಕೇರಿ ಸ್ವಾಗತಿಸಿದರು. ವಿಜಯಲಕ್ಷ್ಮೀ ಕಡಕೋಳ ನಿರೂಪಿಸಿದರು. ಅನಸೂಯಾ ಹಾದಿಮನಿ ವಂದಿಸಿದರು. ಕಾರ್ಯಕ್ರಮದಲ್ಲಿ 100ಕ್ಕೂ ಹೆಚ್ಚು ದೇವದಾಸಿ ಮಕ್ಕಳು ಪಾಲ್ಗೊಂಡಿದ್ದರು.

# ವಕೀಲರ ಸಂಘದ ಅಭಿವೃದ್ಧಿಗೆ ಬದ್ಧ: ಸಚಿವ ಸತೀಶ ಜಾರಕಿಹೊಳಿ




**ರಾಯಬಾಗ:** ರಾಯಬಾಗದಲ್ಲಿರುವ ವಕೀಲರ ವಿವಿಧ ಬೇಡಿಕೆಗಳನ್ನು ಹಂತ–ಹಂತವಾಗಿ ಈಡೇರಿಸಲಾಗುವುದು. ಅಲ್ಲದೇ ನಮ್ಮ ಸರ್ಕಾರದ ಅವಧಿಯಲ್ಲಿ ನ್ಯಾಯಾಲಯ ಹಾಗೂ ವಕೀಲರ ಸಂಘಕ್ಕೆ ಮೂಲ ಸೌಕರ್ಯ ಒದಗಿಸಲು ಪ್ರಮುಖ ಪಾತ್ರ ವಹಿಸಲಾಗುವುದು ಎಂದು ಜಿಲ್ಲಾಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಹೇಳಿದರು.

ರಾಯಬಾಗ ವಕೀಲರ ಸಂಘದ ನೂತನ ಕಟ್ಟಡ ಕಾಮಗಾರಿ ವೀಕ್ಷಿಸಿ ಅವರು ಮಾತನಾಡಿದರು. ಕಾಮಗಾ–ರಿಯನ್ನು ಶೀಘ್ರವೇ ಪೂರ್ಣಗೊಳಿಸಿ ನ್ಯಾಯವಾದಿಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಅಧಿಕಾ–ರಿಗಳಿಗೆ ಸಚಿವರು ಸೂಚಿಸಿದ ಸಚಿವರು, ಕಾಂಗ್ರೆಸ್ ಆಡಳಿತ ಅವಧಿಯಲ್ಲಿ ವಕೀಲರ ಸಂಘದ ಯಾವುದೇ ಸಮಸ್ಯೆಗಳಿದ್ದರೂ ಈಡೇರಿಸಲಾಗುವುದು. ಈಗಾಗಲೇ ಕಳೆದ ಬಾರೀ 1.5 ಕೋಟಿ ರೂ. ಅನುದಾನ ನೀಡಲಾಗಿದೆ. ಸುಸಜ್ಜಿತವಾದ ಕಟ್ಟಡ ನಿರ್ಮಾಣವಾಗಲಿ, ವಕೀಲರ ಸಂಘವು ಹೆಚ್ಚಿನ ಏಳಿಗೆ ಕಾಣಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಪ್ಪಾಸಾಹೇಬ ಕುಲಗುಡೆ, ಅಮೀತ ಘಾಟಗೆ, ನ್ಯಾಯವಾದಿಗಳಾದ ಪಿ.ಎಂ ದರೋರ ರಾಜು ಶಿರಗಾಂವೆ ಎಲ್.ಬಿ.ಚೌಗಲಾ ಎಸ್.ಬಿ.ಬಿರಾದರ ಪಾಟೀಲ .ಪಿ.ಎಮ್.ಪಾಟೀಲ್. ಆರ್.ಜಿ.ಕುಲಕರ್ಣಿ ಆರ್.ಎಚ್ ಗೋಂಡೆ ಕೆ.ಎಸ್ ಮುಂಡಿಪಲ್ಲೆ.ಪಿ.ಆರ್ ಗುಡೋಡಗಿ.ಎಸ್.ಬಿ.ಪಾಟೀಲ್.ಎಸ್.ಕೆ ರೆಂಟೆ.ಬಿ.ಬಿ.ಈಟಿ ಇತರರು ಇದ್ದರು."

## ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ

# 23 – 24 ರಂದು ವಿಶೇಷ ನೋಂದಣಿ ಅಭಿಯಾನ


**ಬಾಗಲಕೋಟೆ:** ಚುನಾವಣಾ ಆಯೋಗದ ನಿರ್ದೇಶನದಂತೆ ನವೆಂಬರ 23 ಮತ್ತು 24 ರಂದು ಜಿಲ್ಲೆಯಲ್ಲಿ ಮತದಾರರ ವಿಶೇಷ ನೋಂದಣಿ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿದ ಅವರು ಸದರಿ ದಿನಗಳಂದು ಆಯಾ ಭಾಗದ ಮತಗಟ್ಟೆ ಮಟ್ಟದ ಅಧಿಕಾರಿಗಳು, ಮತಗಟ್ಟೆ ಮಟ್ಟದ ಅಧಿಕಾರಿಗಳ ಮೇಲ್ವಿಚಾರಕರು ಬೆಳಿಗ್ಗೆ 9 ರಿಂದ ಸಂಜೆ 5 ವರೆಗೆ ಮತಗಟ್ಟೆಗಳಲ್ಲಿ ಹಾಜರಿದ್ದು, ಅರ್ಜಿಗಳನ್ನು ಸ್ವೀಕರಿಸಲಿದ್ದಾರೆ. ಕಾರಣ 18 ವರ್ಷ ಮೇಲ್ಪಟ್ಟ ಎಲ್ಲ ಅರ್ಹ ಮತದಾರರು ತಮ್ಮ ಭಾಗದ ಮತಗಟ್ಟೆಗಳಿಗೆ ಭೇಟಿ ನೀಡಿ ಮತಗಟ್ಟೆ ಮಟ್ಟದ ಅಧಿಕಾರಿಗಳ ಬಳಿ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಸರು ನೋಂದಾಯಿಸಲು ನಮೂನೆ 6, ಮೃತ ಮತದಾರರು, ಡಬಲ್ ನೋಂದಣಿ ಮಾಡಿಕೊಂಡ ಮತದಾರರ ಹೆಸರನ್ನು ಕಡಿಮೆಗೊಳಿಸಲು ನಮೂನೆ 7 ರಲ್ಲಿ ಹಾಗೂ ಮತದಾರರ ಗುರುತಿನ ಚೀಟಿನಲ್ಲಿ ತಿದ್ದುಪಡಿ, ಸ್ಥಳಾಂತರ ಇದ್ದಲ್ಲಿ ನಮೂನೆ 8 ರಲ್ಲಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ನಾಳೆ ಗುರುದೇವಾಶ್ರಮದಲ್ಲಿ ಸತ್ಸಂಗ


ಜಮಖಂಡಿ: ತಾಲೂಕಿನ ಹುಲ್ಯಾಳ ಗುರುದೇವಾಶ್ರಮದ ಗುರುದೇವ ಸತ್ಸಂಗ ಬಳಗದ ಆಶ್ರಯದಲ್ಲಿ ಪ್ರತಿ ತಿಂಗಳ 4ನೇ ರವಿವಾರ ಹಮ್ಮಿಕೊಳ್ಳುವ ಶ್ರೀಗುರುದೇವ ಸತ್ಸಂಗ ಮಾಸಿಕ ಕಾರ್ಯಕ್ರಮ ನ.24 ರಂದು ಸಂಜೆ 6 ಗಂಟೆಗೆ ಜರುಗಲಿದೆ. ಬೀಳಗಿಯ ಜಾನಪದ ಕಲಾವಿದ ಸಿದ್ದಪ್ಪ ಬಿದರಿ ಅವರು ಜಾನಪದರು ಮತ್ತು ಜಾನಪದ ಸಂಸ್ಕೃತಿ ಎಂಬ ವಿಷಯ ಕುರಿತು ಅನುಭಾವ ಹಂಚಿಕೊಳ್ಳಲಿದ್ದಾರೆ. ಶ್ರೀಗುರುದೇವ ಸಂಗೀತ ಬಳಗದಿಂದ ಸಂಗೀತ ಸೇವೆ ನಡೆಯಲಿದೆ. ವಿಜಯಕುಮಾರ ಹಿರೆಸೋಮಣ್ಣವರ, ಜಯಕುಮಾರ ಹಿರೆಸೋಮಣ್ಣವರ ಸಹೋದರರಿಂದ ಪ್ರಸಾದ ದಾಸೋಹ ನಡೆಯಲಿದ್ದು, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇ ಜಡಂದು ಶ್ರೀಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಂಗಮ ಸಮಾಜದಿಂದ ನಿರುಪಾಧೀಶ್ವರಶ್ರೀಗಳಿಗೆ ಸನ್ಮಾನ



ಜಮಖಂಡಿ: ನಗರದ ಸಾಕ್ಷಾತ್ಕಾರ ಭವನದಲ್ಲಿ ತಾಲೂಕಾ ಜಂಗಮ ಸಮಾಜ ಮತ್ತು ತಾಲೂಕಾ ಜಂಗಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಮ್ಮಿಕೊಂಡಿದ್ದ ಜಂಗಮ ಮಕ್ಕಳ ಪ್ರತಿಭಾಪುರಸ್ಕಾರ ಸಮಾರಂಭದಲ್ಲಿ ಡಾಕ್ಟರೆಟ್ ಪ್ರಶಸ್ತಿ ಪುರಸ್ಕೃತ ತಾಲೂಕಿನ ಮರೆಗುದ್ದಿಯ ಅಡವಿಸಿದ್ದೇಶ್ವರ ಮಠದ ಡಾ.ನಿರುಪಾಧೀಶ್ವರ ಶ್ರೀಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಶಾಸಕ ನಾಡೋಜ ಡಾ.ಜಗದೀಶ ಗುಡಗುಂಟಿ, ಕಲ್ಯಾಣಮಠದ ಗೌರಿಶಂಕರ ಶಿವಾಚಾರ್ಯರು, ಹಿರೇಪಡಸಲಗಿ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯರು, ಮುತ್ತಿನಕಂತಿ ಹಿರೇಮಠದ ಪಂಡಿತಾರಾಧ್ಯ ಶಿವಲಿಂಗ ಶಿವಾಚಾರ್ಯರು, ಕೊಣ್ಣೂರಿನ ಹೊರಗಿನಮಠದ ಡಾ.ವಿಶ್ವಪ್ರಭುದೇವರು, ಬೆಂಗಳೂರಿನ ಖ್ಯಾತ ಸಾಹಿತಿ, ಚಲನಚಿತ್ರ ಪುರಸ್ಕೃತ ಡಾ.ರಾಜಶೇಖರ ಮಠಪತಿ (ರಾಗಂ), ಹಿರಿಯವೈದ್ಯ ಡಾ.ಕೆ.ಐ.ಗುರುಮಠ, ಶಿವಪುತ್ರಯ್ಯ ಸಿದಗಿರಿಮಠ, ಆರ್.ಎಸ್.ಅಕ್ಕಿ, ಅಶೋಕ ಗಾವಿ, ಜಿ.ಕೆ.ಮಠದ, ಡಾ.ಮಲ್ಲು ಮಠ, ಬಸಲಿಂಗಯ್ಯ ಬೃಂಗಿಮಠ, ಶಂಕ್ರಯ್ಯ ಕರಡಿಮಠ, ಶಂಕ್ರಯ್ಯ ಕರಡಿಮಠ, ಕಾಡಯ್ಯ ಹಿರೇಮಠ, ಎಂ.ಕೆ.ಹಿಟ್ಟಿನಮಠ, ಬಸವರಾಜ ಕಡ್ಡಿ ಸಹಿತ ಹಲವರು ಇದ್ದರು.

## ಡಾ.ಪುನೀತ್ ರಾಜಕುಮಾರ ಸೇವಾ ಪ್ರಶಸ್ತಿಗೆ ಶಿವು ಜೋಳದ ಭಾಜನ



ಬೈಲಹೊಂಗಲ: ತಾಲೂಕಿನ ಮೇಕಲಮರಡಿ ಗ್ರಾಮದಲ್ಲಿ ಜಯ ಕರ್ನಾಟಕ ಸಂಘಟನೆ ವತಿಯಿಂದ 13 ನೇ ವರ್ಷದ ಅದ್ದೂರಿ ಡಾ.ಪುನೀತ್ ರಾಜಕುಮಾರ ಸೇವಾ ಪ್ರಶಸ್ತಿ ವಿತರಣಾ ಹಾಗೂ ರಸಮಂಜರಿ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಈಚೆಗೆ ಜರುಗಿದವು.

ಪ್ರಸಕ್ತ ಬಾರಿ ನೇರ, ನಿಷ್ಠುರ ದಿಟ್ಟ, ಪಾರದರ್ಶಕ ವರದಿಗಳ ಮೂಲಕ ಭ್ರಷ್ಟರ ವಿರುದ್ಧ ಈ ಭಾಗದಲ್ಲಿ ನಿರಂತರ ಗುಡುಗುತ್ತಿರುವ ಹಾಗೂ ಅನೇಕ ಸಾಮಾಜಿಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿ ಸಮಾಜದ ಸ್ವಾಸ್ಥ್ಯ ಕಾಪಾಡುತ್ತಿರುವ ಕಾರಣ ಬೈಲಹೊಂಗಲ ತಾಲೂಕಿನ ವಿಶ್ವ ದರ್ಶನ ಕನ್ನಡ ದಿನ ಪತ್ರಿಕೆಯ ಯುವ ವರದಿಗಾರ ಶಿವು ಜೋಳದ ಅವರ ಪತ್ರಿಕಾ ಮಾಧ್ಯಮ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಪ್ರತಿಷ್ಠಿತ ಡಾ.ಪುನೀತ್ ರಾಜಕುಮಾರ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.
ಈ ಸಂದರ್ಭದಲ್ಲಿ ಸಂಘಟಣೆಯ ಶಾಖಾ ಅಧ್ಯಕ್ಷರು, ಪದಾಧಿಕಾರಿಗಳು, ಗಣ್ಯರು,
ಅಥಿತಿಗಳು, ಅಭಿಮಾನಿಗಳು ಉಪಸ್ಥಿತ–ರಿದ್ದರು.

## ಪತ್ರಕರ್ತ ಮಹಾಂತೇಶ ರಾಜಗೋಳಿಗೆ ಕರುನಾಡು ರತ್ನ ಪ್ರಶಸ್ತಿ ಪ್ರಧಾನ



ಬೈಲಹೊಂಗಲ– ಧಾರವಾಡ ಜಿಲ್ಲೆಯ ಕುಂದಗೋಳದ ಚಿರಾಯು ಕನ್ನಡ ಡಿಜಿಟಲ್ ಮಿಡಿಯಾ ಹಾಗೂ ಶ್ರೀನಿಧಿ ಪೌಂಡೇಶನ್ ಇವರ ಸಹಯೋಗದಲ್ಲಿ ಹೊರನಾಡು ಗೋವಾ ರಾಜ್ಯದ ವಾಸ್ಕೋದ ರವೀಂದ್ರ ಕಲಾಕ್ಷೇತ್ರದಲ್ಲಿ ರವಿವಾರ ಹಮ್ಮಿಕೊಂಡ ರಾಷ್ಟ್ರ ಮಟ್ಟದ ಪ್ರಥ–'ಮ ಕನ್ನಡ ಸಾಹಿತ್ಯ ಸಮ್ಮೇಳನ ಹಾಗೂ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಪಟ್ಟಣದ ಹಿರಿಯ ಪತ್ರಕರ್ತ, ಕನ್ನಡ ಜಾನಪದ ಪರಿಷತ್ ತಾಲೂಕಾ ಮಾಧ್ಯಮ ವಕ್ತಾರ ಹಾಗೂ ಶಾಸಕರ ಮತಕ್ಷೇತ್ರ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ನಂ 4 ರ ಎಸ್‌ಡಿಎಂಸಿ ಸದಸ್ಯ ಮಹಾಂತೇಶ ಮಲ್ಲಪ್ಪ ರಾಜಗೋಳಿ ಅವರಿಗೆ ಕರುನಾಡು ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಂಘಟಣೆಯ ಗೌರವಾಧ್ಯಕ್ಷ ಡಾ. ಮಂಜುನಾಥ ಶಿವಕ್ಕನವರ, ಅಧ್ಯಕ್ಷರಾದ ಜ್ಯೋತಿ ಶಿವಕ್ಕನವರ ಹಾಗೂ ಸಮ್ಮೇಳನಾಧ್ಯಕ್ಷೆ ಮುಂಡಗೋಡದ ಕನ್ನಡ ಉಪನ್ಯಾಸಕಿ ಡಾ.ನಾಗರತ್ನ ಶೆಟ್ಟಿ, ಹೊಳೆನರಸೀಪುರ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಆರ್.ಬಿ.ಪುಟ್ಟೇಗೌಡಾ ಕೃಷಿಕ ಸಮಾಜದ ರಾಜ್ಯ ಪ್ರಧಾನ ಕಾರ್ಯದರ್ಶಿ ಪರಮಾನಂದ ಒಡೆಯರ, ನವದೆಹಲಿಯ ಕೃಷಿಕ ಸಮಾಜದ ರಾಜ್ಯಾಧ್ಯಕ್ಷೆ ಮಾಣಿಕ್ಯ ಚಿಲ್ಲೂರು ಕಿರುತೆರೆ ಕಲಾವಿದೆ ಮಹೇಶ್ವರಿ ಪಟೇಲ್ ಮುಂತಾದವರು ಉಪಸ್ಥಿತರಿದ್ದರು.

****

# ಮಕ್ಕಳಲ್ಲಿ ಸಾಹಿತ್ಯ ಅಭಿರುಚಿ ಅಗತ್ಯ



**ರಬಕವಿ–ಬನಹಟ್ಟಿ,** ಮಕ್ಕಳಿಗೆ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವುದು ಒಂದು ವಿಶೇಷ ಅನುಭವ. ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶನ ಮಾಡಲು ಸೂಕ್ತವಾದ ವೇದಿಕೆ. ಅದರಲ್ಲೂ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿಕೊಳ್ಳುತ್ತಿರುವುದು ಅವರಲ್ಲಿರುವ ಪ್ರತಿಭೆಗೆ ಸಾಕ್ಷಿಯಾಗಿದೆ. ಪ್ರತಿಭಾವಂತ ಮಕ್ಕಳನ್ನು ಶಿಕ್ಷಕರು ಮತ್ತು ತಂದೆ ತಾಯಿಗಳು ಪ್ರೋತ್ಸಾಹಿಸಬೇಕು ಎಂದು ರಬಕವಿಯ ಸಾಮಾಜಿಕ ಕಾರ್ಯಕರ್ತೆ ಡಾ. ಅನಂತಮತಿ ಎಂಡೋಳ್ಳಿ ತಿಳಿಸಿದರು.

ಅವರು ಗುರುವಾರ ರಬಕವಿಯಲ್ಲಿ ವಿವಿಧ ಮಹಿಳಾ ಸಂಘಟನೆಗಳು ಮತ್ತು ಗೆಳೆಯರ ಬಳದವರು ಹಮ್ಮಿಕೊಂಡ ತಾಲ್ಲೂಕು ಎರಡನೆಯ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆಯಾಗಿ ಆಯ್ಕೆಯಾದ ಸುಹಾನಿ ಮುತ್ತೂರ ಅವರ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸುಹಾನಿ ಮುತ್ತೂರ, ಸರ್ವಾಧ್ಯಕ್ಷೆಯಾಗಿ ಆಯ್ಕೆಯಾಗಿರುವುದು ಸಂತಸ ತಂದಿದೆ. ಗ್ರಾಮೀಣ ಪ್ರದೇಶದಲ್ಲಿರುವ ಮಕ್ಕಳಿಗೂ ಸೂಕ್ತ ಅವಕಾಶಗಳು ದೊರೆತರೆ ಉತ್ತಮ ಸಾಧನೆಯನ್ನು ಮಾಡಬಲ್ಲರು. ಸರ್ವಾಧ್ಯಕ್ಷತೆ ಬಹಳಷ್ಟು ಜವಾಬ್ದಾ–ರಿಯನ್ನು ನೀಡಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಧನೆ ಮಾಡುವುದಾಗಿ ತಿಳಿಸಿದರು.

ಪರಿಷತ್ತಿನ ಪದಾಧಿಕಾರಿ ಕಿರಣ ಆಳಗಿ ಮಾತನಾಡಿ, ಸಮ್ಮೇಳನದ ಯಶಸ್ವಿಗೆ ಪ್ರತಿಯೊಬ್ಬರ ಸಹಕಾರ ಮುಖ್ಯ ಎಂದರು.

ಈ ಸಂದರ್ಭದಲ್ಲಿ ಮಮತಾ ಕೊಠಾವಳೆ, ಶ್ರೀಯಾ ಎಳೆಮೇಲಿ, ಸ್ವರೂಪಾ ಕೋಟಿ, ಗಿರಿಜಾ ಬುರ್ಲಿ, ರಾಮಚಂದ್ರ ಪತ್ತಾರ, ಮಹಾದೇವಪ್ಪ ಮುತ್ತೂರ, ಶಿಲ್ಪಾ ಮುತ್ತೂರ, ಗಿರೀಶ ಮುತ್ತೂರ, ವಿಶ್ವಜ ಕಾಡದೇವರ ಸೇ–ರಿದಂತೆ ಅನೇಕರು ಇದ್ದರು

# ನನಗೆ 50 ಕೋಟಿ ಆಫರ್ ಬಂದಿಲ್ಲ.: ಶಾಸಕ ರಾಜು ಕಾಗೆ



**ಮೋಳೆ** :–ಬಿಜೆಪಿಯ 50 ಕೋಟಿ ಆಫರ್ ನನಗೆ ಬಂದಿಲ್ಲ, ಬಿಜೆಪಿಯವರು ಈ ಸಂಬಂಧ ನನ್ನನ್ನು ಸಂಪರ್ಕಿಸಿಲ್ಲ ಎಂದು ಕಾಗವಾಡ ಶಾಸಕ ರಾಜು ಕಾಗೆ ಸ್ಪಷ್ಟಪಡಿಸಿದರು. ಅವರು ಕಾಗವಾಡ ಮತಕ್ಷೇತ್ರದ ಪಾಥ–'ರ್ನಳ್ಳಿ, ಚಮಕೇರಿ, ಬೇಡರಹಟ್ಟಿ, ಗುಂಡೇವಾಡಿ, ಬಳ್ಳಿಗೇರಿ ಗ್ರಾಮಗಳಲ್ಲಿ ರಸ್ತೆ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಿದ್ದರು.

ವಿರೋಧ ಪಕ್ಷದವರು ರಾಜಕೀಯ ದುರುದ್ದೇಶಕ್ಕಾಗಿ ಸರಕಾರದ ಮೇಲೆ ಸುಳ್ಳು ಆರೋಪ ಮಾಡಿ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದು, ಜನ ವಿರೋಧ ಪಕ್ಷದವರ ಸುಳ್ಳು ಆರೋಪಗಳಿಗೆ ಸೊಪ್ಪು ಹಾಕುವುದಿಲ್ಲ ಎಂದ ಅವರು ಬೆಳಗಾವಿಯ ಚಳಿಗಾಲದ ಅಧಿವೇಶನ ಸಿಎಮ್ ಸಿದ್ಧರಾಮಯ್ಯನವರ ಕೊನೆಯ ಅಧಿವೇಶನ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹೇಳಿದ್ದಕ್ಕೆ ಪ್ರತಿಕ್ರಿಯೆ ನೀಡಿದ ರಾಜು ಕಾಗೆ ವಿರೋಧ ಪಕ್ಷದವರು ಇದನ್ನು ಬಿಟ್ಟು ಬೇರೆ ಇನ್ನೇನು ಹೇಳಲು ಸಾಧ್ಯ ಎಂದು ಪ್ರಶ್ನಿಸಿದರು.

ಚಳಿಗಾಲದ ಅಧಿವೇಶನದ ಒಳಗಾಗಿಯೇ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆಯನ್ನು ಎರಡು ಮೋಟರ್ ಗಳ ಮೂಲಕ ಪ್ರಾಯೋಗಿಕವಾಗಿ ಪ್ರಾರಂಭಿಸಲಾಗುವುದು ಮತ್ತು ಮುಂಬರುವ ಜೂನ್ ತಿಂಗಳಲ್ಲಿಯೇ ಈ ಯೋಜನೆಯ ನಾಲ್ಕೂ ಮೋಟಾರಗಳ ಮೂಲಕ ಸಂಪೂರ್ಣವಾಗಿ ಪ್ರಾರಂಭಿಸಲಾಗುವುದು ಎಂದು ಹೇಳಿದರು.

ಸಕ್ಕರೆ ಕಾರಖಾನೆಯ ಮಾಲಿಕರು ರೈತರಿಗೆ ತೂಕದಲ್ಲಿ ಮೋಸ ಮಾಡಲಾಗುತ್ತಿದೆ ಈ ಸಂಬಂಧ ಕಳೆದ ವರ್ಷ ಸಕ್ಕರೆ ಸಚಿವ ಶಿವಾನಂದ ಪಾಟೀಲ ಸಕ್ಕರೆ ಕಾರಖಾನೆಗಳ ಹೊರಗೆ ತೂಕದ ಮಶೀನ್ ಅಳವಡಿಸುವುದಾಗಿ ಹೇಳಿದ್ದರು ಆದರೆ ಈ ವರೆಗೂ ತೂಕದ ಮಶೀನ್ ಅಳವಡಿಸಿಲ್ಲ ಎಂದ ಅವರು ಈಗಿನ್ನೂ ಕಬ್ಬು ನು–ರಿಸುವ ಹಂಗಾಮು ಪ್ರಾರಂಭಗೊಂಡಿದ್ದು, ತಕ್ಷಣ ಎಲ್ಲ ಸಕ್ಕರೆ ಕಾರಖಾನೆಗಳ ಹೊರಗೆ ಸರಕಾರದಿಂದ ತೂಕದ ಮಶೀನಗಳನ್ನು ಅಳವಡಿಸಬೇಕು ಎಂದು ರಾಜು ಕಾಗೆ ಆಗ್ರಹಿಸಿದರು. ಕಾಗವಾಡ ಮತಕ್ಷೇತ್ರದ ಪ್ರತಿ ಗ್ರಾಮಗಳಿಗೆ ಬೇಡಿಕೆ ಅನುಸಾರ 12.5 ಕೋಟಿ ಅನುದಾನದಲ್ಲಿ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಮತ್ತು 72 ಗ್ರಾಮಗಳಲ್ಲಿ ಒಂದೊಂದು ಸಮುದಾಯ ಭವನಗಳು ಮಂಜೂರು ಅನುಷ್ಠಾನದ ಹಂತದಲ್ಲಿವೆ ಎಂದ ಅವರು ಕಾಗವಾಡ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರಕಾರ 25 ಕೋಟಿ ವಿಶೇಷ ಅನುದಾನ ಮಂಜೂರು ಮಾಡಿದೆ ಎಂದರು. ಧುರೀಣರಾದ ಘೂಳಪ್ಪ ಜತ್ತಿ, ಜಿಲ್ಲಾ ಪಂಚಾಯತ್ ಇಂಜನೀಯರ ವೀರಣ್ಣ ವಾಲಿ, ಶಿವಾನಂದ ಗೊಲಭಾವಿ, ಸಿದರಾಯ ತೇಲಿ, ಶರೀಫ್ ಮುಲ್ಲಾ, ರಫಿಕ್ ಪಟೇಲ್, ಚಂದ್ರಕಾಂತ ಇಮ್ಮಡಿ,ಶಿವು ಗುಡ್ಡಾಪುರ. ಬಸವರಾಜ ನಾವಿ, ಬಸವರಾಜ ಪಾಟೀಲ, ಗುತ್ತಿಗೆದಾರರಾದ ದಿಲೀಪ ಕಾಂಬಳೆ. ಶಂಕರ ಮುಜಗೋಣಿ, ಮಲ್ಲಿಕಾರ್ಜುನ ದಳವಾಯಿ, ಈರಪ್ಪ ಶಿರಗುರ, ಪಿಂಟು ಮಗದುಮ್, ಶಿವಾನಂದ ಹುಚ್ಚಗೌಡರ, ವಿನಯ ಇಮ್ಮಡಿ ಸೇರಿದಂತೆ ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಬಡವರ ಅನ್ನ ಕಸಿದುಕೊಂಡ ಕಾಂಗ್ರೇಸ್ ಸರ್ಕಾರ–ಆರ್‌ಎಸ್‌ಪಿ



**ತಾಳಿಕೋಟೆ,** ಕೇಂದ್ರ ಸರ್ಕಾರವು ಗರಿಬ್ ಕಲ್ಯಾಣ ಯೋಜನೆಯಡಿಯಲ್ಲಿ ಬಡವರಿಗೆ ನೀಡುತ್ತಿರುವ ಅಕ್ಕಿ(ಅನ್ನ) ವನ್ನು ಕಾಂಗ್ರೆಸ್ ಸರ್ಕಾರ ಕಿತ್ತುಕೊಳ್ಳುವದರೊಂದಿಗೆ ಬಡವರ ಹೊಟ್ಟೆಗೆ ಹೋಡೆಯುವಂತಹ ಕಾರ್ಯದಲ್ಲಿ ತೊಡಗಿಕೊಂಡಿದೆ ಎಂದು ಭಾರತೀಯ ಜನತಾ ಪಕ್ಷದ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ(ಕೂಚಬಾಳ) ಅವರು ಹೇಳಿದರು.

ಗುರುವಾರರಂದು ಪಟ್ಟಣದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ನಮ್ಮ ದೇಶದ ಪ್ರಧಾನಿ ನರೇಂದ್ರ ಮೋದಿಜಿ ಅವರು ಈಗಾಗಲೇ ಕಳೆದ 11 ವರ್ಷಗಳಿಂದ ದೇಶದಲ್ಲಿಯ ಎಲ್ಲ ಬಿಪಿಎಲ್ ಕಾರ್ಡ ಹೊಂದಿದ ಬಡವ–ರಿಗೆ ಅಕ್ಕಿ ನೀಡುವಂತಹ ಕಾರ್ಯ ಮಾಡುತ್ತಾ ಬಂದಿದ್ದಾರೆ ಅದರ ಜೊತೆಗೆ ಬಡವರಿಗೆ ಆರೋಗ್ಯ ಸಂಬಂದಿತ ಸಮಸ್ಯೆಗಳಿಗಾಗಿ ಆಯುಷ್ಮಾನ ಭಾರತ ಅಲ್ಲದೇ ಇನ್ನಿತರ ಸೌಲಭ್ಯಗಳನ್ನು ಒದಗಿಸುತ್ತಾ ಬಂದಿದ್ದಾರೆ ಆದರೆ ಈಗ ರಾಜ್ಯದ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೇಸ್ ಸರ್ಕಾರ ರಾಜ್ಯದಲ್ಲಿಯ 16 ಲಕ್ಷ ಕ್ಕೂ ಅಧಿಕ ಬಿಪಿಎಲ್ ಕಾರ್ಡುಗಳನ್ನು ರದ್ದುಗೊಳಿಸಿ ರಾಜ್ಯದ ಜನರಿಗೆ ಸಿಗುತ್ತಿರುವ ಸರ್ಕಾರದ ಸೌಲಭ್ಯಗಳನ್ನು ಕಸಿದುಕೊಳ್ಳುವಂತಹ ಕಾರ್ಯ ಮಾಡಿದೆ ಎಂದು ಆರೋಪಿಸಿದರು.

ಕಳೆದ ಒಂದೂವರೆ ವರ್ಷಗಳ ಹಿಂದೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷ ಪಂಚಗ್ಯಾರೆಂಟಿ ಆಶ್ವಾಸನೆ ನೀಡಿ ಜನರನ್ನು ಯಾಮಾರಿಸಿ ಮತಗಳನ್ನು ಪಡೆದು ಅಧಿಕಾರಕ್ಕೆ ಬಂದಿದೆ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದ ಒಂದೂವರೆ ವರ್ಷಗಳ ಅವಧಿಯಲ್ಲಿ ಜನರ ಬಧುಕನ್ನು ದುಸ್ಥಿರಕ್ಕೆ ತಂದು ನಿಲ್ಲಿಸಿದೆ. ಇದಕ್ಕೆ ಸಾಕಷ್ಟು ಉದಾಹರಣೆಗಳಿವೆ ಈಗ ಹೊಸದಾಗಿ ಬಿಪಿಎಲ್ ಕಾರ್ಡ ರದ್ದು ಮಾಡುವದರೊಂದಿಗೆ ಬಡವ–ರಿಗೆ ಸಿಗುವ ಸೌಲಭ್ಯಗಳನ್ನು ಕಸಿದುಕೊಳ್ಳುವಂತಹ ಕೆಲಸ ತೊಡಗಿಕೊಂಡಿದೆ ಇದರಿಂದ ರಾಜ್ಯದ ಜನರು ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೇಸ್ ಸರ್ಕಾರಕ್ಕೆ ಹಿಡಿ ಶಾಪಹಾಕಲಿಕ್ಕೆ ಹತ್ತಿದ್ದಾರೆ ಕಾಂಗ್ರೇಸ್ ಸರ್ಕಾರ ನೀಡಿದ ಬರವಸೆಯಂತೆ ಪಂಚಗ್ಯಾರೆಂಟಿ ಯೋಜನೆಗಳು ಯಾರಿಗೂ ಸರಿಯಾಗಿ ಮುಟ್ಟಿಲ್ಲಾ ಗ್ಯಾರೆಂಟಿ ಹೆಸ–ರಿನ ಮೇಲೆ ಇಡೀ ರಾಜ್ಯವನ್ನು ಲೂಟಿ ಮಾಡುವತ್ತಾ ಎಲ್ಲರೂ ಸಾಗಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ಹಿಂದೆಂದೂ ಕಾಣದಂತಹ ಬ್ರಷ್ಟಾಚಾರದಲ್ಲಿ ಕಾಂಗ್ರೇಸ್ ಸರ್ಕಾರವು ತೊಡಗಿಕೊಂಡಿದೆ ಈ ಬ್ರಷ್ಟಾಚಾರದಿಂದ ಕರ್ನಾಟಕ ಸರ್ಕಾರದ ಖಜಾನೆ ಸಂಪೂರ್ಣ ಖಾಲಿಯಾಗಿ ಹೋಗಿದೆ ಬಡವರಿಗೆ ಅಕ್ಕಿ ಕೊಡಲೂ ಸಹ ಸರ್ಕಾರದಲ್ಲಿ ದುಡಿಲ್ಲಾ ಹೀಗಾಗಿ ಈಗ ಹೊಸ ನಾಟಕ ಶುರು ಮಾಡಿದ್ದಾರೆ ಬಿಪಿಎಲ್ ಕಾರ್ಡ ರದ್ದುಗೊಳಿಸಿ ಅದರಿಂದ ಸರ್ಕಾರದ ಆರ್ಥಿಕ ಹೊರೆ ನೀಗಿಸಿಕೊಳ್ಳಲು ರಾಜ್ಯ ಸರ್ಕಾರ ತೊಡಗಿಕೊಂಡಿದೆ ಎಂದರು.

ಚುನಾವಣೆ ಸಂದರ್ಬದಲ್ಲಿ ಒಂದು ಕಡೆ ವಿದ್ಯುತ್ ಪ್ರೀ ಅಂದರು ವಿದ್ಯುತ್ ದರ ದುಪ್ಪಟ್ಟು ಮಾಡಿದ್ದಾರೆ, ಬಸ್ ಪ್ರೀ ಎಂದು ಹೇಳಿದರು ಬಸ್ ದರ ದುಪ್ಪಟ್ಟು ಮಾಡಿದರು, ಇವತ್ತು ಬಾಂಡದಿಂದ ಹಿಡಿದು ಉತ್ತಾರೆ ಅಲ್ಲದೇ ಸತ್ತವರ ಮರಣ ಉತ್ತಾರೆ ವರೆಗೆ ದರ ಏರಿಸುವಂತಹ ಕೆಲಸ ಮಾಡಿದ್ದಾರೆ ಹಾಲಿದರ ಏರಿಕೆ, ಡಿಸೇಲ್, ಪೆಟ್ರೋಲ್ ಅಲ್ಲದೇ ಮದ್ಯಪಾನದ ದರ ಏರಿಕೆಯಾಗಿದೆ ಇಷ್ಟೇಲ್ಲಾ ಏರಿಕೆ ಮಾಡಿದರೂ ಕೂಡಾ ಸರ್ಕಾರದ ಖಜಾನೆಯ ಖಾಲಿ ಇದೆ ದುಡ್ಡು ಎಲ್ಲಿ ಹೋಯಿತು ಎಂಬುದು ಯಾ–ರಿಗೂ ತಿಳಿಯದಂತೆ ಲೂಟಿಯಲ್ಲಿ ತೊಡಗಿಕೊಂಡಿದ್ದಾರೆ ಇದನ್ನು ಜನರ ಮುಂದೆ ಸಿದ್ದರಾಮಯ್ಯನವರು ಸ್ಪಷ್ಟ ಪಡಿಸಬೇಕೆಂದು ಆಗ್ರಹಿಸಿದ ಅವರು ಇಂತಹ ಕೆಟ್ಟ ಸರ್ಕಾರ ಕರ್ನಾಟಕ ರಾಜ್ಯದಲ್ಲಿ ಎಂದೂ ಬಂದಿದಿಲ್ಲಾ ಅಂತಹ ಸರ್ಕಾರ ರಾಜ್ಯದಲ್ಲಿ ನಿರ್ಮಾಣವಾಗಿದೆ ರಾಜ್ಯದಲ್ಲಿ ವಕ್ಫ ಅದಾಲತ ಮೂಲಕ ರೈತರ ಜಮೀನಿನಲ್ಲಿ ವಕ್ಫ ಹೆಸರು ಕೂಡಿಸಿ ಅವರ ಜಮೀನು ಕಸಿದುಕೊಳ್ಳುವಂತಹ ಕೆಲಸ ಮಾಡಿ ರೈತರನ್ನು ಸಂಕಷ್ಟದಲ್ಲಿ ದೂಕುವಂತಹ ಕೆಲಸ ಮಾಡಿದ್ದಾರೆ ಈ ಕಾಂಗ್ರೇಸ್ ಸರ್ಕಾರ ಯಾವಾಗ ಹೋಗಿ–ತ್ತು ಎಂದು ಜನರು ಹಿಡಿ ಶಾಪ ಹಾಕಲಿಕ್ಕೆ ಹತ್ತಿದ್ದಾರೆ. ಬಡವರನ್ನು ಬೀದಿಗೆ ತಳ್ಳುವಂತಹ ಕೆಲಸದಲ್ಲಿ ತೊಡಗಿಕೊಂಡಿದ್ದರಿಂದ ರಾಜ್ಯದ ಜನರು ಬೇಸತ್ತು ಹೋಗಿದ್ದು ರಾಜ್ಯದ ಜನರು ಬೀದಿಗೆ ಬಂದು ಅಟ್ಟಾಡಿಸೋ ಮುಂಚೆ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೇಸ್ ಸರ್ಕಾರವು ಸುದಾರಿಸಿಕೊಳ್ಳುವದು ಅಗತ್ಯವಿದೆ ಎಂದರು.

ಈ ಸಮಯದಲ್ಲಿ ಮುಖಂಡರುಗಳಾದ ರಾಘವೇಂದ್ರ ಚವ್ಹಾಣ, ಮಂಜುನಾಥ ಶೆಟ್ಟಿ, ಸುರೇಶ ಹಜೇರಿ, ರಾಮು ಜಗತಾಪ, ರಾಘವೇಂದ್ರ ಮಾನೆ, ವಿಠ್ಠಲ ಮೋಹಿತೆ, ನಾಗರಾಜ ಬಳಿಗಾರ, ಮೊದಲಾದವರು ಇದ್ದರು.

ಸಂ:ವಿಹಿನಾಸಇ/ಜಿವಿಕಅ/ಕ.ಲೇ.ಸಾ./ಮ.ಟೆ.ಪ್ರ/2024–25 ದಿನಾಂಕ:21–11–2024

**ಟೆಂಡರ ಪ್ರಕಟಣೆ**

ಕಛೇರಿ ಲೇಖನ ಸಾಮಗ್ರಿಗಳು, ಸ್ಟೇಷನರಿ ಮತ್ತು ಪ್ರಿಂಟರ್‌ಗಳಿಗೆ ಬೇಕಾಗುವ ಟೋನರ್/ಕಾರ್ಟ್ರಿಡ್ಜ್ ಖರೀದಿಸಲು ಸ್ಥಳೀಯ ಸರಬರಾಜುದಾರರು /ಮಾರಾಟಗಾರರಿಂದ ಆಹ್ವಾನಿಸಲಾದ ಮ್ಯಾನುವಲ್ ಟೆಂಡರ.

ಕ್ರ. ಸಂ:1:ಅಂದಾಜು ಟೆಂಡರ ಮೊತ್ತ:ರೂ. 1.00 ಲಕ್ಷ, ಕ್ರ.ಸಂ:2:ಇ. ಎಂ. ಡಿ. ಮೊತ್ತ:ರೂ.2,500/–, ಕ್ರ.ಸಂ:3:ಟೆಂಡರ ಅರ್ಜಿ ನಮೂನೆ ಪಡೆಯಲು ಅಂತಿಮ ದಿನಾಂಕ:29–11–2024, ಕ್ರ.ಸಂ:4:ಟೆಂಡರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ:30–11–2024 ಸಮಯ:ಸಂಜೆ 5–00 ಗಂಟೆ, ಕ್ರ.ಸಂ:5:ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ: 02–12–2024 ಸಮಯ:ಮಧ್ಯಾಹ್ನ 3–00 ಗಂಟೆ, ಕ್ರ.ಸಂ:6:ಆರ್ಥಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ:03–10–2024 ಸಮಯ: ಮಧ್ಯಾಹ್ನ 03–00 ಗಂಟೆ, ಕ್ರ.ಸಂ:7:ಟೆಂಡರ ಅರ್ಜಿ ಶುಲ್ಕ (ಡಿ.ಡಿ. ರೂಪದಲ್ಲಿ):ರೂ. 500–00.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ಶಿವಾಜಿ ನಗರ ಬೆಳಗಾವಿ. (0831– 2476096) ಇವರನ್ನು ಸಂಪರ್ಕಿಸಬಹುದಾಗಿದೆ.

**ಸಹಿ/–ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಬೆಳಗಾವಿ.**

DIPR/BGM/RO-NO-1177/KSMCA/2024-25

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 242, Postal Reg No. PMG/KA/NK/BM/135/22-24 / POST AT Vantamury Colony Post Office